ಬೆಂಗಳೂರು ಸಂಪುಟ: 16 ಸಂಚಿಕೆ: 26 ಪುಟ: 06 ಮಂಗಳವಾರ 17-12-2024

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh

**ನಾವೂ ಈಗ ಡಿಜಿಟಲೀಕರಣಗೊಂಡಿದ್ದೇವೆ...**

ಪ್ರಿಯ ಓದುಗರೇ.....

ತಮ್ಮೆಲ್ಲರ ಒತ್ತಾಸೆಯ ಮೇರೆಗೆ ನಿಮ್ಮ 'ಮುಸ್ಸಂಜೆ' ಸಂಜೆ ದಿನ ಪತ್ರಿಕೆ ಈಗ ಡಿಜಿಟಲೀಕರಣಗೊಂಡಿದೆ. ಹದಿನೈದು ವಸಂತಗಳನ್ನು ಯಶಸ್ವಿಯಾಗಿ ಪೂರೈಸಿ 16ನೇ ವಸಂತಕ್ಕೆ ಕಾಲಿಟ್ಟ ಈ ಸುಸಂದರ್ಭದಲ್ಲಿ ರಾಜ್ಯದಲ್ಲೇ ಅಲ್ಲದೇ ದೇಶದ ವಿವಿಧೆಡೆಗಳಿಂದ ಸಹಕಾರ ದೊರೆತ ಹಿನ್ನೆಲೆಯಲ್ಲಿ ಪತ್ರಿಕೆಯನ್ನು ಡಿಜಿಟಲೀಕರಣಗೊಳಿಸಿ ನೂತನ ವೆಬ್‌ಸೈಟ್ ಲಾಂಚ್ ಮಾಡುವ ಮೂಲಕ onlineನಲ್ಲಿ ಪತ್ರಿಕೆ ವೀಕ್ಷಿಸಲು ಅವಕಾಶ ಕಲ್ಪಿಸಿದ್ದೇವೆ. ಈಗ ಪತ್ರಿಕೆಯನ್ನು ನೈಜ ಸುದ್ದಿಯೊಂದಿಗೆ ಹೊಸ ರೂಪದಲ್ಲಿ ನಿಮ್ಮ ಮುಂದಿಡುವ ಪ್ರಯತ್ನ ಮಾಡಿದ್ದೇವೆ. ನಮ್ಮ ಈ ಪ್ರಯತ್ನಕ್ಕೆ ಓದುಗರು, ಚಂದಾದಾರರೂ, ಹಾಗೂ ಜಾಹೀರಾತುದಾರರಾದ ತಮ್ಮ ಪ್ರೋತ್ಸಾಹವನ್ನು ಎಂದಿನಂತೆ ನಿರೀಕ್ಷಿಸುತ್ತೇವೆ...

- ಇಂತಿ ಸಂಪಾದಕ

**ಅಧಿವೇಶನ: ಆಡಳಿತ ಪಕ್ಷದ ಸಾಲಿನ ಆಸನಗಳು ಖಾಲಿ... ಖಾಲಿ...**

# ಸಚಿವರ ನಿರಾಸಕ್ತಿ

## ಸರ್ಕಾರವನ್ನು ತೀವ್ರ ತರಾಟೆಗೆ ತೆಗೆದುಕೊಂಡ ವಿಪಕ್ಷ ನಾಯಕ ಆರ್. ಅಶೋಕ್

**ಬೆಳಗಾವಿ:** ಬೆಳಗಾವಿಯಲ್ಲಿ ನಡೆಯುತ್ತಿರುವ ಅಧಿವೇಶನದಲ್ಲಿ ಆಡಳಿತ ಪಕ್ಷದ ಸಚಿವರುಗಳು ಭಾಗಿಯಾಗದೇ ಇರುವುದಕ್ಕೆ ವಿರೋಧ ಪಕ್ಷಗಳಿಂದ ಇಂದು ತೀವ್ರ ಆಕ್ರೋಶ ವ್ಯಕ್ತವಾಯಿತು.

ಇಂದು ಬೆಳಿಗ್ಗೆ ವಿಧಾನಸಭೆ ಸಮಾವೇಶಗೊಂಡಾಗ ಸಚಿವರ ಕುರ್ಚಿಗಳೆಲ್ಲ ಖಾಲಿ ಇದ್ದವು. ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರನ್ನು ಹೊರತು ಪಡಿಸಿದರೆ ಉಳಿದಂತೆ ಎಲ್ಲಾ ಕುರ್ಚಿಗಳು ಖಾಲಿ ಇದ್ದವು. ಇದಕ್ಕೆ ಪ್ರತಿಪಕ್ಷ ಬಿಜೆಪಿ ಆಕ್ಷೇಪ ವ್ಯಕ್ತಪಡಿಸಿತು.

ಆಡಳಿತ ಪಕ್ಷಕ್ಕೆ ರಾಜ್ಯದ ಸಮಸ್ಯೆಗಳ ಬಗ್ಗೆ ಗಮನ ಇಲ್ಲ. ಸಮಸ್ಯೆಗಳ ಬಗ್ಗೆ ಚರ್ಚೆ ಮಾಡುವ ವೇಳೆ ಯಾರೊಬ್ಬರೂ ಇಲ್ಲದಿದ್ದರೆ ಹೇಗೆ? ಜನರ ಸಮಸ್ಯೆಗಳಿಗೆ ಪರಿಹಾರ ಕೊಡುವವರು ಯಾರು? ನಮ್ಮ ಪ್ರಶ್ನೆಗಳಿಗೆ ಉತ್ತರ ಕೊಡುವವರು ಸದನದಲ್ಲಿ ಇಲ್ಲ, ನಾಮಕಾವಸ್ಥೆಗಷ್ಟೇ ಸರ್ಕಾರ ಸದನ ನಡೆಸುತ್ತಿದೆ ಎಂದು ಅಧಿವೇಶನದಲ್ಲಿ ಪ್ರತಿಪಕ್ಷನಾಯಕ ಆರ್.ಅಶೋಕ್ ಸರ್ಕಾರವನ್ನು ತೀವ್ರ ತರಾಟೆಗೆ ತೆಗೆದುಕೊಂಡರು.

ಅಧಿವೇಶನ ಸಮಾವೇಶಗೊಂಡು ಗಂಟೆಗಳೇ ಕಳೆದರೂ ಆಡಳಿತ ಪಕ್ಷದ ಸಾಲಿನ ಕುರ್ಚಿಗಳು ಖಾಲಿ ಇದ್ದವು. ಇದರಿಂದ ಅಸಮಾಧಾನಗೊಂಡ



ಆರ್. ಅಶೋಕಾದಿಯಾಗಿ ಪ್ರತಿಪಕ್ಷದ ನಾಯಕರು ಸರ್ಕಾರದ ವಿರುದ್ಧ ಹರಿಹಾಯ್ದರು. ಇದಕ್ಕೆ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ.ಸುರೇಶ್ ಬಾಬು ದನಿಗೂಡಿಸಿದರು. ಬಿಜೆಪಿ ಶಾಸಕ ವಿ.ಸುನೀಲ್‌ಕುಮಾರ್ ಮಾತನಾಡಿ, ಏಕವ್ಯಕ್ತಿ ಸರ್ಕಾರವಿದು. ಮಂತ್ರಿ ಮಂಡಳ ಇಲ್ಲ. ಅವರೇ ಪುಟ 2

## ಮೆಡಿಕಲ್ ಮಾಫಿಯಾದಲ್ಲಿ ಸರ್ಕಾರ

ಬೆಳಗಾವಿ: ರಾಜ್ಯ ಸರ್ಕಾರ ಮೆಡಿಕಲ್ ಮಾಫಿಯಾದ ಕಪಿ ಮುಷ್ಠಿಯಲ್ಲಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ವಿಧಾನಸಭೆಯಲ್ಲಿಂದು ಆರೋಪಿಸಿದರು.



ನಿಲುವಳಿ ಸೂಚನೆ ಪೂರ್ವಭಾವಿ ಪ್ರಸ್ತಾಪ ಮಾಡಿದ ಅವರು, ಕಳಪೆ ಗುಣಮಟ್ಟದ ಔಷಧಿಗಳನ್ನು ಸರ್ಕಾರಿ ಆಸ್ಪತ್ರೆಗಳಲ್ಲಿ ಇಡಲಾಗುತ್ತಿದೆ. ಶೌಚಾಲಯವಿಲ್ಲ, ಸಾಕಷ್ಟು ವೈದ್ಯರಿಲ್ಲ.

ಡ್ರಗ್ ಮಾಫಿಯಾ ಹಿಡಿತದಲ್ಲಿ ಸರ್ಕಾರವಿದೆ. ಅವಧಿ ಮುಗಿದ ಔಷಧಿ ಸೇವಿಸುವ ಪರಿಸ್ಥಿತಿ ಇದೆ. ನೂರಾರು ಜನ ಸಾಯುತ್ತಿದ್ದಾರೆ. ಬಳ್ಳಾರಿ, ಬೆಳಗಾವಿಯಲ್ಲಿ ಬಾಣಂತಿಯರು ಸಾಯುತ್ತಿದ್ದಾರೆ ಎಂದು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು. ಬಾಣಂತಿಯರ ಸಾವು ತಪ್ಪಿಸಿ ಬದುಕುವಂಥ ಗ್ಯಾರಂಟಿ ನೀಡಿ. ಬಹಳಷ್ಟು ಮಕ್ಕಳು ಕೂಡ ಮೃತಪಟ್ಟಿದ್ದಾರೆ.

ಬಾಣಂತಿಯರ ಸಾವಿಗೆ ನ್ಯಾಯ ಬೇಕಲ್ಲವೆ? ಇಂದೇ ಈ ವಿಚಾರದ ಚರ್ಚೆಗೆ ಅವಕಾಶ ಕೊಡಿ ಇದು ಅತ್ಯಂತ ಮಹತ್ವದ ವಿಚಾರ ಎಂದು ಸಭಾಧ್ಯಕ್ಷ ಯು.ಟಿ.ಖಾದರ್ ಅವರಿಗೆ ಮನವಿ ಮಾಡಿದರು. ಪುಟ 2




ಚಳಿಗಾಲ ಅಧಿವೇಶನ ಹಿನ್ನೆಲೆಯಲ್ಲಿ ದೆಹಲಯಿಂದ ಬೆಳಗಾವಿಯ ವಿಮಾನ ನಿಲ್ದಾಣಕ್ಕೆ ಬಂದಿಳಿದ ಕಾಂಗ್ರೆಸ್‌ನ ಹಿರಿಯ ಮುಖಂಡರಾದ ವೇಣುಗೋಪಾಲ್ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರುಗಳಾದ ರಣದೀಪ್ ಸುರ್ಜೇವಾಲ, ಮಹಮ್ಮದ್ ಸಲೀಂ, ಡಿಸಿಎಂ ಶಿವಕುಮಾರ್, ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್, ಲಕ್ಷ್ಮಣ್ ಸವದಿ ಸೇರಿದಂತೆ ಮತ್ತಿರರು ಉಪಸ್ಥಿತರಿದ್ದರು.

## ರೋಹನ್ ಜೇಟ್ಲಿ ಮರು ಆಯ್ಕೆ

**ನವದೆಹಲಿ:** ದೆಹಲಿ ಜಿಲ್ಲಾ ಕ್ರಿಕೆಟ್ ಸಂಸ್ಥೆ (ಡಿಡಿಸಿಎ) ಪದಾಧಿಕಾರಿಗಳ ಚುನಾವಣೆಯಲ್ಲಿ ಭಾರತದ ಮಾಜಿ ಆಟಗಾರ ಕೀರ್ತಿ ಆಜಾದ್ ಅವರನ್ನು ಮಣಿಸಿ ರೋಹನ್ ಜೇಟ್ಲಿ ಅವರು ಮತ್ತೊಂದು ಅವಧಿಗೆ ಅಧ್ಯಕ್ಷರಾಗಿ ನೇಮಕಗೊಂಡಿದ್ದಾರೆ.

ಮಾಜಿ ಕೇಂದ್ರ ಸಚಿವ ದಿವಂಗತ ಅರುಣ್ ಜೇಟ್ಲಿ ಅವರ ಪುತ್ರ ರೋಹನ್ ಜೇಟ್ಲಿ ಅವರು 1,577 ಮತಗಳನ್ನು ಗಳಿಸಿ ಜಯಸಾಧಿಸಿದ್ದರೆ ಪ್ರತಿಸ್ಪರ್ಧಿ ಆಜಾದ್ ಅವರ 777 ಮತಗಳಿಗೆ ಮಾತ್ರ ಪಡೆದು ಪರಾಭವಗೊಂಡಿದ್ದಾರೆ. 2,413 ಮತಗಳು ಚಲಾವಣೆಯಾಗಿದ್ದು, ಗೆಲ್ಲಲು 1,207 ಮತಗಳು ಬೇಕಾಗಿದ್ದವು. ಪುಟ 2

## 'ಒಂದು ದೇಶ, ಒಂದು ಚುನಾವಣೆ' ಮಸೂದೆ ಮಂಡನೆ

**ನವದೆಹಲಿ:** ಪ್ರತಿಪಕ್ಷಗಳ ತೀವ್ರ ವಿರೋಧದ ನಡುವೆಯೇ ಕೇಂದ್ರ ಸರ್ಕಾರ ಲೋಕಸಭೆ ಮತ್ತು ವಿಧಾನಸಭೆ ಚುನಾವಣೆಗಳನ್ನು ಏಕಕಾಲದಲ್ಲಿ ನಡೆಸುವ ಸಂವಿಧಾನಾತ್ಮಕ ತಿದ್ದುಪಡಿ ಮಸೂದೆಯನ್ನು ಮಂಗಳವಾರ ಲೋಕಸಭೆಯಲ್ಲಿ ಮಂಡಿಸಿದೆ.



"ಒಂದು ದೇಶ, ಒಂದು ಚುನಾವಣೆ" ಮಸೂದೆ ಎಂದು ಉಲ್ಲೇಖಿಸಲ್ಪಡುವ ಸಂವಿಧಾನ(ನೂರಾ ಇಪ್ಪತ್ತೊಂಬತ್ತನೇ ತಿದ್ದುಪಡಿ) ತಿದ್ದುಪಡಿ ಮಸೂದೆ, 2024 ಅನ್ನು ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಇಂದು ಲೋಕಸಭೆಯಲ್ಲಿ ಮಂಡಿಸಿದರು.

'ಒಂದು ರಾಷ್ಟ್ರ, ಒಂದು ಚುನಾವಣೆ' ಜಾರಿಗೆ ತರುವ ಸಾಂವಿಧಾನಿಕ ತಿದ್ದುಪಡಿ ಸೇರಿದಂತೆ ಎರಡು ಮಸೂದೆಗಳನ್ನು ಅರ್ಜುನ್ ರಾಮ್ ಮೇಘವಾಲ್ ಅವರು ಮಂಡಿಸಿದರು.

ಇದು 2014 ರಲ್ಲಿ ಅಧಿಕಾರಕ್ಕೆ ಬಂದ ನಂತರ ಪ್ರಮುಖ ಚುನಾವಣಾ ಸುಧಾರಣೆಗೆ ಬಿಜೆಪಿ ದಾರಿ ಮಾಡಿಕೊಟ್ಟಿದೆ. ಆದಾಗ್ಯೂ, ಈ ಮಸೂದೆ ಪ್ರತಿಪಕ್ಷಗಳು ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಇದು ಅಸಂವಿಧಾನಿಕ, ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುತ್ತದೆ ಮತ್ತು ಸಂವಿಧಾನದ ಮೂಲ ರಚನೆಯನ್ನು ಉಲ್ಲಂಘಿಸುತ್ತದೆ ಎಂದು ವಾದಿಸುತ್ತಿದ್ದಾರೆ.

ಮಸೂದೆಗೆ ಕಾಂಗ್ರೆಸ್, ಟಿಎಂಸಿ, ಎಸ್ಪಿ ಸೇರಿದಂತೆ ಹಲವು ಪಕ್ಷಗಳು ವಿರೋಧ ವ್ಯಕ್ತಪಡಿಸಿವೆ. ಈ ಮಸೂದೆ ತರುವ ಅಗತ್ಯ ಏನಿದೆ ಎಂದು ಸಮಾಜವಾದಿ ಲಕ್ಷದ ಸಂಸದ ಧರ್ಮೇಂದ್ರ ಯಾದವ್ ಅವರು ಪ್ರಶ್ನಿಸಿದ್ದಾರೆ. ಕಳೆದ ವಾರ ಕೇಂದ್ರ ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಒಂದು ದೇಶ, ಒಂದು ಚುನಾವಣೆ ಪುಟ 2

## ಸಾಲುಮರದ ತಿಮ್ಮಕ್ಕ ಆಸ್ಪತ್ರೆಗೆ ದಾಖಲು

ಬೆಂಗಳೂರು: ಖ್ಯಾತ ಪರಿಸರವಾದಿ, ಪದ್ಮ ಪ್ರಶಸ್ತಿ ಪುರಸ್ಕೃತೆ ಸಾಲುಮರದ ತಿಮ್ಮಕ್ಕ ಅವರು ನಗರದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದು, ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಎಂದು ತಿಳಿದುಬಂದಿದೆ. ಉಸಿರಾಟದ ತೊಂದರೆ, ಕೆಟ್ಟ ಸಮಸ್ಯೆ ಹಾಗೂ ಸೋಂಕಿನ ಸಮಸ್ಯೆಯಿಂದಾಗಿ ನವೆಂಬರ್ 30ರಂದು ಆಸ್ಪತ್ರೆಗೆ ದಾಖಲಾಗಿದ್ದು, ಇದೀಗ ಆರೋಗ್ಯದಲ್ಲಿ ಚೇತರಿಕೆ ಕಂಡು ಬಂದಿದೆ ಎಂದು ವೈದ್ಯರು ಹೇಳಿದ್ದಾರೆ. ಸಾಲು ಮರದ ತಿಮ್ಮಕ್ಕ ಅವರು ಗ್ಯಾಸ್ಟ್ರೋ ಇಂಟಸ್ಟೈನಲ್ ಸೋಂಕು, ಅತಿಸಾರ ಮತ್ತು ನಿರ್ಜಲೀಕರಣದಿಂದ ಬಳಲುತ್ತಿದ್ದರು. ಪುಟ 2

## ಗಾಂಧೀಜಿ ಅಧ್ಯಕ್ಷರಾಗಿದ್ದು ರಾಜ್ಯಕ್ಕೆ ಸಿಕ್ಕ ಐತಿಹಾಸಿಕ ಭಾಗ್ಯ

ಬೆಳಗಾವಿ:"ಬೆಳಗಾವಿ ಅಧಿವೇಶನದಲ್ಲಿ ಮಹಾತ್ಮಾ ಗಾಂಧಿಜಿ ಅವರು ಕಾಂಗ್ರೆಸ್ ಅಧ್ಯಕ್ಷರಾಗಿ ಅಧಿಕಾರ ಸ್ವೀಕಾರ ಮಾಡಿದ್ದು, ಕರ್ನಾಟಕಕ್ಕೆ ಸಿಕ್ಕ ಐತಿಹಾಸಿಕ ಭಾಗ್ಯ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಬೆಳಗಾವಿ ಸರ್ಕಿಟ್ ಹೌಸ್ ಹಾಗೂ ಪೀರನವಾಡಿ ಗಾಂಧಿ ಭವನದ ಬಳಿ ಶಿವಕುಮಾರ್ ಅವರು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು "ಮಹಾತ್ಮಾ ಗಾಂಧಿ ಅವರು ಕಾಂಗ್ರೆಸ್ ಅಧ್ಯಕ್ಷರಾದಾಗ ಗಂಗಾಧರ ದೇಶಪಾಂಡೆ ಹಾಗೂ ಜವಹಾರ್ ಲಾಲ್ ನೆಹರೂ ಅವರು ಮಾತ್ರ ಪ್ರಧಾನ



ಕಾರ್ಯದರ್ಶಿಯಾಗಿದ್ದರು. ಆಗ ದೇಶಪಾಂಡೆ ಅವರು ಬೆಳಗಾವಿಯಲ್ಲಿ ಎಐಸಿಸಿ ಅಧಿವೇಶನ ನಡೆಸಲು ಆಹ್ವಾನ ನೀಡಿದರು. ಪುಟ 2

## ಲಾರಿ ಪಲ್ಟಿ; ಮೂವರು 'PWD' ಅಧಿಕಾರಿಗಳ ದಾರುಣ ಸಾವು

**ರಾಯಚೂರು :** ಲಾರಿ ಪಲ್ಟಿಯಾಗಿ ರಸ್ತೆ ಬದಿಯಲ್ಲಿ ನಿಂತವರ ಮೇಲೆ ಚೀಲಗಳು ಬಿದ್ದು, ಮೂವರು ಸ್ಥಳದಲ್ಲಿಯೇ ಮೃತಪಟ್ಟ ದಾರುಣ ಘಟನೆ ರಾಯಚೂರಿನ ಸಿಂಧನೂರು ಪಟ್ಟಣದಲ್ಲಿ ಸೋಮವಾರ ರಾತ್ರಿ ಸಂಭವಿಸಿದೆ. ಸಿಂಧನೂರಿನ ಪಿಡಬ್ಲ್ಯೂಡಿ ಸಮೀಪ ಡಾಲರ್ಸ್ ಕಾಲೋನಿ ಕ್ರಾಸ್ ಬಳಿ ದುರ್ಘಟನೆ ಜರುಗಿದೆ. ಜವಳಗೇರಾ ಉಪವಿಭಾಗದ ಕಿರಿಯ ಎಂಜಿನಿಯರ್ ಗಳಾದ ಮಲ್ಲಿಕಾರ್ಜುನ (29), ಶಿವರಾಜು (28) , ಮೆಹಬೂಬ (30) ಎಂಬುವವರು ಮೃತಪಟ್ಟಿದ್ದಾರೆ. ಘಟನೆ ನಡೆದ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪುಟ 2

## ಜೈಲಿನಿಂದ ಹೊರಬಂದ ಪವಿತ್ರಾ

ಬೆಂಗಳೂರು: ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಎ2 ಆರೋಪಿಯಾಗಿ ಜೈಲು ಸೇರಿದ್ದ ಪವಿತ್ರಾ ಗೌಡ ಇಂದು ಪರಪ್ಪನ ಅಗ್ರಹಾರದಿಂದ ನಗುನಗುತ್ತಲೇ ಬಿಡುಗಡೆಯಾಗಿದ್ದಾರೆ. ಜಾಮೀನು ದೊರೆತು 4 ದಿನಗಳ ಬಳಿಕ ಬಿಡುಗಡೆ ಭಾಗ್ಯ ಲಭಿಸಿದೆ.



ಕಳೆದ 6 ತಿಂಗಳ ಹಿಂದೆ ಜೈಲು ಸೇರಿದ್ದ ದರ್ಶನ್ ಗೆಳತಿ ಪವಿತ್ರಾ ಗೌಡ ಮತ್ತು ಇತರರಿಗೆ ಶುಕ್ರವಾರ ಹೈಕೋರ್ಟ್‌ನ ನ್ಯಾ. ಎಸ್.ವಿಶ್ವಜಿತ್ ಶೆಟ್ಟಿ ಅವರಿದ್ದ ಏಕಸದಸ್ಯ ಪೀಠ ಜಾಮೀನು ಮಂಜೂರು ಮಾಡಿತ್ತು. ಸೋಮವಾರ ಜಾಮೀನು ಪ್ರಕ್ರಿಯೆಗಳು ಎಲ್ಲಾ ಪೂರ್ಣಗೊಂಡ ಹಿನ್ನೆಲೆಯಲ್ಲಿ ಇಂದು ಬೆಳಗ್ಗೆ ಜೈಲಿನಿಂದ ಬಿಡುಗಡೆಯಾಗಿದ್ದಾರೆ. ಪವಿತ್ರಾ ಗೌಡ ಜೊತೆ 14ನೇ ಆರೋಪಿ ಪ್ರದೂಶ್ ಬಿಡುಗಡೆಯಾಗಿದ್ದಾನೆ.ಎಲ್ಲಾ ಆರೋಪಿಗಳು ತಲಾ 1 ಲಕ್ಷ ರೂ. ಮೊತ್ತದ ವೈಯಕ್ತಿಕ ಬಾಂಡ್ ಹಾಗೂ ಇಷ್ಟೇ ಮೊತ್ತಕ್ಕೆ ಇಬ್ಬರ ಭದ್ರತೆ ನೀಡಬೇಕು ಸೇರಿದಂತೆ ಹಲವು ಷರತ್ತುಗಳನ್ನು ಕೋರ್ಟ್ ವಿಧಿಸಿದೆ.ಆರೋಪಿಗಳನ್ನು ಬಂಧಿಸಿದ ನಂತರ ಪ್ರಾಸಿಕ್ಯೂಷನ್ ತಕ್ಷಣವೇ ಇವರನ್ನು ಯಾಕೆ ಬಂದಿಸಿದ್ದೇವೆ ಎನ್ನುವುದಕ್ಕೆ ಸರಿಯಾದ ಪುಟ 2

## ಬಿಬಿಎಂಪಿ ಎರಡನೇ ತಿದ್ದುಪಡಿ ವಿಧೇಯಕ ಅಂಗೀಕಾರ

ಬೆಳಗಾವಿ: 2024ನೇ ಸಾಲಿನ ಬೃಹತ್ ಬೆಂಗಳೂರು ನಗರ ಪಾಲಿಕೆ ಎರಡನೇ ತಿದ್ದುಪಡಿ ವಿಧೇಯಕವನ್ನು ವಿಧಾನಸಭೆಯಲ್ಲಿ ಅಂಗೀಕರಿಸಲಾಯಿತು.

ಸುವರ್ಣಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ವಿಧಾನಮಂಡಲ ಅಧಿವೇಶನದಲ್ಲಿ ವಿಧಾನಸಭೆಯಲ್ಲಿ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಈ ವಿಧೇಯಕವನ್ನು ಮಂಡಿಸಿದರು.

"ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಪಾವತಿಸದವರಿಗೆ ಒಟಿಎಸ್ ಮೂಲಕ ತೆರಿಗೆ ಬಾಕಿ ಪಾವತಿಸಲು ನವೆಂಬರ್ 30ವರೆಗೂ ಕಾಲಾವಕಾಶ ನೀಡಲಾಗಿತ್ತು. ಈ ಮೂಲಕ ಪಾಲಿಕೆಗೆ 700 ಕೋಟಿ ಹೆಚ್ಚುವರಿಯಾಗಿ ಆಸ್ತಿ ತೆರಿಗೆ ಸಂಗ್ರಹವಾಗಿದೆ. 3 ಲಕ್ಷ ಆಸ್ತಿಗಳಿಂದ 1200 ಕೋಟಿ ಬಾಕಿ ವಸೂಲಿ ಮಾಡಲಾಗಿದೆ. ಇನ್ನೂ 2.26 ಲಕ್ಷ ಆಸ್ತಿಗಳು ಬಾಕಿ ಇವೆ" ಎಂದು ಮಾಹಿತಿ ನೀಡಿದರು.

"2024ರ ನವೆಂಬರ್ 30ರವರೆಗೆ ಒಟ್ಟು 4284 ಕೋಟಿ ಆಸ್ತಿ ತೆರಿಗೆ ಸಂಗ್ರಹಿಸಲಾಗಿದೆ. ಈ ಸಂಬಂಧ



ಈಗಾಗಲೇ ಸುಗ್ರೀವಾಜ್ಞೆ ಹೊರಡಿಸಿದ್ದು, ಈಗ 2024ನೇ ಸಾಲಿನ ಬೃಹತ್ ಬೆಂಗಳೂರು ನಗರ ಪಾಲಿಕೆ ಎರಡನೇ ತಿದ್ದುಪಡಿ ವಿಧೇಯಕವನ್ನು ಅಂಗೀಕಾರ ಮಾಡಿಕೊಡಬೇಕು"ಎಂದು ಮನವಿ ಮಾಡಿದರು.

ಈ ವೇಳೆ ಮಾತನಾಡಿದ ಮಾಜಿ ಸಚಿವ ಅಶ್ವತ್ಥ್ ನಾರಾಯಣ ಅವರು, "ಉಪ ಮುಖ್ಯಮಂತ್ರಿಗಳು ಉತ್ತಮ ತಿದ್ದುಪಡಿ ವಿಧೇಯಕ ಮಂಡಿಸಿದ್ದು, ಆಸ್ತಿ ತೆರಿಗೆ ಸಂಗ್ರಹವನ್ನು ಹೆಚ್ಚಿಸಿದ್ದಾರೆ. ಇದುವರೆಗೂ ತೆರಿಗೆ ಪಾವತಿಸದವರು ಕೂಡ ತೆರಿಗೆ ಪುಟ 2

# ಸುಸಜ್ಜಿತ ಬಾಲಭವನ ನಿರ್ಮಾಣ ನನ್ನ ಸಂಕಲ್ಪ



ಬೆಳಗಾವಿ: ಬೆಂಗಳೂರಿನ ಬಾಲಭವನಕ್ಕಿಂತ ಸುಂದರವಾಗಿ, ವಿಶಿಷ್ಟವಾಗಿ ಬೆಳಗಾವಿ ಬಾಲಭವನ ನಿರ್ಮಿಸಬೇಕೆನ್ನುವುದು ನನ್ನ ಸಂಕಲ್ಪ. 20 ಕೋಟಿ ರೂಪಾಯಿ ವೆಚ್ಚದಲ್ಲಿ ಸುಸಜ್ಜಿತ ಬಾಲಭವನ ಬೆಳಗಾವಿಯಲ್ಲಿ ನಿರ್ಮಾಣಗೊಳ್ಳಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಳಗಾವಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಬೆಂಗಳೂರಿನ ಜವಾಹರ ಬಾಲಭವನ ಸೊಸೈಟಿ, ನಿರ್ಮಿತಿ ಕೇಂದ್ರ ಹಾಗೂ ಜಿಲ್ಲಾ ಬಾಲ ಭವನ ಸಮಿತಿ ಸಂಯುಕ್ತ ಆಶ್ರಯದಲ್ಲಿ ನೂತನವಾಗಿ ನಿರ್ಮಾಣಗೊಳ್ಳಲಿರುವ ಜಿಲ್ಲಾ ಬಾಲ ಭವನಕ್ಕೆ ಭೂಮಿ ಪೂಜೆ ನೆರವೇರಿಸಿ, ಮಾತನಾಡಿದ ಅವರು, ಬೆಳಗಾವಿ ಎರಡನೇ ರಾಜಧಾನಿ ಮಟ್ಟಕ್ಕೆ ಬೆಳೆಯುತ್ತಿದೆ. ಅದಕ್ಕೆ ತಕ್ಕಂತೆ ಇಲ್ಲಿ ಅಭಿವೃದ್ಧಿ ಕೆಲಸಗಳು ಕೂಡ ನಡೆಯಬೇಕು, ಮೂಲಭೂತ ಸೌಲಭ್ಯಗಳು ಕೂಡ ನಿರ್ಮಾಣವಾಗಬೇಕು.

ನಮ್ಮ ಇಲಾಖೆಯಿಂದ ಜಿಲ್ಲೆಗೆ ಅನೇಕ ಯೊಜನೆಗಳನ್ನು ತರಲಾಗುತ್ತಿದೆ. ಇಷ್ಟೊಂದು ದೊಡ್ಡ ಜಿಲ್ಲೆಗೆ ಈವರೆಗೂ ಒಂದು ಸುಸಜ್ಜಿತ ಭಾಲಭವನ ಇಲ್ಲ, ನಮ್ಮ ಇಲಾಖೆಗೆ ಸುಸಜ್ಜಿತ ಕಟ್ಟಡ ಕೂಡ ಇಲ್ಲ. ಈ ಹಿನ್ನೆಲೆಯಲ್ಲಿ ಬಾಲಭವನಕ್ಕೆ ಮತ್ತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸ್ವಂತ ಕಟ್ಟಡ ನಿರ್ಮಾಣಕ್ಕೆ ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ನಗರದ ಮಧ್ಯದಲ್ಲಿಯೇ 4 ಎಕರೆ ಈ ವಿಶಾಲ ಜಾಗವನ್ನು ಗುರುತಿಸಿ ಬಾಲಭವನ ನಿರ್ಮಾಣಕ್ಕೆ ನಿರ್ಧರಿಸಲಾಗಿದೆ. ಈ ಜಾಗದ ಮಾರುಕಟ್ಟೆ ಮೌಲ್ಯ100 ಕೋಟಿಗೂ ಅಧಿಕ. ಇದರ ಜೊತೆಗೆ, ನಮ್ಮ ಇಲಾಖೆಯ ಕಟ್ಟಡ ನಿರ್ಮಾಣಕ್ಕೆ ಸಹ ನಿರ್ಧರಿಸಲಾಗಿದೆ, ಇದಕ್ಕೆ 6 ಕೋಟಿ ರೂ. ಮಂಜೂರಾಗಿದ್ದು, ಇಷ್ಟರಲ್ಲೇ ಹಣ ಬಿಡುಗಡೆಯಾಗಲಿದೆ. ಬಾಲಭವನಕ್ಕೆ ಈಗಾಗಲೆ 20 ಕೋಟಿ ರೂ. ಮಂಜೂರು ಮಾಡಲಾಗಿದೆ, ಈಗಾಗಲೇ 2 ಕೋಟಿ ರೂ. ಬಿಡುಗಡೆ ಕೂಡ ಆಗಿದೆ ಎಂದು ಸಚಿವರು ಮಾಹಿತಿ ನೀಡಿದರು.

ಮಕ್ಕಳಿಗಾಗಿ ರೈಲು, ಫ್ಯಾಂಟಸಿ ಪಾರ್ಕ್ ಸೇರಿದಂತೆ, ಆಟದೊಂದಿಗೆ ಕಲಿಯುವುದಕ್ಕೆ ಅವಕಾಶವಾಗುವಂತೆ ಸರ್ವವಿಧದ ಸೌಕರ್ಯಗಳನ್ನು ಬಾಲಭವನ ಒಳಗೊಳ್ಳಲಿದೆ. ಮಕ್ಕಳಿಗೆ ಕಲಿಯುವುದಕ್ಕೆ ಮತ್ತು ನಲಿಯುವುದಕ್ಕೆ ಇದೊಂದು ಅತ್ಯುತ್ತಮ ಸ್ಥಳವಾಗಬೇಕೆನ್ನುವುದೇ ನನ್ನ ಉದ್ದೇಶ ಎಂದರು. ಇದೇ ವೇಳೆ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ, ನಮ್ಮ ಸರ್ಕಾರ ಕೊಟ್ಟ ಮಾತಿನಂತೆ ಗೃಹಲಕ್ಷ್ಮೀ ಯೋಜನೆಯನ್ನು ಜಾರಿಗೆ ತರಲಾಗಿದೆ. ನಮ್ಮ ನಿರೀಕ್ಷೆಗೂ ಮೀರಿ ಯೋಜನೆ ಯಶಸ್ವಿಯಾಗಿರುವುದು ನಮಗೆಲ್ಲ ಹೆಮ್ಮೆ ತರುವ ಸಂಗತಿಯಾಗಿದೆ. ಆದರೆ, ಗೃಹಲಕ್ಷ್ಮೀ ಯೋಜನೆಗೆ ಪ್ರಚಾರದ ಅವಶ್ಯಕತೆ ಇದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಮಹಾರಾಷ್ಟ್ರ ಸೇರಿದಂತೆ ಬೇರೆ ರಾಜ್ಯಗಳಲ್ಲೂ ನಮ್ಮ ಯೋಜನೆಗಳನ್ನು ಕಾಪಿ ಮಾಡಲಾಗುತ್ತಿದೆ. ಇದು ಗೃಹಲಕ್ಷ್ಮೀ ಯೋಜನೆಯ ಜನಪ್ರಿಯತೆಗೆ ಸಾಕ್ಷಿ. ನಾಳೆ ಗೃಹಲಕ್ಷ್ಮೀ ಯೋಜನೆಯನ್ನು ಜನೋಪಯೋಗಿಯಾಗಿ ಮತ್ತು ಸ್ವಾವಲಂಬನೆಗಾಗಿ ಬಳಸಿದ ಮಹಿಳೆಯರನ್ನು ವಿಧಾನಸೌಧಕ್ಕೆ ಕರೆದುಕೊಂಡು ಹೋಗುತ್ತಿದ್ದೇನೆ. ಅವರಿಗೆಲ್ಲ ಆಡಳಿತ ಸೌಧವನ್ನು, ಆಡಳಿತ ವ್ಯವಸ್ಥೆಯನ್ನು ಹತ್ತಿರದಿಂದ ತೋರಿಸುವ ಪ್ರಯತ್ನ ಮಾಡುತ್ತಿದ್ದೇನೆ ಎಂದು ಸಚಿವರು ಹೇಳಿದರು.

ಕಾನೂನಿಗಿಂತ ದೊಡ್ಡವರು ಯಾರು ಇಲ್ಲ: ಪಂಚಮಸಾಲಿ ಮೀಸಲಾತಿ ಹೋರಾಟದ ಕುರಿತು ಪ್ರತಿಕ್ರಿಯಿಸಿದ ಸಚಿವರು, ಕಾನೂನಿನ ಚೌಕಟ್ಟಿನಲ್ಲಿ ಹೋರಾಟ ಮಾಡೋಣ. ಪ್ರಚೋದನಾತ್ಮಕ ಹೋರಾಟ ಮಾಡುವುದು ಬೇಡ. ಕಾನೂನಿಗಿಂತ ದೊಡ್ಡವರು ಯಾರೂ ಇಲ್ಲ ಎಂದು ಸಚಿವರು ಹೇಳಿದರು.

ಈ ವೇಳೆ ಬೆಳಗಾವಿ ಉತ್ತರ ಕ್ಷೇತ್ರದ ಶಾಸಕ ರಾಜು ಸೇಠ್, ಬಾಲಭವನ ಸೊಸೈಟಿ ಅಧ್ಯಕ್ಷರಾದ ಜಿ.ಆರ್.ನಾಯ್ಡು, ಜಿಲ್ಲಾ ಪಂಚಾಯತ್ ಸಿಇಓ ರಾಹುಲ್ ಶಿಂಧೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕರಾದ ಎನ್.ಸಿದ್ದೇಶ್ವರ, ಕಾರ್ಪೊರೇಟರ್ ಸಂದೀಪ್, ಸಚಿವರ ವಿಶೇಷ ಕರ್ತವ್ಯಾಧಿಕಾರಿ ಬಿ.ಎಚ್.ನಿಶ್ಚಲ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನಾಗರಾಜ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.




**ಮಹಾಲಕ್ಷ್ಮಿ ಎಜುಕೇಶನ್ ಟ್ರಸ್ಟ್ ಮತ್ತು ಧಾರಿಣಿ ಮಹಿಳಾ ಸಂಘ , ಆಯೋಜಿಸಿದ್ದ ಮಹಿಳೆಯರಿಗಾಗಿ ಉಚಿತ ಹೃದಯ ,ಥೈರಾಡ್, ಕ್ಯಾನ್ಸರ್ ತಪಾಷಣೆ ಶಿಬಿರ ಹಾಗೂ 70 ವರ್ಷ ಮೇಲ್ಪಟ್ಟ ವಯಸ್ಕರಿಗೆ ಆಯುಷ್ಮಾನ್ ಕಾರ್ಡ್ ನೊಂದಣಿ ಶಿಬಿರವನ್ನು ಬಸವೇಶ್ವರನಗರದ ಮೂರನೇ ಹಂತ ನಾಲ್ಕನೇ ವಿಭಾಗದ ಧಾರಿಣಿ ಮಹಿಳಾ ಸಂಘದ ಆವರಣದಲ್ಲಿ ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯನವರು ಮಾರ್ಗದರ್ಶನದಲ್ಲಿ ನಡೆಯಿತು. ಶಿಬಿರವನ್ನು ಮಾಜಿ ಉಪ ಮಹಾಪೌರರಾದ ಹೇಮಲತಾ ಗೋಪಾಲಯ್ಯನವರು ಉದ್ಘಾಟಿಸಿದರು . ಕಾರ್ಯಕ್ರಮದಲ್ಲಿ ಮಹಾಲಕ್ಷ್ಮಿ ಎಜುಕೇಶನ್ ಟ್ರಸ್ಟ್ ನ ಅಧ್ಯಕ್ಷ ಜಯರಾಮಯ್ಯ, ಮಾಜಿ ಪಾಲಿಕೆ ಸದಸ್ಯ ಪದ್ಮಾವತಿ ಶ್ರೀನಿವಾಸ್. ಸಂಘದ ಅಧ್ಯಕ್ಷೆ ಜಗದಾ ಎಂ, ಕಾರ್ಯದರ್ಶಿ ಲಲಿತಾ ಪ್ರಕಾಶ್, ಬಿಜೆಪಿ ಮುಖಂಡರುಗಳಾದ ಬಿ ಡಿ ಶ್ರೀನಿವಾಸ್, ನಿಸರ್ಗ ಜಗದೀಶ್ ಕಲ್ಲೇಶಪ್ಪ, ಮತ್ತಿತರರಿದ್ದರು.**

# ಕೊಳವೆ ಬಾವಿ ಸಮರ್ಪಕವಾಗಿ ಮುಚ್ಚದಿದ್ರೆ ದಂಡ

**ಬೆಳಗಾವಿ:** ಕೊಳವೆ ಬಾವಿಗಳನ್ನು ಸಮರ್ಪಕವಾಗಿ ಮುಚ್ಚದೇ ಚಿಕ್ಕ ಮಕ್ಕಳು ಬಿದ್ದು ಆಗುವ ಅವಘಢಗಳಿಗೆ ಬ್ರೇಕ್ ಹಾಕುವ ನಿಟ್ಟಿನಲ್ಲಿ ಇರುವ ನಿಯಮಗಳನ್ನು ಇನ್ನಷ್ಟು ಕಠಿಣಗೊಳಿಸುವ ಉದ್ದೇಶದಿಂದ ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆ ವಿನಿಮಯ ಹಾಗೂ ನಿಯಂತ್ರಣ) ಅಧಿನಿಯಮ 2011 ಮತ್ತು ನಿಯಮಾವಳಿ 2012 ಕ್ಕೆ ತಿದ್ದುಪಡಿಯನ್ನು ವಿಧಾನಸಭೆಯಲ್ಲಿ ಅಂಗೀಕರಿಸಲಾಗಿದೆ.

ವಿಫಲ ಕೊಳವೆ ಬಾವಿಗಳನ್ನು ಸಮರ್ಪಕವಾಗಿ ಮುಚ್ಚದೇ ಇದ್ದಲ್ಲಿ ಡ್ರಿಲ್ಲಿಂಗ್ ಏಜೆನ್ಸಿ ಹಾಗೂ ಇಂಪ್ಲಿಮೆಂಟಿಂಗ್ ಏಜೆನ್ಸಿಗಳಿಗೆ 25 ಸಾವಿರ ದಂಡ ಹಾಗೂ 1 ವರ್ಷಗಳ ಜೈಲು ಶಿಕ್ಷೆಯನ್ನು ವಿಧಿಸುವ ಮಸೂದೆ ಮಂಡಿಸಿ ವಿಧಾನಸಭೆಯಲ್ಲಿ ಅನುಮೋದನೆ ಪಡೆದುಕೊಳ್ಳಲಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಭೋಸರಾಜು ತಿಳಿಸಿದರು.

ಬೆಳಗಾವಿ ಸುವರ್ಣ ವಿಧಾನಸೌಧ'ದ ವಿಧಾನಸಭೇಯಲ್ಲಿ ಮಸೂದೆ ಅಂಗಿಕಾರವಾದ ನಂತರ ಪ್ರತಿಕ್ರಿಯೆ ನೀಡಿದರು. ವಿಫಲ ಕೊಳವೆ ಬಾವಿಗಳನ್ನು ಮುಚ್ಚದೇ ಇರುವ ಮೂಲಕ ಹಲವಾರು ಮಕ್ಕಳು ಪ್ರಾಣ ಕಳೆದುಕೊಂಡಿದ್ದಾರೆ. ಇಂತಹ ಪ್ರಕರಣಗಳಿಗೆ ಬ್ರೇಕ್ ಹಾಕುವುದು ಸರಕಾರದ ಉದ್ದೇಶವಾಗಿದೆ. ಈ ಹಿನ್ನಲೆಯಲ್ಲಿ ಈ ತಿದ್ದುಪಡಿ ಮಸೂದೆಯನ್ನು ಮಂಡಿಸಲಾಗಿದ್ದು ಇಂದು ವಿಧಾನಸಭೇಯಲ್ಲಿ ಅಂಗೀಕಾರವಾಗಿದೆ.

ಮಸೂದನೆಯ 11 ಎ ಸೆಕ್ಷನ್ ಪ್ರಕಾರ ಅಧಿಸೂಚಿತ ಪ್ರದೇಶ ಮತ್ತು ಅಧಿಸೂಚಿತವಲ್ಲದ ಪ್ರದೇಶಗಳಲ್ಲಿ ಕೊಳವೆಬಾವಿ ಕೊರೆಯುಲು ಇಚ್ಚಿಸುವವರು ಸಂಬಂಧಪಟ್ಟ ಪಿಡಿಓ, ವಿಲೇಜ್ ಅಕೌಂಟೆಂಟ್, ಪಟ್ಟಣ ಪಂಚಾಯಿತಿ, ನಗರ ಸಭೆ ಮತ್ತು ಬಿಡಬ್ಲೂಎಸ್‌ಎಸ್‌ಬಿ ಸಂಬಂಧಿಸಿದ ವಾರ್ಡ್ ಇಂಜೆನೀಯರ್‌ಗಳಿಗೆ 15 ದಿನಗಳ ಮುಂಚಿತವಾಗಿ ಮಾಹಿತಿ ನೀಡಬೇಕು. ಇದನ್ನು ಉಲ್ಲಂಘಿಸಿದ ಡ್ರಿಲ್ಲಿಂಗ್ ಏಜೆನ್ಸಿ/ ಇಂಪ್ಲಿಮೆಂಟಿಂಗ್ ಏಜೆನ್ಸಿಗಳಿಗೆ ಐದು ಸಾವಿರ ರೂಪಾಯಿಗಳ ಜುಲ್ಮಾನೆ ಹಾಗೂ ಮೂರು ತಿಂಗಳ ಸಜೆಯನ್ನು ವಿಧಿಸಲಾಗುವುದು.

ಕೊಳವೆ ಬಾವಿಗಳನ್ನು ಕೊರೆದ ನಂತರ ಡ್ರಿಲಿಂಗ್ ಏಜೆನ್ಸಿ ಮತ್ತು ಇಂಪ್ಲಿಮೆಂಟಿಂಗ್ ಏಜೆನ್ಸಿಗಳು ಕೊಳವೆ ಬಾವಿಗಳನ್ನು ಸ್ಟಿಲ್ ಕ್ಯಾಪ್ ಹಾಕಿ ಮುಚ್ಚವುದು ಕಡ್ಡಾಯವಾಗಿದೆ. ವಿಫಲ ಕೊಳವೆ ಬಾವಿಯನ್ನು ಕೆಸರು ಮಣ್ಣು ತುಂಬಿ ಮುಚ್ಚಬೇಕು ಹಾಗೂ 2' 2' ಅಡಿಯ ದಿಬ್ಬ ಮಾಡಿ ದಿಬ್ಬಕ್ಕೆ ಫೆನ್ಸಿಂಗ್. ಡ್ರಿಲಿಂಗ್ ಏಜೆನ್ಸಿ ಮತ್ತು ಇಂಪ್ಲಿಮೆಂಟಿಂಗ್ ಏಜೆನ್ಸಿಗಳು ಕೊಳವೆ ಬಾವಿ ಕೊರೆದ 24 ಗಂಟೆಯೊಳಗೆ ಮುಚ್ಚಿರುವ ಬಗ್ಗೆ ಫೋಟೋ ತಗೆದು ಸುರಕ್ಷಿತವಾಗಿ ಮುಚ್ಚಿರುವುದನ್ನು ತಪಾಸಣೆ ಮಾಡಿ ಧೃಢೀಕರಿಸಬೇಕು. ಈ ಬಗ್ಗೆ ಜಾಯಿಂಟ್ ಡಿಕ್ಲರೇಷನ್ ಅನ್ನು ಸ್ಥಳೀಯ ಪ್ರಾಧಿಕಾರಕ್ಕೆ ಸಲ್ಲಿಸುವುದು ಕಡ್ಡಾಯಗೊಳಿಸಲಾಗಿದೆ.

ಅಲ್ಲದೇ, ಜಮೀನಿನ ಮಾಲೀಕರು ಕೊಳವೆ ಬಾವಿ ರಿಪೇರಿ ಮಾಡಲು ಪಂಪ್ ಅನ್ನು ಹೊರ ತಗೆದಾಗ ಕೊಳವೆಬಾವಿಗೆ ಕ್ಯಾಪ್ ಹಾಕಿ ಮುಚ್ಚಬೇಕು. ಕೊಳವೆ ಬಾವಿಯನ್ನು ಪುನಃಶ್ಚೇತನ ಮಾಡಲು ಇಚ್ಚಿಸಿದಲ್ಲಿ ಜಮೀನು ಮಾಲೀಕರು ಕೊಳವೆ ಬಾವಿಗೆ ಮುಚ್ಚಳದಿಂದ ಮುಚ್ಚಿ ಸುರಕ್ಷತೆಯನ್ನು ಕಾಪಾಡಬೇಕು.

**ಸೈನ್ ಬೋರ್ಡ್ ಕಡ್ಡಾಯ:**

ಇನ್ನೂ ಕೊಳವೆ ಬಾವಿಯನ್ನು ಕೊರೆಯುವಾಗ ಎಲ್ಲರಿಗೂ ಕಾಣುವ ರೀತಿಯಲ್ಲಿ ಕೊಳವೆ ಬಾವಿ ಕೊರೆಯುತ್ತಿರುವ ಬಗ್ಗೆ ಎಚ್ಚರಿಕೆಯ ಬೋರ್ಡ್ ಅನ್ನು ಪ್ರದರ್ಶಿಸಬೇಕು. ಯಾವುದೇ ಅವಘಡಗಳು ಆಗದಂತೆ ಎಚ್ಚರವಹಿಸುವುದು ಕಡ್ಡಾಯವಾಗಿದೆ ಇದಕ್ಕಾಗಿ ಸುತ್ತಲೂ ಫೆನ್ಸಿಂಗ್ ನಿರ್ಮಿಸಿಕೊಳ್ಳಬೇಕು.

ಸ್ಥಳೀಯ ಪ್ರಾಧಿಕಾರ / ಅಧಿಕಾರಿಗಳ ಜವಾಬ್ದಾರಿ:

ಸ್ಥಳೀಯ ಪ್ರಾಧಿಕಾರ ಅಥವಾ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಕೊಳವೆ ಬಾವಿ ಕೊರೆಯುವ ಸಂಧರ್ಭದಲ್ಲಿ ಕೈಗೊಳ್ಳಬೇಕಾದ ಎಚ್ಚರಿಕೆಯ ಅಂಶಗಳನ್ನು ಪಾಲಿಸುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ತಮ್ಮ ವ್ಯಾಪ್ತಿಯಲ್ಲಿ ಕೊರೆಸಲಾಗುತ್ತಿರುವ ಕೊಳವೆ ಬಾವಿಗಳ ಬಗ್ಗೆ ಅಂತರ್ಜಲ ಅಭಿವೃದ್ಧಿ ಇಲಾಖೆಗೆ ಮಾಹಿತಿಯನ್ನು ಸಲ್ಲಿಸಬೇಕು. ಇಂಪ್ಲಿಮೆಂಟಿಂಗ್ ಏಜೆನ್ಸಿಯವರು ಸಹ ಕೊಳವೆ ಬಾವಿಯನ್ನು ಮುಚ್ಚುವ ಬಗ್ಗೆ ನಿಗಾವಹಿಸುವಬೇಕು. ಅಲ್ಲದೇ ಪಿಡಿಓ ಗಳು ಗ್ರಾಮ ಪಂಚಾಯತ್ ಕಚೇರಿಯಲ್ಲಿ ಕೊಳವೆ ಬಾವಿ ಮುಚ್ಚುವ ವಿಧಾನಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವ ಬೋರ್ಡ್ ಹಾಕುವುದನ್ನು ಕಡ್ಡಾಯಗೊಳಿಸಲಾಗಿವೆ ಎಂದು ಸಚಿವರಾದ ಎನ್ ಎಸ್ ಭೋಸರಾಜು ತಿಳಿಸಿದರು.

**ಜೈಲು ಶಿಕ್ಷೆ ಹಾಗೂ ದಂಡ:**

ಇಂಪ್ಲಿಮೆಂಟಿಂಗ್ ಏಜೆನ್ಸಿ ಹಾಗೂ ಡ್ರಿಲ್ಲಿಂಗ್ ಏಜೆನ್ಸಿಗಳು ಮಸೂದೆಯ 11 ಎ ಸೆಕ್ಷನ್‌ನಲ್ಲಿರುವ ನಿಯಮಗಳನ್ನು ಪಾಲಿಸದೇ ಇದ್ದಲ್ಲಿ ಹತ್ತು ಸಾವಿರ ಜುಲ್ಮಾನೆ ಹಾಗೂ ಒಂದು ವರ್ಷ ಜೈಲು ಶಿಕ್ಷೆಯನ್ನು ವಿಧಿಸಬಹುದಾಗಿದೆ. ಸೆಕ್ಷನ್ 21 ಎ ನಿಯಮಗಳನ್ನು ಯನ್ನು ಉಲ್ಲಂಘಿಸುವ ಇಂಪ್ಲಿಮೆಂಟಿಂಗ್ ಏಜೆನ್ಸಿ/ ಡ್ರಿಲ್ಲಿಂಗ್ ಏಜೆನ್ಸಿಗಳು / ಸರ್ವಿಸಿಂಗ್ ಏಜೆನ್ಸಿಗಳಿಗೆ 25 ಸಾವಿರ ರೂಪಾಯಿಗಳ ಜುಲ್ಮಾನೆ ಹಾಗೂ ಒಂದು ವರ್ಷದ ಜೈಲು ಶಿಕ್ಷೆಯನ್ನು ವಿಧಿಸುವ ಅವಕಾಶವನ್ನು ಈ ಮಸೂದೆಯಲ್ಲಿ ಅಳವಡಿಸಲಾಗಿದೆ. ಅಲ್ಲದೇ, ತಮ್ಮ ಜವಾಬ್ದಾರಿ/ಕರ್ತವ್ಯಗಳನ್ನು ನಿಭಾಯಿಸುವಲ್ಲಿ ವಿಫಲವಾಗುವ ಅಧಿಕಾರಿಗಳ ಮೇಲೂ ಕ್ರಮ ಕೈಗೊಳ್ಳಲು ಮಸೂದೆಯಲ್ಲಿ ನಿಯಮಗಳನ್ನು ಅಳವಡಿಸಲಾಗಿದೆ.

## ತಿದ್ದುಪಡಿ ವಿಧೇಯಕ ಅಂಗೀಕಾರ

**ಮೊದಲ ಪುಟದಿಂದ:**

ಪಾವತಿಸುವಂತೆ ಮಾಡಲಾಗಿದೆ. ತೆರಿಗೆ ವಂಚನೆ ಮಾಡುವವರು, ಕಡಿಮೆ ಆಸ್ತಿ ಮೌಲ್ಯ ಘೋಷಣೆ ಮಾಡಿಕೊಳ್ಳುವವರನ್ನು ತೆರಿಗೆ ವ್ಯಾಪ್ತಿಗೆ ತಂದಿರುವುದು ಒಳ್ಳೆಯ ಬೆಳವಣಿಗೆ. ಮುಂದಿನ ದಿನಗಳಲ್ಲಿ ಆಸ್ತಿ ತೆರಿಗೆ ಹೆಚ್ಚಿಸಬೇಡಿ. ಆಸ್ತಿ ತೆರಿಗೆದಾರರ ಮೇಲೆ ಹೆಚ್ಚಿನ ಭಾರ ಹೊರಿಸಬೇಡಿ. ಪಾಲಿಕೆಯನ್ನು ಆಸ್ತಿ ತೆರಿಗೆ ಹಣದಲ್ಲೇ ನಡೆಸಲು ಮುಂದಾಗಬೇಡಿ. ರಾಜ್ಯದಲ್ಲಿ 65% ತೆರಿಗೆ ಸಂಗ್ರಹವಾಗುತ್ತಿದ್ದು, ಈ ನಗರಕ್ಕೆ ಬೇರೆ ಇಲಾಖೆಗಳಿಂದ ಯಾವುದೇ ಸೌಲಭ್ಯ ಸಿಗುತ್ತಿಲ್ಲ. ರಾಜ್ಯ ಸರ್ಕಾರದಿಂದ ಬರುವ ಅನುದಾನ ಹೆಚ್ಚಾಗಬೇಕು ಎಂದು ಮನವಿ ಮಾಡುತ್ತೇನೆ. ಎಲ್ಲರನ್ನು ತೆರಿಗೆ ವ್ಯಾಪ್ತಿಗೆ ತರುವ ನಿಮ್ಮ ಪ್ರಯತ್ನಕ್ಕೆ ಶುಭಾಶಯ ತಿಳಿಸುತ್ತೇನೆ ಎಂದು ತಿಳಿಸಿದರು.ನಂತರ ಸಭಾಧ್ಯಕ್ಷರಾದ ಯು.ಟಿ ಖಾದರ್ ಅವರು ವಿಧೇಯಕವನ್ನು ಧ್ವನಿ ಮತಕ್ಕೆ ಹಾಕಿದರು. ಸದನದಲ್ಲಿ ಸರ್ವಾನುಮತದಿಂದ ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು.

# ಮಲೆನಾಡ ಗಿಡ್ಡ ಗೋ ತಳಿ ಸಂಶೋಧನೆಯನ್ನು ಪ್ರೋತ್ಸಾಹಿಸಲು ಒತ್ತಾಯ

**ಬೆಳಗಾವಿ** ಅಧಿವೇಶನದಲ್ಲಿ, ಪಶು ವರ್ಗದಲ್ಲಿ ವಿಶಿಷ್ಟ ಸ್ಥಾನ ಪಡೆದಿರುವ ಮಲೆನಾಡು ಗಿಡ್ಡ ತಳಿಯ ಬಗ್ಗೆ ಅಧ್ಯಯನ ಕೈಗೊಳ್ಳಲು ಶಿವಮೊಗ್ಗದ ಪಶು ವೈದ್ಯಕೀಯ ಮಹಾವಿದ್ಯಾಲಯ ಆವರಣದಲ್ಲಿ ಸ್ಥಾಪಿಸಿದ ಮಲೆನಾಡು ಗಿಡ್ಡ ತಳಿ ಸಂಶೋಧನೆ ಹಾಗೂ ಮಾಹಿತಿ ಕೇಂದ್ರವನ್ನು ಪುನಹ ಪ್ರಾರಂಭಿಸಲು ಮಾನ್ಯ ಪಶು ಸಂಗೋಪನ ಸಚಿವರನ್ನು ವಿಧಾನ ಪರಿಷತ್ ಶಾಸಕ ಡಿ.ಎಸ್. ಅರುಣ್ ರವರ ಒತ್ತಾಯಿಸಿದರು.

ಮಲೆನಾಡು ಗಿಡ್ಡ ಗೋವು ತಳಿ ಭೌಗೋಳಿಕ ಮಾನ್ಯತೆ ಹೊಂದಿದ್ದು, ಪ್ರಮುಖವಾಗಿ ಮಲೆನಾಡಿನ ಶಿವಮೊಗ್ಗ,ಚಿಕ್ಕಮಗಳೂರು ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿಯಲ್ಲಿ ಈ ತಳಿ ಹೇರಳವಾಗಿ ಕಂಡುಬರುವಂತಾಗಿದೆ ಎಂದು ಉಲ್ಲೇಖಿಸಿ,ಈ ತಳಿಯ ಹಾಲಿನಲ್ಲಿ ಎ–2 ಕೆಸಿನ್ ಅಧಿಕವಿದ್ದು ಜಗತ್ತಿನಲ್ಲಿ ಕಡಿಮೆ ಕೊಲೆಸ್ಟ್ರಾಲ್ ಅಂಶ ಹೊಂದಿರುವುದು ದೃಢಪಟ್ಟಿರುತ್ತದೆ ಎಂದು ತಿಳಿಸಿದರು. ಮಲೆನಾಡು ಗಿಡ್ಡ ತಳಿಯ ಹಾಲು ಮತ್ತು ಅದರ ಉತ್ಪನ್ನಗಳಿಗೆ ಬೇಡಿಕೆ ಇದ್ದು, ಹಾಲಿನಲ್ಲಿರುವ ಔಷಧೀಯ ಗುಣದ ಬಗ್ಗೆ ಹಾಗೂ ರೋಗ ನಿರೋಧಕ ಶಕ್ತಿಯ ಬಗ್ಗೆ ಹೆಚ್ಚಿನ ಅಧ್ಯಯನ ನಡೆಸುವ ಸಲುವಾಗಿ ಮಳೆನಾಡು ಗಿಡ್ಡೆತಳಿ ಸಂಶೋಧನೆಗೆ ಅನುಕೂಲವಾಗುವಂತೆ ಮಾಹಿತಿ ಕೇಂದ್ರವನ್ನು ಪುನರಾರಂಭಿಸಬೇಕು, ಸಂಶೋಧನೆಗೆ ಸರ್ಕಾರ ಹೆಚ್ಚಿನ ಒತ್ತುಕೊಟ್ಟು ಅಗತ್ಯವಿರುವ ಅನುದಾನವನ್ನು ಸಹ ಬಿಡುಗಡೆ ಮಾಡಬೇಕೆಂದು ಡಿ.ಎಸ್.ಅರುಣ್ ರವರು ಮಾನ್ಯ ಪಶುಸಂಗೋಪನ ಸಚಿವರನ್ನು ಶೂನ್ಯ ವೇಳೆಯಲ್ಲಿ ಒತ್ತಾಯಿಸಿದರು.

# ಗಾಂಧೀಜಿ ಅಧ್ಯಕ್ಷರಾಗಿದ್ದು ರಾಜ್ಯಕ್ಕೆ ಸಿಕ್ಕ ಐತಿಹಾಸಿಕ ಭಾಗ್ಯ

**ಮೊದಲ ಪುಟದಿಂದ:**

ಆ ಅಧಿವೇಶನಕ್ಕೆ ಬಂದ ಬರುವ ಜನರಿಗೆ ಕುಡಿಯುವ ನೀರು ಕಲ್ಪಿಸಲು ಬಾವಿ ತೋಡಲಾಗಿತ್ತು. 100 ವರ್ಷಗಳ ನಂತರ ನಮ್ಮ ಕರ್ನಾಟಕದವರೇ ಆದ ಮಲ್ಲಿಕಾರ್ಜುನ ಖರ್ಗೆ ಅವರು ಎಐಸಿಸಿ ಅಧ್ಯಕ್ಷರಾಗಿದ್ದಾರೆ. ಅಂದು ಗಾಂಧಿ ಇಂದು ಖರ್ಗೆ ಅವರು ಅಧ್ಯಕ್ಷರಾಗಿದ್ದಾರೆ. ಈ ಮಧ್ಯೆ ಅನೇಕ ಮಹಾನ್ ನಾಯಕರು ಆ ಸ್ಥಾನ ಅಲಂಕರಿಸಿದ್ದಾರೆ. ನಿಜಲಿಂಗಪ್ಪನವರು, ಇಂದಿರಾ ಗಾಂಧಿ, ರಾಜೀವ್ ಗಾಂಧಿ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಅವರು ಕೂಡ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿದ್ದರು. ಈ ಬಾರಿಯ ಅಧಿವೇಶನವನ್ನು ಗುಜರಾತಿನ ಸಬರಮತಿ ಆಶ್ರಮದಲ್ಲಿ ನಡೆಸುವ ಬಗ್ಗೆ ಚರ್ಚೆ ನಡೆಯಿತು. ನಂತರ ನಾನು ಎಐಸಿಸಿಗೆ ಬೆಳಗಾವಿಯಲ್ಲೇ ನಡೆಸುವ ಪ್ರಸ್ತಾವನೆ ಸಲ್ಲಿಸಿದೆ, ಅವರು ಒಪ್ಪಿದರು.

ಗಾಂಧಿ ಭಾರತ ಕಾರ್ಯಕ್ರಮದ ಭಾಗವಾಗಿ ಅ. 2 ರಂದು ರಾಜ್ಯ ಸರ್ಕಾರದ ವತಿಯಿಂದ ಬೆಂಗಳೂರಿನ ಗಾಂಧಿ ಭವನದಿಂದ ವಿಧಾನಸೌಧದ ಗಾಂಧಿ ಪ್ರತಿಮೆವರೆಗೂ ಹೆಜ್ಜೆ ಹಾಕಿದೆವು. ನಂತರ ಪಕ್ಷದ ವತಿಯಿಂದ ಗಾಂಧಿ ವೃತ್ತದಿಂದ ಭಾರತ ಜೋಡೋ ಭವನದವರೆಗೂ ಹೆಜ್ಜೆ ಹಾಕಲಾಗಿತ್ತು. ಈಗ ಮುಂದುವರಿದ ಭಾಗವಾಗಿ ಡಿ. 26 ರಂದು ಬೆಳಗಾವಿಯಲ್ಲಿ ಪಕ್ಷದ ಕಾರ್ಯಕಾರಿ ಸಮಿತಿ ಸಭೆ ನಡೆಯಲಿದೆ. ಈ ಕಾರ್ಯಕ್ರಮಕ್ಕೆ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಕಾರ್ಯಕಾರಿ ಸಮಿತಿಯ ಎಲ್ಲ ಸದಸ್ಯರು, ಎಲ್ಲ ಮುಖ್ಯಮಂತ್ರಿಗಳು, ಶಾಸಕರು, ಸಂಸದರು ಆಗಮಿಸಲಿದ್ದಾರೆ. ಮರುದಿನ ಬೃಹತ್ ಸಾರ್ವಜನಿಕ ಸಮಾವೇಶ ನಡೆಯಲಿದೆ. ಈ ಸಮಾವೇಶಕ್ಕೆ ಪಂಚಾಯ್ತಿ ಸದಸ್ಯರು, ಸಮಿತಿ ಹಾಗೂ ನಿಗಮಗಳ ಸದಸ್ಯರು, ನಾಮನಿರ್ದೇಶಿತರು ಸೇರಿದಂತೆ ಪಕ್ಷದ ಎಲ್ಲಾ ಮುಖಂಡರು, ಕಾರ್ಯಕರ್ತರು ಆಗಮಿಸಲಿದ್ದಾರೆ.



ಈ ಮಧ್ಯೆ ಸುವರ್ಣಸೌಧದ ಬಳಿ ಗಾಂಧಿ ಪ್ರತಿಮೆ ಉದ್ಘಾಟನೆ ಮಾಡಲಾಗುತ್ತಿದ್ದು, ಈ ಕಾರ್ಯಕ್ರಮಕ್ಕೆ ಎಲ್ಲ ಪಕ್ಷದ ಶಾಸಕರು ಹಾಗೂ ಪರಿಷತ್ ನಾಯಕರಿಗೂ ಆಹ್ವಾನ ನೀಡಲಾಗುವುದು. ಸ್ಪೀಕರ್ ಹಾಗೂ ಸಭಾಪತಿಗಳ ನೇತೃತ್ವದಲ್ಲಿ ಈ ಕಾರ್ಯಕ್ರಮ ನಡೆಯಲಿದೆ.

ಈ ಕಾರ್ಯಕ್ರಮ ನಡೆಯಲಿರುವ ಜಾಗಗಳಿಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳು ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ನಂತರ ಇತರೆ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುವುದು. ಅವಕಾಶ ನಮ್ಮನ್ನು ಹುಡುಕಿಕೊಂಡು ಬರುವುದಿಲ್ಲ. ನಾವೇ ಅವಕಾಶಗಳನ್ನು ಹುಡುಕಿಕೊಂಡು ಹೋಗಬೇಕು ಎಂದು ಇಂದಿರಾ ಗಾಂಧಿ ಅವರು ಹೇಳಿದ್ದಾರೆ. ಇಂದಿರಾ ಗಾಂಧಿ ಅವರ ನುಡಿಮುತ್ತುಗಳ ಬಗ್ಗೆ ಸೋನಿಯಾ ಗಾಂಧಿ ಅವರು ಒಂದು ಪುಸ್ತಕ ಬರೆದಿದ್ದಾರೆ. ಆ ಪುಸ್ತಕವನ್ನು ನಾನು ಕನ್ನಡಕ್ಕೆ ಅನುವಾದ ಮಾಡಿಸಿದ್ದು, ಗಾಂಧಿ ಭಾರತ ಕಾರ್ಯಕ್ರಮದ ವೇಳೆ ಬಿಡುಗಡೆ ಮಾಡಲಾಗುವುದು. ಬೆಳಗಾವಿ ವಲಯದ ಎಲ್ಲಾ ನಾಯಕರ ಜತೆ ಕಾಂಗ್ರೆಸ್ ಕಚೇರಿಯಲ್ಲಿ ಸಭೆ ಮಾಡಲಿದ್ದು, ಕಾರ್ಯಕ್ರಮದ ಪೂರ್ವಸಿದ್ಧತೆ ಬಗ್ಗೆ ಚರ್ಚೆ ಮಾಡಲಾಗುವುದು."

**ಸಿದ್ದರಾಮಯ್ಯ ಅನ್ಯಾಯ ಮಾಡಿಲ್ಲ:** ಪಂಚಮಸಾಲಿ ಮೀಸಲಾತಿ ವಿಚಾರವಾಗಿ ಸಿದ್ದರಾಮಯ್ಯ ನಮ್ಮ ಸಮಾಜಕ್ಕೆ ಅನ್ಯಾಯ ಮಾಡಿಲ್ಲ ಎಂಬ ಸ್ವಾಮೀಜಿಗಳ ಹೇಳಿಕೆ ಬಗ್ಗೆ ಕೇಳಿದಾಗ, "ಸಿದ್ದರಾಮಯ್ಯ ಅವರು ಅನ್ಯಾಯ ಮಾಡಿಲ್ಲ. ಈ ವಿಚಾರವಾಗಿ ಸಿದ್ದರಾಮಯ್ಯ ಅವರು ಈಗಾಗಲೇ ಸ್ಪಷ್ಟನೆ ನೀಡಿದ್ದಾರೆ" ಎಂದು ತಿಳಿಸಿದರು.

ಮಾಣಿಪ್ಪಾಡಿ ಅವರ ಆರೋಪ ಪ್ರಕರಣ ಸಿಬಿಐ ತನಿಖೆಗೆ ವಹಿಸುವಂತೆ ವಿಜಯೇಂದ್ರ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಮುಂದೆ ಈ ವಿಚಾರವಾಗಿ ಚರ್ಚೆ ಮಾಡೋಣ" ಎಂದರು. ಖರ್ಗೆ ಅವರು ವಕ್ಫ್ ಆಸ್ತಿ ಕಬಳಿಕೆ ಮಾಡಿದ್ದಾರೆ ಎಂಬ ಮಾಣಿಪ್ಪಾಡಿ ಅವರ ಆರೋಪದ ಬಗ್ಗೆ ಕೇಳಿದಾಗ, "ಈ ವಿಚಾರವಾಗಿ ದಾಖಲೆ ಸಮೇತ ಸದನದಲ್ಲಿ ಚರ್ಚೆ ಮಾಡೋಣ" ಎಂದರು.

## ಮೊದಲ ಪುಟದಿಂದ

### ಸಚಿವರ ನಿರಾಸಕ್ತಿ

ನಡೆಸುವುದು. ಈ ಬಾರಿ ಶಾಸಕರ ಪ್ರಶಸ್ತಿಯನ್ನು ಸಭಾಧ್ಯಕ್ಷರಿಗೆ ಕೊಡಬೇಕು ಎಂದರು.

ಆಗ ಸಭಾಧ್ಯಕ್ಷರು, ಐದು ನಿಮಿಷದಲ್ಲಿ ಸಚಿವರು ಬರುತ್ತಾರೆ. ಕಲಾಪ ಆರಂಭಿಸೋಣ ಎಂದು ಹೇಳಿದರು. ಬಿಜೆಪಿ ಶಾಸಕ ಭೈರತಿ ಬಸವರಾಜು ಅವರು ನಿನ್ನೆ ತಡರಾತ್ರಿಯವರೆಗೂ ಸದನ ನಡೆಸಿರುವುದನ್ನು ಗಮನದಲ್ಲಿಟ್ಟುಕೊಂಡು ಗಿನ್ನಿಸ್ ದಾಖಲೆ ಮಾಡಲು ಹೊರಟಿದ್ದೀರಿ ಎಂದರು. ಗುರುರಾಜ ಶೆಟ್ಟಿ ಗಂಟಿಹೊಳಿ ಅವರು, ಕಾರ್ಯಕಲಾಪಗಳ ಪಟ್ಟಿಯಲ್ಲಿದ್ದ ಎಲ್ಲಾ ವಿಚಾರಗಳಿಗೂ ಸಮಯ ಕೊಟ್ಟು ಸದನ ಕಾರ್ಯಕಲಾಪಗಳನ್ನು ನಡೆಸಿದ್ದೀರಿ. ಅದಕ್ಕಾಗಿ ಅಭಿನಂದನೆ ಸಲ್ಲಿಸುತ್ತೇನೆ ಎಂದರು. ಮತ್ತೊಬ್ಬ ಬಿಜೆಪಿ ಶಾಸಕ ಪ್ರಭು ಚವ್ಹಾಣ್ ಅವರು, ತಡರಾತ್ರಿವರೆಗೂ ಸದನದ ಕಾರ್ಯಕಲಾಪ ನಡೆಸಿರುವುದಕ್ಕೆ ಅಭಿನಂದಿಸುತ್ತೇನೆ ಎಂದು ಹೇಳಿದರು.

### ಮಾಫಿಯಾದಲ್ಲಿ ಸರ್ಕಾರ

ರಾಜ್ಯದ ಸರ್ಕಾರಿ ಆಸ್ಪತ್ರೆಗಳಿಗೆ ಸರಬರಾಜಾಗುತ್ತಿರುವ ಔಷಧಿಗಳು ಕಳಪೆ ಗುಣಮಟ್ಟದಿಂದ ಕೂಡಿವೆ. ಔಷಧಿ ಗುಣಮಟ್ಟ ಪರೀಕ್ಷಿಸುವ ವೈದ್ಯಕೀಯ ಸರಬರಾಜು ನಿಗಮದಲ್ಲಿನ ಕಾರ್ಯ ವಿಧಾನದ ಬಗ್ಗೆ ಪ್ರಶ್ನೆ ಮೂಡಿದೆ. ಬಡವರು, ಸಾರ್ವಜನಿಕರು ಉತ್ತಮ ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆ ಅವಲಂಬಿಸುವ ಅನಿವಾರ್ಯತೆ ಇದೆ. 6 ತಿಂಗಳ ಹಿಂದೆಯೇ ಬಳಸಲಾಗದ ಔಷಧಿಗಳನ್ನು ಬಳಸಲಾಗುತ್ತಿದೆ. ಬೆಂಗಳೂರಿನ ಜಯನಗರ ಕ್ಷೇತ್ರದ ಕ್ಯಾನ್ಸರ್ ಪೀಡಿತ ರೋಗಿಗಳು ತಾವೇ ಔಷಧಿ ತೆಗೆದುಕೊಳ್ಳುವ, ಚುಚ್ಚುಮದ್ದು ತೆಗೆದುಕೊಳ್ಳುವ ಪರಿಸ್ಥಿತಿ ಉಂಟಾಗಿದೆ. ಈ ಬಗ್ಗೆ ವಿಸ್ತೃತ ಚರ್ಚೆಗೆ ಅವಕಾಶ ಮಾಡಿಕೊಡಬೇಕು ಎಂದು ಕೋರಿದರು. ಇದಕ್ಕೆ ದನಿಗೂಡಿಸಿದ ಬಿಜೆಪಿ ಶಾಸಕ ಸಿ.ಎನ್. ಅಶ್ವತ್ಥನಾರಾಯಣ, ಆರೋಗ್ಯ ಸೇವೆಯನ್ನು ಸರ್ಕಾರ ಕಡೆಗಣಿಸಿದೆ. ಜನರಿಗೆ ಆರೋಗ್ಯ ಗ್ಯಾರಂಟಿಯೂ ಬೇಕು ಎಂದು ಆಗ್ರಹಿಸಿದರು. ಇತರ ಬಿಜೆಪಿ ಶಾಸಕರು ದನಿಗೂಡಿಸಿ ಮಾತನಾಡಿದರು.ಸಭಾಧ್ಯಕ್ಷ ಯು.ಟಿ.ಖಾದರ್ ಮಾತನಾಡಿ, ನಿಲುವಳಿ ಸೂಚನೆ ಬದಲಾಗಿ ನಿಯಮ 69ರಡಿ ಅರ್ಧಗಂಟೆ ಚರ್ಚೆಗೆ ಅವಕಾಶ ಮಾಡಿಕೊಡಲಾಗುವುದು. ಈಗ ಉತ್ತರ ಕರ್ನಾಟಕದ ಅಭಿವೃದ್ಧಿ ಕುರಿತ ಚರ್ಚೆ ಆರಂಭಿಸೋಣ ಎಂದು ಈ ವಿಚಾರದ ಚರ್ಚೆಗೆ ತೆರೆ ಎಳೆದರು.

### ರೋಹನ್ ಜೇಟ್ಲಿ ಮರು ಆಯ್ಕೆ

ಕಳೆದ 2020 ರಲ್ಲಿ, ರೋಹನ್ ಡಿಡಿಸಿಎ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು ಮತ್ತು ಒಂದು ವರ್ಷದ ನಂತರ ಚುನಾವಣೆಯಲ್ಲಿ ವಕೀಲ ವಿಕಾಸ್ ಸಿಂಗ್ ಅವರನ್ನು ಸೋಲಿಸಿದರು. ಮಾಜಿ ಬಿಸಿಸಿಐ ಅಧ್ಯಕ್ಷ ಸಿಕೆ ಖನ್ನಾ ಅವರ ಪುತ್ರಿ ಶಿಖಾ ಕುಮಾರ್ (1,246 ಮತಗಳು) ಅವರು ರಾಕೇಶ್ ಕುಮಾರ್ ಬನ್ಸಾಲ್ (536) ಮತ್ತು ಸುಧೀರ್ ಕುಮಾರ್ ಅಗರ್ವಾಲ್ (498) ಅವರನ್ನು ಸೋಲಿಸಿ ಉಪಾಧ್ಯಕ್ಷ ಸ್ಥಾನವನ್ನು ಪಡೆದರು.ಅಶೋಕ್ ಶರ್ಮಾ (893) ಕಾರ್ಯದರ್ಶಿಯಾದರು, ಖಜಾಂಚಿ ಸ್ಥಾನಕ್ಕೆ ಹರೀಶ್ ಸಿಂಗ್ಲಾ (1328) ಮತ್ತು ಜಂಟಿ ಕಾರ್ಯದರ್ಶಿ ಸ್ಥಾನಕ್ಕೆ ಅಮಿತ್ ಗ್ರೊವರ್ (1189) ಆಯ್ಕೆಯಾದರು. ಇನ್ನುಳಿದಂತೆ ಆನಂದ್ ವರ್ಮಾ (985), ಮಂಜಿತ್ ಸಿಂಗ್ (1050), ನವದೀಪ್ ಎಂ (1034), ಶ್ಯಾಮ್ ಶರ್ಮಾ (1165), ತುಷಾರ್ ಸೈಗಲ್ (926), ವಿಕಾಸ್ ಕತ್ಯಾಲ್ (1054), ವಿಕ್ರಮ್ ಕೊಹ್ಲಿ (939) ನಿರ್ದೇಶಕರ ಸ್ಥಾನವನ್ನು ಪಡೆದುಕೊಂಡಿದ್ದಾರೆ.

### ಮಸೂದೆ ಮಂಡನೆ

ಮಸೂದೆಗೆ ಒಪ್ಪಿಗೆ ನೀಡಲಾಗಿದೆ. ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಿಗೆ ಏಕಕಾಲದಲ್ಲಿ ಚುನಾವಣೆ ನಡೆಸುವುದು ಇದರ ಉದ್ದೇಶವಾಗಿದೆ.

### ತಿಮ್ಮಕ್ಕ ಆಸ್ಪತ್ರೆಗೆ ದಾಖಲು

ಕೆಲವು ದಿನಗಳಿಂದ ಐಸಿಯುನಲ್ಲಿ ಚಿಕಿತ್ಸೆ ನೀಡಲಾಗಿತ್ತು. ಇದೀಗ ಅವರ ಸ್ಥಿತಿ ಸ್ಥಿರವಾಗಿದೆ. ಡಿಸೆಂಬರ್ 17 ಅಥವಾ 18 ರಂದು ಡಿಸ್ಚಾರ್ಜ್ ಮಾಡಲಾಗುವುದು ಎಂದು ತಿಳಿಸಿದ್ದಾರೆ. ತಿಮ್ಮಕ್ಕ ಅವರ ಪುತ್ರ ಉಮೇಶ್ ಮಾತನಾಡಿ, ತಾಯಿಗೆ 113 ವರ್ಷ, ಆಕೆಯ ಆರೋಗ್ಯ ಸ್ಥಿತಿ ಹದಗೆಟ್ಟ ಹಿನ್ನೆಲೆಯಲ್ಲಿ ಜಯನಗರದ ಅಪೋಲೋ ಆಸ್ಪತ್ರೆಗೆ ಕರೆದೊಯ್ದೆವು, ಈಗ ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಎಂದು ಹೇಳಿದ್ದಾರೆ. ನೂರಾರು ಮರಗಳ ಪಾಲನೆ ಪೋಷಣೆ ಮೂಲಕ ವೃಕ್ಷಮಾತೆಯೆಂದೇ ಹೆಸರಾಗಿರುವ ಸಾಲುಮರದ ತಿಮ್ಮಕ್ಕ, ಈವರೆಗೆ ಲಕ್ಷಾಂತರ ಸಸಿ ನೆಟ್ಟಿದ್ದಾರೆ.

### ಮೂವರು ಅಧಿಕಾರಿಗಳ ಸಾವು

ಲಾರಿ ಚಾಲಕನನ್ನು ಪೊಲೀಸರು ಬಂಧಿಸಿದ್ದಾರೆ. ಶಿವರಾಜ್ ಹಾಗೂ ಮಲ್ಲಿಕಾರ್ಜುನ ಲಿಂಗಸುಗೂರು ತಾಲೂಕಿನ ಮಹೆಬೂಬ್ ಸಿಂಧನೂರು ಪಟ್ಟಣದವರು ಎಂದು ತಿಳಿದು ಬಂದಿದೆ.

ಜವಳಗೇರಾದಲ್ಲಿ ಕಚೇರಿ ಕೆಲಸ ಮುಗಿಸಿಕೊಂಡು ಸಿಂಧನೂರಿಗೆ ಬಂದು, ಪಿಡಬ್ಲ್ಯೂಡಿ ಕ್ಯಾಂಪ್ ನ ಡಾಲರ್ಸ್ ಕಾಲೋನಿಗೆ ತೆರಳುವ ಮುಖ್ಯರಸ್ತೆಯ ಬಳಿ ಬೈಕ್ ನಿಲ್ಲಿಸಿಕೊಂಡು ಮೂವರು ಮಾತನಾಡುತ್ತಾ ನಿಂತಿದ್ದರು. ಇದೇ ವೇಳೆ, ರಾಯಚೂರಿನಿಂದ ಸಿಂಧನೂರು ಕಡೆ ಬರುತ್ತಿದ್ದ ಭತ್ತದ ಹೊಟ್ಟಿನ ಚೀಲಗಳನ್ನು ತುಂಬಿಕೊಂಡು ವೇಗವಾಗಿ ಬಂದ ಲಾರಿ ಪಲ್ಟಿಯಾಗಿದೆ. ಘಟನೆಯಲ್ಲಿ ರಸ್ತೆ ಬದಿ ನಿಂತವರ ಮೇಲೆಯೇ ಚೀಲಗಳು ಉರುಳಿ ಬಿದ್ದಿದ್ದು, ಅದರಡಿ ಸಿಲುಕಿ ಮೂವರೂ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

### ಜೈಲಿನಿಂದ ಹೊರಬಂದ ಪವಿತ್ರಾ

ಕಾರಣ ನೀಡಿಲ್ಲ. ಹೀಗಾಗಿ ಕಾನೂನಿನ ಈ ಲೋಪದ ಆಧಾರದಡಿ ಎಲ್ಲರ ಜಾಮೀನು ಅರ್ಜಿಗಳನ್ನು ಪುರಸ್ಕರಿಸಲಾಗುತ್ತಿದೆ ಎಂದು ನ್ಯಾಯಪೀಠ ತನ್ನ 68 ಪುಟಗಳ ತೀರ್ಪಿನಲ್ಲಿ ಹೇಳಿತ್ತು.

**ಮಾಜಿ ಪತಿ ಸಂತಸ:** ನಟಿ ಪವಿತ್ರಾ ಜಾಮೀನು ಪಡೆದು ಜೈಲಿನಿಂದ ಹೊರ ಬಂದ ವಿಷಯ ತಿಳಿದು ಮಾಜಿ ಪತಿ ಸಂಜಯ್ ಸಿಂಗ್ ಸಂತಸ ವ್ಯಕ್ತ ಪಡಿಸುತ್ತಿದ್ದಾರೆ ಅಲ್ಲದೆ ತಮ್ಮ ಮಗಳಾದ ಖುಷಿಯನ್ನು ಸಂಪರ್ಕ ಮಾಡುವುದಾಗಿಯೂ ಹೇಳುತ್ತಿದ್ದಾರೆ. ಆದರೆ ಈಗಲೂ ಪವಿತ್ರಾ ಗೌಡ ತಪ್ಪು ಮಾಡಿಲ್ಲ ಎಂದು ತಮ್ಮ ಅಭಿಪ್ರಾಯವನ್ನು ಹಂಚಿಕೊಂಡಿದ್ದಾರೆ.ಈ ಪ್ರಕರಣಕ್ಕೆ ಪವಿತ್ರ ಗೌಡ ಕಾರಣ ಆಗಿರಬಹುದು ಆದರೆ ಆಕೆ ಯಾವುದೇ ತಪ್ಪು ಮಾಡಿಲ್ಲ ಎಂದಿದ್ದಾರೆ.

ಅಂತಾರಾಜ್ಯ ಕಳ್ಳರ ಬಂಧನ

# 14 ಲಕ್ಷ ರೂ.ಬೆಲೆ ಬಾಳುವ ಮಾಲು ವಶ–ಎಸ್‌ಪಿ ಮಾಹಿತಿ




**ಚಿಕ್ಕಬಳ್ಳಾಪುರ:** ಕೆಲ ತಿಂಗಳ ಹಿಂದೆ ದಾಖಲಾಗಿದ್ದ ಮನೆಗಳ ಮತ್ತು ವಾಹನಕಳ್ಳರ ಪ್ರಕರಣವನ್ನು ಬೆನ್ನತ್ತಿದ ನಮ್ಮ ವಿಶೇಷ ತನಿಖಾ ತಂಡ, ಪ್ರಕರಣವನ್ನು ಭೇದಿಸಿ ಅಂತಾರಾಜ್ಯ ಕಳ್ಳರನ್ನು ಬಂಧಿಸಿ ಒಡವೆ ಮತ್ತು 21 ದ್ವಿಚಕ್ರ ಸೇರಿ ಒಟ್ಟು ಸುಮಾರು 14 ಲಕ್ಷ ರೂ. ಬೆಲೆ ಬಾಳುವ ಮಾಲಾನ್ನು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ ತಿಳಿಸಿದ್ದಾರೆ.

ದ್ವಿಚಕ್ರ ವಾಹನ ಹಾಗೂ ಒಂಟಿ ಮನೆ ಟಾರ್ಗೆಟ್ ಮಾಡಿ ಚಿನ್ನಾಭರಣ ಕಳ್ಳತನ ಮಾಡುತ್ತಿದ್ದ ಆಂಧ್ರಪ್ರದೇಶದ ನಾಲ್ವರು ಕಳ್ಳರನ್ನು ಬಂಧಿಸಿರುವ ಬಾಗೇಪಲ್ಲಿ ಪೊಲೀಸರು ಸುಮಾರು 10 ಲಕ್ಷ ರೂ. ಬೆಲೆಬಾಳುವ 20 ದ್ವಿಚಕ್ರ ವಾಹನಗಳು ಹಾಗೂ 4 ಲಕ್ಷ ರೂ, ಬೆಲೆ ಬಾಳುವ 58 ಗ್ರಾಂ ಚಿನ್ನದ ಒಡವೆ ವಶಪಡಿಸಿಕೊಳ್ಳಲಾಗಿದೆ.

ಬಂಧಿತರಾದ ಆಂಧ್ರಪ್ರದೇಶದ ಸತ್ಯಸಾಯಿ ಜಿಲ್ಲೆ ಹಿಂದುಪುರ ತಾಲೂಕಿನ ಕೆ. ಮಣಿಕಂಠ, ವೆಂಕಟೇಶ್, ಸುರೇಶ್ ಹಾಗೂ ಪೆನುಗೊಂಡ ತಾಲೂಕಿನ ಸುಮಂತ್ ಕೆ, ಮಣಿಕಂಠ ಹಾಗೂ ಸುಮಂತ್ ದ್ವಿಚಕ್ರ ವಾಹನ ಕಳ್ಳತನ ಪ್ರಕರಣದಲ್ಲಿ ಬಂಧಿತರಾಗಿದ್ದಾರೆ.

ಆರೋಪಿಗಳು ಬಾಗೇಪಲ್ಲಿ, ಯಲಹಂಕ ನ್ಯೂ ಟೌನ್, ಕೊಪ್ಪಳ ನಗರ, ಸಿಂಧನೂರು, ಕಾಮಾಕ್ಷಿಪಾಳ್ಯ, ಮಂಚೇನಹಳ್ಳಿ, ಮಾದನಾಯಕನಹಳ್ಳಿ, ಹಿರಿಯೂರು ನಗರ ಠಾಣೆಗಳ ವ್ಯಾಪ್ತಿಯಲ್ಲಿ ನಡೆದಿದ್ದ ದ್ವಿಚಕ್ರ ವಾಹನ ಕಳವು ಪ್ರಕರಣಗಳಲ್ಲಿ ಭಾಗಿಯಾಗಿದ್ದು, ಬಾಗೇಪಲ್ಲಿ ತಾಲೂಕಿನ ಎಚ್.ವೆಂಕಟಚಾರಿ ನೀಡಿರುವ ದೂರಿನನ್ವಯ ತನಿಖೆ ಕೈಗೊಂಡ ಪೊಲೀಸರು ಕಳ್ಳರನ್ನು ಬಂಧಿಸಿ ದ್ವಿಚಕ್ರ ವಾಹನ ವಶಪಡಿಸಿಕೊಂಡಿದ್ದಾರೆ.

ಬಾಗೇಪಲ್ಲಿ ಪೊಲೀಸ್ ಠಾಣೆ ಸರಹದ್ದಿಗೆ ಹೊಂದಿಕೊಂಡಿರುವ ಆಂಧ್ರಪ್ರದೇಶದ ಸತ್ಯಸಾಯಿ ಜಿಲ್ಲೆಯ ಹಿಂದೂಪುರ ತಾಲೂಕಿನ ಕೆ.ಮಣಿಕಂಠ, ವೆಂಕಟೇಶ್ ಬಾಬು, ಸುರೇಶ್ ಹಾಗೂ ಪೆನುಕೊಂಡ ತಾಲೂಕಿನ ಸುಮಂತ್ ಸೇರಿ ನಾಲ್ವರು ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ ತಿಳಿಸಿದ್ದಾರೆ.

ಈ ಕಾರ್ಯಾಚರಣೆಯಲ್ಲಿ ಪೊಲೀಸ್ ಇನ್ಸ್ ಪೆಕ್ಟರ್ ಪ್ರಶಾಂತ್ ವರ್ಣಿ, ಸಬ್ ಇನ್ಸ್ ಪೆಕ್ಟರ್ ಮುನಿರತ್ನಂ, ಪೇದೆಗಳಾದ ಧನಂಜಯ ಕುಮಾರ್, ಸುರೇಶ್, ಮೋಹನ್ ಕುಮಾರ್, ಸಾಗರ್, ಅನಿಲ್ ಕುಮಾರ್, ನಾಗೇಶ್, ಕೃಷ್ಣಪ್ಪ, ಜಯಣ್ಣ, ಶಂಕರಪ್ಪ, ರಾಜಪ್ಪ, ಜೀಪ್ ಚಾಲಕ ನೂರ್ ಬಾಷ, ಸಿಬ್ಬಂದಿ ರವಿಕುಮಾರ್, ಮುರಳಿಕೃಷ್ಣ, ಹಾಜರಿದ್ದರು.

## ಕರ್ನಾಟಕಾದ್ಯಂತ 69 ಕೇಂದ್ರಗಳಲ್ಲಿ ಕರ್ನಾಟಕ ರಸಪ್ರಶ್ನೆ ಆಯೋಜನೆ: ಎಂ ವೆಂಕಟೇಶ ಶೇಷಾದ್ರಿ



**ಹೊಸಕೋಟೆ:** ಬೆಂಗಳೂರಿನ ಬ್ಯಾಂಕರ್ಸ್ ಕನ್ನಡಿಗರ ಬಳಗದವರು ಹಾರೋಹಳ್ಳಿ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ–ಉದ್ಯೋಗ ತರಬೇತಿ ಸಂಸ್ಥೆಯ ಸಹಯೋಗದೊಂದಿಗೆ ಸಂಸ್ಥೆಯ ಸಭಾಂಗಣದಲ್ಲಿ ಶಿಬಿರಾರ್ಥಿಗಳಿಗೆ ಕರ್ನಾಟಕ ರಸಪ್ರಶ್ನೆ ಸ್ಪರ್ಧೆಯನ್ನು ಏರ್ಪಡಿಸಿತ್ತು.

90ಕ್ಕೂ ಹೆಚ್ಚು ಶಿಬಿರಾರ್ಥಿಗಳು ಈ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಸುದರ್ಶನ್ ಕುಮಾರ್, ದಿಲೀಪ್, ಚಿಂತನ್ ಕುಮಾರ್, ಜಯಶ್ರೀ, ಶಿವರತ್ನ, ವರಲಕ್ಷ್ಮಿ, ಲಕ್ಷ್ಮಿ, ಜನನಿ ಮತ್ತು ನಿರ್ಮಲ ಸ್ಪರ್ಧೆಯಲ್ಲಿ ಭಾಗವಹಿಸಿ, ವಿಜೇತರಾದರು.

ಬಹುಮಾನ ವಿತರಣೆಯ ನಂತರ ಮಾತನಾಡಿದ ಬಳಗದ ಅಧ್ಯಕ್ಷ ಶ್ರೀ ಎಂ ವೆಂಕಟೇಶ ಶೇಷಾದ್ರಿ, ಬೆಂಗಳೂರಿನ ಬ್ಯಾಂಕರ್ಸ್ ಕನ್ನಡಿಗರ ಬಳಗದವರು 69ನೇ ಕನ್ನಡ ರಾಜ್ಯೋತ್ಸವ ಸುಸಂದರ್ಭದಲ್ಲಿ ಕರ್ನಾಟಕದ ರಾಜ್ಯಾದ್ಯಂತ 69 ಕೇಂದ್ರಗಳಲ್ಲಿ ಕರ್ನಾಟಕ ರಸಪ್ರಶ್ನೆ ಸ್ಪರ್ಧೆ ಏರ್ಪಡಿಸುವುದರ ಜೊತೆಗೆ 69 ಸರಕಾರಿ ಶಾಲೆಗಳ ಗ್ರಂಥಾಲಯಕ್ಕೆ ಕನ್ನಡ ಪುಸ್ತಕಗಳನ್ನು ಉಡುಗೊರೆಯಾಗಿ ನೀಡಲಿದೆ ಎಂದರು.

ಈ ಕಾರ್ಯಕ್ರಮದಲ್ಲಿ ಬಳಗದ ಕಾರ್ಯದರ್ಶಿ ಕೆ ಜಿ ಸಂಪತ್ ಕುಮಾರ್, ಹಾರೋಹಳ್ಳಿ ಸ್ವ–ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರಾದ ವಿ ಚಂದ್ರ ಚರಣ್, ಹಾರೋಹಳ್ಳಿ ಪ್ರಥಮ ದರ್ಜೆ ಪದವಿ ಕಾಲೇಜಿನ ಉಪನ್ಯಾಸಕರಾದ ನಾಗಭೂಷಣ್, ಸಾವಯವ ಕೃಷಿಕರು ಹಾಗೂ ಯೋಗ ಶಿಕ್ಷಕರಾದ ಮಂಜೇಶ್, ಸಂಪನ್ಮೂಲ ವ್ಯಕ್ತಿಗಳಾದ ನಾಗರಾಜ್, ವೇಣುಗೋಪಾಲ್, ನೇತ್ರಾ ಉಪಸ್ಥಿತರಿದ್ದರು.

## ಯಶಸ್ವಿಯಾಗಿ ನಡೆದ ರಾಷ್ಟ್ರೀಯ ಲೋಕ್ ಅದಾಲತ್



**ಮೈಸೂರು:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಶನಿವಾರ ಮೈಸೂರು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿಯಿರುವ ಪ್ರಕರಣಗಳಲ್ಲಿ ಕಾನೂನಿನ ಪ್ರಕಾರ ರಾಜಿಯಾಗಬಹುದಾದ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸುವ ಉದ್ದೇಶದಿಂದ ರಾಷ್ಟ್ರೀಯ ಲೋಕ್ ಅದಾಲತ್ ನ್ನು ಹಮ್ಮಿಕೊಳ್ಳಲಾಗಿತ್ತು.

ಮೈಸೂರು ನಗರ ಮತ್ತು ತಾಲ್ಲೂಕುಗಳಲ್ಲಿನ ನ್ಯಾಯಾಲಯಗಳಲ್ಲಿ ವಿಚಾರಣೆಗೆ ಬಾಕಿಯಿದ್ದ ಒಟ್ಟು 1,19,788 ಪ್ರಕರಣಗಳಲ್ಲಿ 59,490 ಸಿವಿಲ್ ಪ್ರಕರಣಗಳು ಹಾಗೂ 60,298 ಕ್ರಿಮಿನಲ್ ಪ್ರಕರಣಗಳಿದ್ದು, ಸದರಿ ಪ್ರಕರಣಗಳಲ್ಲಿ 39,980 ಪ್ರಕರಣಗಳನ್ನು ರಾಜಿಯಾಗಬಹುದಾದ ಪ್ರಕರಣಗಳಿದ್ದು, ಅವುಗಳ ಪೈಕಿ 26,866 ರಾಜಿ ಸಂಧಾನಕ್ಕಾಗಿ ತೆಗೆದುಕೊಳ್ಳಲಾಗಿತ್ತು. ರಾಜಿ ಸಂಧಾನಕ್ಕಾಗಿ ತೆಗೆದುಕೊಂಡ ಪ್ರಕರಣಗಳಲ್ಲಿ (ನ್ಯಾಯಾಲಯದಲ್ಲಿ ಬಾಕಿ ಇರುವ) 6,425 ಪ್ರಕರಣಗಳನ್ನು ಪ್ರಕರಣಗಳನ್ನು ರಾಷ್ಟ್ರೀಯ ಲೋಕ್ ಅದಾಲತ್ನಲ್ಲಿ ಇತ್ಯರ್ಥಪಡಿಸಲಾಗಿರುತ್ತದೆ.

ಈ ಬಾರಿ ರಾಷ್ಟ್ರೀಯ ಲೋಕ್ ಅದಾಲತ್ನಲ್ಲಿ ಕೌಟುಂಬಿಕ ವಿವಾದದ ಪ್ರಕರಣಗಳಲ್ಲಿ ಮೈಸೂರು ನಗರ ಹಾಗೂ ಮೈಸೂರು ತಾಲ್ಲೂಕು ನ್ಯಾಯಾಲಯಗಳಿಗೆ ಸಂಬಂಧಿಸಿದಂತೆ ಒಟ್ಟು 41 ದಂಪತಿಗಳು ತಮ್ಮ ಮಧ್ಯದ ವ್ಯಾಜ್ಯಗಳನ್ನು ಬಗೆಹರಿಸಿಕೊಂಡು ಒಂದಾಗಿರುತ್ತಾರೆ.

ರಾಷ್ಟ್ರೀಯ ಲೋಕ್ ಅದಾಲತ್ನಲ್ಲಿ ಒಟ್ಟಾರೆಯಾಗಿ 6,425 ನ್ಯಾಯಾಲಯದಲ್ಲಿ ಬಾಕಿಯಿದ್ದ ಪ್ರಕರಣಗಳು ತೀರ್ಮಾನವಾಗಿರುತ್ತದೆ. ಎಲ್ಲಾ ಪ್ರಕರಣಗಳಿಗೆ ಸಂಬಂಧಿಸಿದಂತೆ ರಾಜಿ ಸಂಧಾನ ಮೂಲಕ ಒಟ್ಟು ರೂ.56,24,12,963 ಗಳು ಇತ್ಯರ್ಥವಾಗಿರುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ದಿನೇಶ್ ಬಿ.ಜಿ ಅವರು ತಿಳಿಸಿದ್ದಾರೆ.

## ತಾಲ್ಲೂಕು ಕೃಷಿಕ ಸಮಾಜ ಕಾರ್ಯಕಾರಿ ಸಮಿತಿಗೆ ಸದಸ್ಯರ ಅವಿರೋಧ ಆಯ್ಕೆ



**ಚಿಕ್ಕಬಳ್ಳಾಪುರ:** ತಾಲ್ಲೂಕು ಕೃಷಿಕ ಸಮಾಜ ಇದರ 2025–2026 ರಿಂದ 2029–2030 ನೇ ಸಾಲಿನ ಐದು ವರ್ಷಗಳ ಅವಧಿಗೆ ತಾಲ್ಲೂಕು ಕೃಷಿಕ ಸಮಾಜದ ಚುನಾವಣೆಯಲ್ಲಿ 29 ಕಾರ್ಯಕಾರಿ ಸಮಿತಿ ಸದಸ್ಯತ್ವಕ್ಕೆ ನಾಮಪತ್ರವನ್ನು ಸಲ್ಲಿಸಿರುತ್ತಾರೆ.

ನಾಮಪತ್ರವನ್ನು ಪರಿಶೀಲಿಸಲಾಗಿದ್ದು, ಎಲ್ಲಾ ನಾಮಪತ್ರಗಳು ಕ್ರಮ ಬದ್ಧವಾಗಿರುತ್ತವೆ ಘೋಷಿಸಲಾಗಿರುತ್ತದೆ. ಒಟ್ಟು 29 ಉಮೇದುದಾರರಲ್ಲಿ 14 ಅಭ್ಯರ್ಥಿಗಳು ತಮ್ಮ ನಾಮಪತ್ರವನ್ನು ವಾಪಸ್ಸು ಪಡೆದಿರುತ್ತಾರೆ.

ಅಂತಿಮ ಕಣದಲ್ಲಿ ಒಟ್ಟು 15 ಉಮೇದುದಾರರು ಉಳಕೆಯಾಗಿರುವುದರಿಂದ ಕಾರ್ಯಕಾರಿ ಸಮಿತಿಗೆ ಎಲ್ಲಾ ಸದಸ್ಯರು ಅವಿರೋಧವಾಗಿ ಆಯ್ಕೆಯಾಗಿರುತ್ತಾರೆಂದು ಅಂತಿಮ ಫಲಿತಾಂಶವನ್ನು ಘೋಷಣೆ ಮಾಡಲಾಗಿರುತ್ತದೆ ಹಾಗೂ ಈ ಕೆಳಕಂಡವರು ಅವಿರೋಧವಾಗಿ ಆಯ್ಕೆಯಾಗಿರುವ ಸದಸ್ಯರುಗಳಿಗೆ ಪ್ರಮಾಣ ಪತ್ರವನ್ನು ವಿತರಿಸಲಾಯಿತು.

ಅವಿರೋಧವಾಗಿ ಆಯ್ಕೆಯಾಗಿರುವ ಕಾರ್ಯಕಾರಿ ಸಮಿತಿ ಸದಸ್ಯರ ಹೆಸರು ಚಂದ್ರಪ್ಪ, ಎಂ.ಎನ್.ಶ್ರೀನಿವಾಸ್ ಗೌಡ, ಜಿ. ವೆಂಕಟೇಶ, ಎಂ. ರಾಮಾಂಜೀನಪ್ಪ, ಕೆ.ವಿ.ದೇವರಾಜ್, ರಾಮಚಂದ್ರ, ಎಂ.ವೆಂಕಟೇಶ್, ಸಿ.ಮುನಿಕೃಷ್ಣ, ಸೊಕ್ಕಗೌಡ, ಎ.ಎನ್. ವೆಂಕಟರಾಮ್, ಬಿ.ವಿ ಆದಿನಾರಾಯಣಪ್ಪ, ಎಸ್.ವಿ. ಅಶ್ವತ್ತಪ್ಪ, ಎನ್.ಸುಜೇಶ, ಕೆ.ಪಿ. ನಾರಾಯಣಸ್ವಾಮಿ, ಎಂ ರಾಜೇಶ್ ಮುಂತಾದವರು.

## ಪಕ್ಷಾತೀತ ಬೆಂಬಲವಿರುವುದರಿಂದ ಒಳ ಮೀಸಲಾತಿ ಅನುಷ್ಠಾನ ಮಾಡಿಯೇ ತೀರುತ್ತೇವೆ: ಸಚಿವ ಕೆಹೆಚ್ ಮುನಿಯಪ್ಪ

**ಬೆಳಗಾವಿ:** ಬೆಳಗಾವಿಯ ಮಾಲಿನಿ ಗ್ರೌಂಡ್ ನಲ್ಲಿ ನಡೆದ ಸಮಾವೇಶದಲ್ಲಿ ಮಾನ್ಯ ಆಹಾರ ಸಚಿವರಾದ ಕೆಹೆಚ್ ಮುನಿಯಪ್ಪ ನವರು ಸಮಾವೇಶ ಕುರಿತು ಮಾತನಾಡಿದರು.

ನಾನು 40 ವರ್ಷಗಳಿಂದ ಈ ಹೋರಾಟಗಳನ್ನು ಮಾಡುತ್ತಿದ್ದು ನಮಗೆ ಒಂದು ಸಂತಸದ ತೀರ್ಪು ಸುಪ್ರೀಂಕೋರ್ಟ್ ನಿಂದ ಬಂದಿದೆ. ಉಶಾ ಮೆಹ್ತಾ ರವರ ವರದಿಯನ್ನು ಜಾರಿಗೊಳಿಸಲು ಯಾರು ಮುಂದಾಗಲಿಲ್ಲಾ, 2014 ರಿಂದ ನಮ್ಮ ಕಾಂಗ್ರೆಸ್ ಪಕ್ಷದ ಸರ್ಕಾರವಿಲ್ಲದ ಕಾರಣ ಈ ಒಂದು ಮೀಸಲಾತಿಯ ಅನುಷ್ಠಾನವಾಗಲಿಲ್ಲಾ. ನಮ್ಮ ಸರ್ಕಾರ ಈಗಾಗಲೇ ಹೈಕೋರ್ಟ್ ನ ನ್ಯಾಯಾಧೀಶ ನಾಗಮೋಹನ ದಾಸ್ ರವರ ನೇತೃತ್ವದಲ್ಲಿ ಏಕ ಸದಸ್ಯ ಪೀಠವನ್ನು ರಚಿಸಿ 3 ತಿಂಗಳಲ್ಲಿ ವರದಿಯನ್ನು ಪಡೆದು ಜಾರಿಗೊಳಿಸಲು ತೀರ್ಮಾನಿಸಿದ್ದು ಮುಖ್ಯಮಂತ್ರಿ



ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ರವರು ಸಹ ಈ ಒಳ ಮೀಸಲಾತಿ ಜಾರಿಗೊಳಿಸಲು ಬದ್ಧರಾಗಿದ್ದು ಪಕ್ಷಾತೀತವಾಗಿ ಎಲ್ಲಾ ನಾಯಕರ ಬೆಂಬಲವನ್ನು ನೀಡಿದ್ದು ಆದಷ್ಟು ಬೇಗ ಜಾರಿಗೊಳಿಸುತ್ತೇವೆ ಎಂದರು

ನಮ್ಮ ರಾಜ್ಯದ ಪರಿಶಿಷ್ಟಜಾತಿ ಯಲ್ಲಿ ಸುಮಾರು 101 ಉಪ ಜಾತಿಗಳಿದ್ದು ಆಂಧ್ರಪ್ರದೇಶದ ದಲ್ಲಿ ಎಸ್ಸಿ ಸಮುದಾಯದಲ್ಲಿ 57 ಉಪ ಜಾತಿಗಳಿದ್ದು ಈ ಎಲ್ಲಾ ಉಪ ಜಾತಿಗಳಿಗೂ ಕಾನೂನಿ ಪ್ರಕಾರವೇ ಮೀಸಲಾತಿಯನ್ನು ನೀಡಬೇಕಾಗುತ್ತದೆ. ಯಾವ ಜಾತಿಯವರಿಗೂ ತೊಂದರೆಯಾಗದಂತೆ ಎಲ್ಲಾರಿಗೂ ಸಮ ಪಾಲು ಸಮಬಾಲು ಎಂಬ ವಾಖ್ಯದಂತೆ ನಾವು ಒಳ ಮೀಸಲಾತಿಯನ್ನು ನಮ್ಮ ಸರ್ಕಾರ ಅನುಷ್ಠಾನ ಮಾಡುತ್ತದೆ ಎಂದರು.

ಹಂತ ಹಂತವಾಗಿ ಕಾನೂನಿನ ತೊಡಕು ಆಗದಂತೆ ವರದಿ ಪಡೆದು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಮಾಡಿ ಸದನದಲ್ಲಿ ಚರ್ಚಿಸಿ ಇದನ್ನು ಅನುಷ್ಠಾನ ಮಾಡಬೇಕಾಗುತ್ತದೆ. ತಾವು ತಾಳ್ಮೆಯಿಂದ ಇರಬೇಕು ನಮ್ಮ ಸರ್ಕಾರ ಶತಾಯ ಗತಾಯ ಜಾರಿಗೊಳಿಸಲು ಬದ್ದವಾಗಿದೆ ಯಾವುದೇ ಹೋರಾಟಗಳ ಅಗತ್ಯವಿಲ್ಲಾ ತಾವು ಶಾಂತವಾಗಿರಿ ಎಂದರು.

ಈ ಸಂದರ್ಭದಲ್ಲಿ ಶ್ರೀ ಮಾದಾರ ಚನ್ನಯ್ಯಸ್ವಾಮೀಜಿ, ಆನಂದಮುನಿ ಸ್ವಾಮೀಜಿ, ಸಚಿವರಾದ ಮಹದೇವಪ್ಪ, ಆರ್.ಬಿ.ತಿಮ್ಮಾಪುರ,ಸತೀಶ್ ಜಾರಕಿಹೋಳಿ,ವಿರೋಧ ಪಕ್ಷದ ನಾಯಕರಾದ ಆರ್ ಅಶೋಕ್,ಅರವಿಂದ್ ಬೆಲ್ಲದ್, ಸಂಸದ ಗೋವಿಂದ ಕಾರಜೋಳ,ಎ.ನಾರಾಯಣಸ್ವಾಮಿ ಹಾಗೂ ಶಾಸಕರು,ಸಮುದಾಯದ ಮುಖಂಡರು, ಉಪಸ್ಥಿತರಿದ್ದರು.

## ಆಹಾರ ಉದ್ದಿಮೆಗಳು ಆಹಾರ ಸುರಕ್ಷತೆ, ಗುಣಮಟ್ಟ ಕಾಪಾಡಿಕೊಳ್ಳಿ




**ಬೆಂ.ಗ್ರಾ.ಜಿಲ್ಲೆ:** ಹೋಟೆಲ್, ಬೇಕರಿ, ಬೀದಿಬದಿ ಆಹಾರ ಘಟಕಗಳು ಹಾಗೂ ಇತರೆ ಆಹಾರ ತಯಾರಿಕಾ ಉದ್ದಿಮೆಗಳು ಆಹಾರ ಸುರಕ್ಷತೆ ಮತ್ತು ಆಹಾರದ ಗುಣಮಟ್ಟ ಕಾಪಾಡಿಕೊಳ್ಳಿ ಎಂದು ಜಿಲ್ಲಾಧಿಕಾರಿ ಡಾ. ಎನ್ ಶಿವಶಂಕರ್ ಅವರು ಹೇಳಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳಪೆ ಗುಣಮಟ್ಟದ ಆಹಾರದ ಬಗ್ಗೆ ಮಾಧ್ಯಮಗಳಲ್ಲಿ ಆಗಾಗ ಸುದ್ದಿಗಳು ಕಂಡುಬರುತ್ತಿರುತ್ತವೆ. ಆಹಾರ ತಯಾರಿಕೆಗೆ ಕಳಪೆ ಗುಣಮಟ್ಟದ ಪದಾರ್ಥಗಳ ಬಳಕೆ, ಒಮ್ಮೆ ಬಳಸಿದ ಎಣ್ಣೆಯನ್ನು ಮರು ಬಳಕೆ ಮಾಡುವುದು. ಇಂತಹ ಕಳಪೆ ಗುಣಮಟ್ಟದ ಆಹಾರ ಕಂಡುಬಂದಲ್ಲಿ ಅಂತಹ ಉದ್ದಿಮೆಗಳಿಗೆ ದಂಡದ ಜೊತೆಗೆ ಪ್ರಕರಣ ದಾಖಲಿಸಿ ಸೂಕ್ತ ಕ್ರಮ ಜರುಗಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಆಹಾರ ಸುರಕ್ಷತೆ ಅಧಿಕಾರಿಗಳು ಹೋಟೆಲ್, ಬೀದಿಬದಿ ಆಹಾರ ಘಟಕಗಳಿಗೆ ಕಾಲಕಾಲಕ್ಕೆ ಭೇಟಿ ನೀಡಿ ಆಹಾರದ ಸುರಕ್ಷತೆ ಮತ್ತು ಗುಣಮಟ್ಟವನ್ನು ಪರಿಶೀಲಿಸಿ ಎಂದರು.

ಈಗಾಗಲೇ ಸರ್ಕಾರವು ಗೋಬಿ ಹಾಗೂ ಕಬಾಬ್ ತಯಾರಿಕೆಗೆ ಕೃತಕ ಬಣ್ಣ ಬಳಸುವುದನ್ನು ನಿಷೇಧಿಸಿದೆ. ಅದಾಗ್ಯೂ ಹೋಟೆಲ್ ಗಳು, ರೆಸ್ಟೋರೆಂಟ್, ಬೀದಿಬದಿ ಘಟಕಗಳು ಕೃತಕ ಬಣ್ಣ ಬಳಸಿ ಆಹಾರ ತಯಾರಿಸುತ್ತಿರುವುದು ಕಂಡುಬಂದಲ್ಲಿ ಸೂಕ್ತ ಕ್ರಮ ಕೈಗೊಳ್ಳಿ ಎಂದರು. ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಇಲಾಖೆ ಅಂಕಿತಾಧಿಕಾರಿ ಡಾ.ಧರ್ಮೇಂದ್ರ ಮಾತನಾಡಿ ಜಿಲ್ಲೆಯಲ್ಲಿ 5326 ಆಹಾರ ಪರವಾನಗಿ ಪಡೆದ ಆಹಾರ ಉದ್ದಿಮೆಗಳು ಇದ್ದು ಎಪ್ರಿಲ್ ಮಾಹೆಯಿಂದ ನವೆಂಬರ್ ಅಂತ್ಯದವರೆಗೆ 209 ಆಹಾರ ಘಟಕಗಳಿಗೆ ಭೇಟಿ ನೀಡಿ 41 ಘಟಕಗಳಿಗೆ ನೋಟಿಸ್ ನೀಡಲಾಗಿದೆ. 22 ಘಟಕಗಳಿಗೆ ದಂಡ ವಿಧಿಸಿ 69000 ರೂ ದಂಡ ಸಂಗ್ರಹಿಸಲಾಗಿದೆ ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಮರೇಶ್ ಹೆಚ್, ಜಿಲ್ಲಾ ಕ್ಷಯರೋಗ ನಿಯಂತ್ರಣ ಅಧಿಕಾರಿ ಡಾ.ನಾಗೇಶ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಪ್ರೇಮ ಸೇರಿದಂತೆ ಜಿಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು, ತಾಲ್ಲೂಕು ಆಹಾರ ಸುರಕ್ಷತೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಡ್ರೋನ್ ತರಬೇತಿ: ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಬೆಂ.ಗ್ರಾ.ಜಿಲ್ಲೆ:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಡ್ರೋನ್ ಆಧಾರಿತ ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ತರಬೇತಿಗಾಗಿ ಪರಿಶಿಷ್ಟ ಪಂಗಡದ ಯುವಕ/ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದ್ದು ಡಿಸೆಂಬರ್ 23 ರವರೆಗೆ ಅವಧಿ ವಿಸ್ತರಿಸಲಾಗಿದೆ.

ಹೆಚ್ಚಿನ ವಿವರಗಳಿಗೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ– 08029787448, ದೇವನಹಳ್ಳಿ ತಾಲ್ಲೂಕು ಸಹಾಯಕ ನಿರ್ದೇಶಕರ ಕಛೇರಿ, ಸಮಾಜ ಕಲ್ಯಾಣ ಇಲಾಖೆ– 08027681784, ದೊಡ್ಡಬಳ್ಳಾಪುರ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿ ದೂ.ಸಂ–08027623681, ನೆಲಮಂಗಲ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿ ದೂ.ಸಂ– 08027723172, ಹೊಸಕೋಟೆ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿ ದೂ.ಸಂ– 08027931528 ಈ ಕಛೇರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಗಮಂಗಲ | 3 ಕೆ.ಜಿ ತಿಮಿಂಗಿಲ ವಾಂತಿ ವಶ: ಆರೋಪಿ ಬಂಧನ

**ನಾಗಮಂಗಲ:** ಪಟ್ಟಣದ 8ನೇ ವಾರ್ಡ್ನ ನರಸಿಂಹಸ್ವಾಮಿ ದೇವಾಲಯದ ಹಿಂಭಾಗ ಮನೆಯೊಂದರಲ್ಲಿ ಸಂಗ್ರಹಿಸಿದ್ದ ಸುಮಾರು 3 ಕೆ.ಜಿ. ತಿಮಿಂಗಲ ವಾಂತಿಯನ್ನು ಮೈಸೂರು ಅರಣ್ಯ ಸಂಚಾರಿ ದಳದ ಅಧಿಕಾರಿಗಳು ಸೋಮವಾರ ಮಧ್ಯಾಹ್ನ ವಶಪಡಿಸಿಕೊಂಡಿದ್ದು, ವಿನಯ್ ಕುಮಾರ್ (31) ಎಂಬಾತನನ್ನು ಬಂಧಿಸಿದ್ದಾರೆ.



ವಿನಯ್ ಕುಮಾರ್ನನ್ನು ಹೆಚ್ಚಿನ ವಿಚಾರಣೆಗಾಗಿ ಮೈಸೂರಿಗೆ ಕರೆದೊಯ್ಯಲಾಗಿದೆ. ಪಟ್ಟಣದ ನ್ಯಾಯಾಲಯಕ್ಕೆ ಮಂಗಳವಾರ ಹಾಜರುಪಡಿಸಿ ಮುಂದಿನ ಕ್ರಮ ಜರುಗಿಸಲಾಗುವುದು' ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಾರ್ಯಾಚರಣೆಯಲ್ಲಿ ಮೈಸೂರು ಸಂಚಾರಿ ದಳದ ಆರ್‌ಎಫ್‌ಒ ಸುರೇಂದರ್, ಡಿಆರ್‌ಎಫ್‌ಒ ಮೋಹನ್ ಕುಮಾರ್, ನಾಗಮಂಗಲ ಆರ್‌ಎಫ್‌ಒಗಳಾದ ಸಂಪತ್ ಪಟೇಲ್, ಡಿಆರ್‌ಎಫ್‌ಒ ಶಿವಲಿಂಗಯ್ಯ, ಮಹಾಂತೇಶ್ ಪಾಲ್ಗೊಂಡಿದ್ದರು.

## ಬೊಮ್ಮವಾರ ಎಂ.ಪಿ.ಸಿ.ಎಸ್ ನೂತನ ಕಟ್ಟಡಕ್ಕೆ ಶಂಕುಸ್ಥಾಪನೆ



**ದೇವನಹಳ್ಳಿ:** ಬೊಮ್ಮವಾರ ಹಾಲು ಉತ್ಪಾದಕರ ಸಹಕಾರ ಸಂಘದ ಕಟ್ಟಡ ಶಿಥಿಲವಾಗಿದ್ದು, ನೂತನವಾಗಿ ಕಟ್ಟಡ ನಿರ್ಮಿಸಲು ಸಂಘದ ಎಲ್ಲಾ ನಿರ್ದೇಶಕರು, ಸದಸ್ಯರೆಲ್ಲಾ ಸಭೆ ಸೇರಿ ನೂತನ ಕಟ್ಟಡ ನಿರ್ಮಿಸಲು ಶಂಕುಸ್ಥಾಪನೆ ನೆರವೇರಿಸಲಾಗಿದೆ ಎಂದು ಸಂಘದ ಅಧ್ಯಕ್ಷ ಬಿ.ಎಸ್. ಸೋಮಶೇಖರ್ ತಿಳಿಸಿದರು.

ಅವರು ತಾಲೂಕಿನ ಬೊಮ್ಮವಾರ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಆವರಣದಲ್ಲಿ ಬಮುಲ್ ನಿರ್ದೇಶಕ ಬಿ.ಶ್ರೀನಿವಾಸ್ ಕಟ್ಟಡ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದರು.

ನಂತರ ಮಾತನಾಡಿದ ಅವರು, ಸುಮಾರು 30ಲಕ್ಷ ವೆಚ್ಚದಲ್ಲಿ ಕಟ್ಟಡ ನಿರ್ಮಿಸಲು ಉದ್ದೇಶಿಸಲಾಗಿದ್ದು, ಮೊದಲ ಪ್ಲೋರ್ ಗೆ 16 ಲಕ್ಷ, 2ನೇ ಪ್ಲೋರ್ ಗೆ 14 ಲಕ್ಷ ವೆಚ್ಚ ಅಂದಾಜಿಸಲಾಗಿದೆ, ಇದಕ್ಕೆ ಬಮುಲ್ ನ ಸಂಪೂರ್ಣ ಸಹಕಾರವಿದ್ದು, ಆದಷ್ಟು ಬೇಗ ಕಟ್ಟಡ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.

ಈ ಸಮಯದಲ್ಲಿ ಶಂಖುಸ್ಥಾಪನೆ ನೆರವೇರಿಸಿದ ಬಮುಲ್ ನಿರ್ದೇಶಕ ಬಿ.ಶ್ರೀನಿವಾಸ್ ಮಾತನಾಡಿ, ಇಲ್ಲಿ ನಿರ್ಮಿಸಲಾಗುತ್ತಿರುವ ಡೈರಿ ಕಟ್ಟಡ ವಿವಿಧ ಉದ್ದೇಶಗಳನ್ನು ಹೊಂದಿದ್ದು ಹೈನುಗಾರರಿಗೆ ಅನುಕೂಲಕರವಾದ ವಾತಾವರಣ, ಪಶುಚಿಕಿತ್ಸಾ ವಿಭಾಗ, ಬಮುಲ್ ಇಂದ ಸಿಗುವ ಹಲವಾರು ಸೌಲಭ್ಯಗಳು ದೊರೆಯುವಂತಾಗಲಿದೆ. ಇದರ ಸದುಪಯೋಗಪಡಿಸಿಕೊಂಡು ಶೀಘ್ರ ಕಟ್ಟಡ ಕಾಮಗಾರಿ ಮುಗಿದು ಉದ್ಘಾಟನೆ ನೆರವೇರಲಿ ಎಂದರು.

ಈ ಸಮಯದಲ್ಲಿ ಸಹಕಾರ ರತ್ನ ಪುರಸ್ಕೃತ ಬಿ.ಶ್ರೀನಿವಾಸ್, ಉಪ ವ್ಯವಸ್ಥಾಪಕರಾದ ಡಾ. ರಾಜೇಶ್, ವಿಸ್ತರ್ಣಾಧಿಕಾರಿ ಸಿ. ರೋಷನ್, ಸಂಘದ ಅಧ್ಯಕ್ಷರಾದ ಬಿ.ಎಸ್. ಸೋಮಶೇಖರ್, ಉಪಾಧ್ಯಕ್ಷ ನರಸಿಂಹಪ್ಪ, ನಿರ್ದೇಶಕರಾದ ಮುನಿನಾರಾಯಣಪ್ಪ, ಬಿ.ಎನ್. ನಾರಾಯಣಪ್ಪ, ರವಿಕುಮಾರ್, ನಂಜೇಗೌಡ, ಅಚ್ಚಪ್ಪ, ಎಸ್. ರಾಮಾಂಜಿನಪ್ಪ, ಬಿ.ಹೆಚ್. ನಾರಾಯಣಸ್ವಾಮಿ, ಶಕುಂತಲಮ್ಮ, ಭಾಗ್ಯಮ್ಮ, ದ್ಯಾವಮ್ಮ, ಗ್ರಾ.ಪಂ. ಸದಸ್ಯರಾದ ವೆಂಕಟಾಚಲಯ್ಯ, ಮಂಜುನಾಥ್, ಮಂಜುಳಮ್ಮ, ಬಿ.ಸಿ. ಸುಂದರೇಶ್, ಮಾಜಿ ಅಧ್ಯಕ್ಷರಾದ ಬಿ.ಕೆ.ದಿವಾಕರ್, ಬಿ.ಸುಕಿಷ್ಣಪ್ಪ, ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಪಿ.ಅಶ್ವತ್ಥಪ್ಪ, ಸಿಬ್ಬಂದಿಗಳಾದ ಆದಿನಾರಾಯಣಪ್ಪ, ಬಿ.ಎನ. ಆಂಜಿನಪ್ಪ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.


## ಜೋಡಿ ಚಿರತೆ ಸಂಚಾರ: ಗ್ರಾಮಸ್ಥರಲ್ಲಿ ಆತಂಕ

**ನಾಗಮಂಗಲ:** ತಾಲ್ಲೂಕಿನ ಅಂಬಲಜೀರಹಳ್ಳಿಯ ಮೇದಿನಿಕಲ್ಲು ಬೆಟ್ಟದ ಬಳಿ ಸೋಮವಾರ ಜೋಡಿ ಚಿರತೆಗಳು ಕಾಣಿಸಿಕೊಂಡಿದ್ದು, ಸುತ್ತಲಿನ ಗ್ರಾಮಗಳ ಜನರು ಆತಂಕಗೊಂಡಿದ್ದಾರೆ.

ಹಲವು ದಿನಗಳಿಂದ ತೋಟ, ಹೊಲ ಗದ್ದೆಗಳಲ್ಲಿ ಪ್ರತ್ಯಕ್ಷವಾಗುತ್ತಿರುವ ಜೋಡಿ ಚಿರತೆಗಳು ಜನ ಮತ್ತು ಜಾನುವಾರುಗಳ ಮೇಲೆ ದಾಳಿ ಮಾಡಿ ಆತಂಕ ಸೃಷ್ಟಿಸಿದ್ದವು.

ಸೋಮವಾರ ಬೆಟ್ಟದಲ್ಲಿ ಸಂಚರಿಸುತ್ತಿರುವುದನ್ನು ಗ್ರಾಮಸ್ಥರು ಸೆರೆ ಹಿಡಿದಿರುವ ವಿಡಿಯೊ ಸಾಮಾಜಿಕ ಮಾಧ್ಯಮದಲ್ಲಿ ಹರಿದಾಡುತಿದೆ.

ಮೇದಿನಿಕಲ್ಲಿನ ಸುತ್ತಮುತ್ತ 6 ತಿಂಗಳಿಂದ ಚಿರತೆಗಳು ಕಾಣಿಸಿಕೊಳ್ಳುತ್ತಿವೆ. ಬೆಟ್ಟದ ಬಳಿ ಈಚೆಗೆ ಒಂದು ಚಿರತೆ ಬೋನಿಗೆ ಬಿದ್ದಿತ್ತು. ಮತ್ತೆ ಚಿರತೆಗಳು ಹಲವು ದಿನಗಳಿಂದ ಬೆಳಗಿನ ಅವಧಿಯಲ್ಲೇ ಓಡಾಡುತ್ತಿವೆ. ಕೆರೆಗೆ ಬಂದು ನೀರು ಕುಡಿಯುವುದು, ಮೇದಿನಿಕಲ್ಲು ಬೆಟ್ಟದ ಮೇಲೆ ಸಂಚರಿಸುತ್ತಿರುವುದರಿಂದ ಜಮೀನಿಗೆ ಹೋಗಲು ಭಯವಾಗುತ್ತಿದೆ.ಅರಣ್ಯ ಅಧಿಕಾರಿಗಳು ಚಿರತೆಗಳನ್ನು ಸೆರೆ ಹಿಡಿಯಬೇಕು' ಎಂದು ಆಗ್ರಹಿಸಿದ್ದಾರೆ.



## ಬೆಳೆ ಕಟಾವು ಪ್ರಯೋಗಗಳ ಪರಿಶೀಲನೆ

**ರಾಮನಗರ:** ಬೆಳೆ ಕಟಾವು ಪ್ರಯೋಗಗಳಲ್ಲಿ ಬಂದ ಅಂಕಿ–ಅಂಶಗಳನ್ನು ರಾಜ್ಯಾದಾಯ, ಕೃಷಿ ಬೆಳೆಗಳ ಸರಾಸರಿ ಇಳುವರಿ ಹಾಗೂ ರೈತರಿಗೆ ಬೆಳೆ ನಷ್ಟ ಉಂಟಾದಲ್ಲಿ ಸರಿಯಾದ ರೀತಿಯಲ್ಲಿ ವಿಮಾ ಪರಿಹಾರ ನೀಡಲು ಬೆಳೆ ಕಟಾವು ಪ್ರಯೋಗಗಳ ಅಂಕಿಅಂಶಗಳನ್ನು ಮಾನದಂಡವಾಗಿ ಉಪಯೋಗಿಸುವದರಿಂದ ಜಿಲ್ಲೆಯಾದ್ಯಂತ ಮೂಲ ಕಾರ್ಯಕರ್ತರು ಪ್ರಯೋಗ ಕೈಗೊಳ್ಳುವಾಗ ಯಾವುದೇ ಲೋಪದೋಷವಾಗದಂತೆ ನಿಯಮಾನುಸಾರ ಪ್ರಯೋಗಗಳನ್ನು ಯಶಸ್ವಿಯಾಗಿ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಆರ್ ಚಂದ್ರಯ್ಯ ಅವರು ಕರೆ ನೀಡಿದರು.

ಅವರು ಡಿ.16ರ ಸೋಮವಾರ ರಾಮನಗರ ತಾಲ್ಲೂಕಿನ ಕಸಬಾ ಹೋಬಳಿಯ ಕೇತೋಹಳ್ಳಿ ಗ್ರಾಮದಲ್ಲಿ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯಡಿ ಕೈಗೊಳ್ಳುವ ಬೆಳೆ ಕಟಾವು ಪ್ರಯೋಗಗಳ ಪರಿಶೀಲಿಸಿ ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಹಾಗೂ ಕಚೇರಿಯ ಸಿಬ್ಬಂದಿಗಳಿದ್ದರು.

## ಸಹಾಯಕ ಪ್ರಾಧ್ಯಾಪಕರ ನೇಮಕಾತಿಗೆ ನೇರ ಸಂದರ್ಶನ

**ಶಿವಮೊಗ್ಗ:** ಶಿವಮೊಗ್ಗದ ಪಶು ವೈದ್ಯಕೀಯ ಮಹಾವಿದ್ಯಾಲಯದಲ್ಲಿ ವಿವಿಧ ವಿಭಾಗಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡಿಕೊಳ್ಳುವ ಸಂಬಂಧ ಡಿ. 23 ರಂದು ನೇರ ಸಂದರ್ಶನ ಏರ್ಪಡಿಸಲಾಗಿದೆ.

ಪ್ರಾಣಿ ಆಹಾರ ಶಾಸ್ತ್ರ ವಿಭಾಗ, ಪಶುವೈದ್ಯಕೀಯ ಔಷಧ ಹಾಗೂ ವಿಷಶಾಸ್ತ್ರ ವಿಭಾಗ, ಜಾನುವಾರು ಉತ್ಪನ್ನಗಳ ತಾಂತ್ರಿಕತೆ ವಿಭಾಗ, ಪಶುವೈದ್ಯಕೀಯ ಸಾರ್ವಜನಿಕ ಆರೋಗ್ಯ ಮತ್ತು ಸಮುದಾಯ ರೋಗ ಅಧ್ಯಯನ ಶಾಸ್ತ್ರ ವಿಭಾಗ, ಜಾನುವಾರು ಸಾಕಾಣಿಕಾ ಸಂಕೀರ್ಣ ವಿಭಾಗ, ಪಶುವೈದ್ಯಕೀಯ ಶರೀರಕ್ರಿಯಾ ಮತ್ತು ಜೀವರಸಾಯನ ಶಾಸ್ತ್ರ ವಿಭಾಗ, ಪಶುವೈದ್ಯಕೀಯ ಶಾಸ್ತ್ರ ಚಿಕಿತ್ಸೆ ಮತ್ತು ಕ್ಷ-ಕಿರಣ ಶಾಸ್ತ್ರ ವಿಭಾಗ, ಪಶು ವೈದ್ಯಕೀಯ ಚಿಕಿತ್ಸಾ ಸಂಕೀರ್ಣ ವಿಭಾಗಗಳಲ್ಲಿ ನೇಮಕ ಮಾಡಿಕೊಳ್ಳಲಾಗುತ್ತಿದ್ದು, ಭಾರತೀಯ ಕೃಷಿ ಅನುಸಂಧಾನ ಪರಿಷತ್ತಿನ ನಿಯಮಾವಳಿಯಂತೆ ಹಾಗೂ ಮಾರ್ಗಸೂಚಿಯಂತೆ ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಸಂದರ್ಶನದಲ್ಲಿ ಭಾಗವಹಿಸಬಹುದು. ನೇರ ಸಂದರ್ಶನವು ಡೀನ್ ಕಚೇರಿ, ಪಶುವೈದ್ಯಕೀಯ ಮಹಾವಿದ್ಯಾಲಯ, ಶಿವಮೊಗ್ಗ ಇಲ್ಲಿ ಡಿ.23ರ ಬೆಳಿಗ್ಗೆ 11 ಗಂಟೆಯಿಂದ ನಡೆಯಲಿದೆ. ಆಯ್ಕೆಯಾದ ರಾಷ್ಟ್ರೀಯ ಅರ್ಹತಾ ಪರೀಕ್ಷೆ(ಎನ್‌ಇಟಿ) ಪ್ರಮಾಣ ಪತ್ರ ಹೊಂದಿರುವ ಅಭ್ಯರ್ಥಿಗಳಿಗೆ ಮಾಸಿಕ ರೂ.56,700/- ಮತ್ತು ರಾಷ್ಟ್ರೀಯ ಅರ್ಹತಾ ಪರೀಕ್ಷೆಯ (ಎನ್‌ಇಟಿ)ಪ್ರಮಾಣ ಪತ್ರ ಹೊಂದಿರದ ಅಭ್ಯರ್ಥಿಗಳಿಗೆ ಮಾಸಿಕ ರೂ.50,000 ವೇತನ ನೀಡಲಾಗುವುದು.

ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 08182-200872 ಹಾಗೂ ವಿಶ್ವವಿದ್ಯಾಲಯದ ಜಾಲತಾಣ www.kvafsu.edu.in ನ್ನು ಸಂಪರ್ಕಿಸುವಂತೆ ಪಶುವೈದ್ಯಕೀಯ ಮಹಾವಿದ್ಯಾಲಯದ ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಗದಗ:** 2024-25ನೇ ಸಾಲಿನಲ್ಲಿ ವಿವಿಧ ಕ್ರೀಡಾಕೂಟದಲ್ಲಿ ರಾಜ್ಯ, ರಾಷ್ಟ್ರ ವಿಶ್ವವಿದ್ಯಾಲಯ ಮತ್ತು ಅಂತರರಾಷ್ಟ್ರ ಮಟ್ಟದಲ್ಲಿ ಭಾಗವಹಿಸಿ ವಿಜೇತರಾದ ಗದಗ ಜಿಲ್ಲೆಯ ಕ್ರೀಡಾಪಟುಗಳಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಪ್ರೋತ್ಸಾಹಧನವನ್ನು ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2024 ರ ಜನೇವರಿ 1 ರಿಂದ ಡಿಸೆಂಬರ್ 31 ರವರೆಗೆ ವಿವಿಧ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ರಾಜ್ಯ, ರಾಷ್ಟ್ರ ವಿಶ್ವವಿದ್ಯಾಲಯ ಮತ್ತು ಅಂತರರಾಷ್ಟ್ರ ಮಟ್ಟದಲ್ಲಿ ವಿಜೇತರಾದ ಕ್ರೀಡಾಪಟುಗಳು ರೊಳಗೆ ಅರ್ಜಿ ಸಲ್ಲಿಸಬಹುದು. ಅರ್ಜಿ ನಮೂನೆಗಳು, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರ ಕಾರ್ಯಾಲಯ, ಲಭ್ಯವಿದ್ದು, ಡಿಸೆಂಬರ್ 31 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08372-238345 ಗೆ ಸಂಪರ್ಕಿಸಲು ಕೋರಿದೆ.

## ನಗರದ ವಿವಿಧೆಡೆ ನೀರು ಪೂರೈಕೆ

**ಗದಗ:** ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ಡಿಸೆಂಬರ್ 17 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು. ಸ್ಥಳಗಳ ವಿವರ: ವಾರ್ಡ 11, 12 – ಇರಾನಿ ಕಾಲೋನಿ, ಕರಿಯಮ್ಮ ಕಲ್ಲು, ಪಿ ಮತ್ತು ಟಿ ಕ್ವಾಟ್ರಸ, ಗಣಪತಿ ಕಟ್ಟಿ, ಹನುಮಂತ ದೇವರ ಗುಡಿ, ಗಾರ್ಡನ, ರಾಘವೇಂದ್ರ ಗುಡಿ ಲೈನ, ಚರ್ಚ ಭಾಗ ಉಳಿದ ಕೆಲವು ಭಾಗಗಳು. ವಾರ್ಡ 28 – ಪಂಚಾಕ್ಷರಿ ನಗರ 4 ಮತ್ತು 5 ನೇ ಕ್ರಾಸಗಳು. ವಾರ್ಡ 22 – ಗಂಗಿಮಡಿ, ದೊಡ್ಡ ಮಸೂತಿ ಭಾಗಗಳು, 2,000 ಮನೆ, 1,800 ಮನೆ, 1,400 ಮನೆ ಉಳಿದ ಕೆಲವು ಭಾಗಗಳು. ವಾರ್ಡ 26 – ಅಕ್ಕನ ಬಳಗ, ಕಲಾಮಂದಿರ ರೋಡ ಉಳಿದ ಕೆಲವು ಭಾಗಗಳು. ವಾರ್ಡ 6 – ಚನ್ನಪ್ಪಗೌಡ್ರ ಲೈನ, ಚಂದ್ರುರವರ ಲೈನ, ಅಂಗಡಿಯವರ ಲೈನ ಉಳಿದ ಕೆಲವು ಭಾಗಗಳು. ವಾರ್ಡ 21, 22, 23 – ಕಗನಳ್ಳಿ, ಸೋಮನಗೌಡ್ರ ಲೈನ, ಹೆಬ್ಸೂರ 2 ಭಾಗಗಳು, ಹೊನ್ನೆತ್ತಮ್ಮ 2 ಭಾಗಗಳು, ಆರೋಗೇರಿ 2 ಭಾಗಗಳು, ಲಕ್ಕುಂಡಿ ಲೈನ, ಮಾನ್ವಿ ಲೈನ, ಗಣಪತಿ ಗುಡಿ, ಅಕ್ಕಿ ಲೈನ, ಬಾಳಿಕಾಯಿಯವರ ಲೈನ ಉಳಿದ ಕೆಲವು ಭಾಗಗಳು. ವಾರ್ಡ 4 – ಬ್ಯಾಳಿಯವರ ಲೈನ, ಪೋಸ್ಟ ಆಫೀಸ, ಮಿಷನ ಕಾಂಪೌಂಡ, ಟರ್ನಲ ಪೇಟೆ, ಬಿ ಎಸ ಎನ ಎಲ ಆಫೀಸ ಪೂರ್ತಿ ಭಾಗ, 200 ಮನೆ, 250 ಮನೆ, ಕಣವಿ ಪ್ಲಾಟ ಪೂರ್ತಿ ಭಾಗಗಳು, ಗೌರಿಗುಡಿ ಉಳಿದ ಕೆಲವು ಭಾಗಗಳು. ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಹಾಗೂ ನೀರಿನ ಕರವನ್ನು ತುಂಬಬೇಕೆಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ವಾರಸುದಾರರ ಪತ್ತೆಗೆ ಮನವಿ

**ಶಿವಮೊಗ್ಗ:** ಡಿಸೆಂಬರ್ 16,(ಕರ್ನಾಟಕ ವಾರ್ತೆ): ರಾಜ್ಯ ಮಹಿಳಾ ನಿಲಯ, ಶಿವಮೊಗ್ಗ ಸಂಸ್ಥೆಗೆ ಹಾವೇರಿ ಜಿಲ್ಲೆ ಶಿಗ್ಗಾಂವ್‌ನ ಶ್ರೀ ಮೃತ್ಯುಂಜಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯು 43 ವರ್ಷದ ಹೀರಾಬಾಯಿ ಎಂಬ ಮಾನಸಿಕ ಅಸ್ವಸ್ಥೆಯನ್ನು ದಾಖಲು ಮಾಡಿದ್ದು, ಈವರೆಗೆ ಯಾವುದೇ ವಿಳಾಸ ತಿಳಿದಿರುವುದಿಲ್ಲ. ಈ ಮಹಿಳೆಯ ಪೋಷಕರ ಪತ್ತೆಗಾಗಿ ರಾಜ್ಯ ಮಹಿಳಾ ನಿಲಯ ಅಧೀಕ್ಷಕರು ಪ್ರಕಟಣೆ ತಿಳಿಸಿದ್ದಾರೆ.

# ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಿ

## ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ



**ಚಿತ್ರದುರ್ಗ:** ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯ (ಡಿಎಂಎಫ್) ಅನುದಾನದಿಂದ ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಲ್ಲಿ ಕೈಗೊಂಡಿರುವ ಪ್ರಗತಿಯಲ್ಲಿರುವ ಹಾಗೂ ಬಾಕಿ ಇರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ, ವರದಿ ನೀಡಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯ ಅನುದಾನದಿಂದ ಕೈಗೊಂಡಿರುವ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಡಿಎಂಎಫ್ ನಿಧಿಯ ಅನುದಾನದಲ್ಲಿ ಹಂಚಿಕೆ ಮಾಡಲಾದ ಒಟ್ಟು ಕಾಮಗಾರಿಗಳ ವಿವರ, ಪೂರ್ಣಗೊಂಡಿರುವ, ಪ್ರಗತಿ ಹಾಗೂ ಬಾಕಿ ಇರುವ ಕಾಮಗಾರಿಗಳ ಮಾಹಿತಿ, ಅನುದಾನದ ಲಭ್ಯತೆ ಹಾಗೂ ಬೇಕಾಗಿರುವ ಅನುದಾನದ ಮಾಹಿತಿ ಸೇರಿದಂತೆ ಈಗಾಗಲೇ ಪೂರ್ಣಗೊಂಡಿರುವ ಕಾಮಗಾರಿಗಳ ಬಳಕೆ ಪ್ರಮಾಣ ಪತ್ರದ ಸಂಪೂರ್ಣ ಮಾಹಿತಿಯೊಂದಿಗೆ ಒಂದು ವಾರದೊಳಗೆ ಕಾಮಗಾರಿಗಳ ಸಂಪೂರ್ಣ ವರದಿ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಿರ್ಮಿತಿ ಕೇಂದ್ರದ ವತಿಯಿಂದ ಡಿಎಂಎಫ್ ನಿಧಿಯ ಅನುದಾನದಲ್ಲಿ 2021-22 ರಿಂದ ಇಲ್ಲಿಯವರೆಗೂ 420 ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದ್ದು, ಇದರಲ್ಲಿ 286 ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದ್ದು, ಉಳಿದ ಕಾಮಗಾರಿಗಳು ಪ್ರಗತಿಯಲ್ಲಿವೆ. ಪೂರ್ಣಗೊಂಡಿರುವ ಕಾಮಗಾರಿಗಳಿಗೆ ಬಳಕೆ ಪ್ರಮಾಣವನ್ನೂ ಸಲ್ಲಿಸಲಾಗಿದೆ ಎಂದು ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು, ಪ್ರಗತಿಯಲ್ಲಿರುವ ಹಾಗೂ ಬಾಕಿ ಇರುವ ಕಾಮಗಾರಿಗಳನ್ನು ತಕ್ಷಣವೇ ಪ್ರಾರಂಭ ಮಾಡುವ ಮೂಲಕ ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಲು ಕ್ರಮವಹಿಸಬೇಕು ಎಂದು ತಾಕೀತು ಮಾಡಿದರು.

ಅಂಗನವಾಡಿ ಕಟ್ಟಡ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಿ: ಅಂಗನವಾಡಿ ಕಟ್ಟಡ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ನಿರ್ಮಾಣ ಸಂಸ್ಥೆಗಳಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ನಿರ್ಮಾಣ ಸಂಸ್ಥೆಗಳು ತಂಡ ನಿಯೋಜಿಸುವ ಮೂಲಕ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಅಂಗನವಾಡಿ ಕಟ್ಟಡ ನಿರ್ಮಾಣ ವಿಳಂಬವಾಗಬಾರದು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್, ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪನಿರ್ದೇಶಕ ಮಹೇಶ್ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

## ವಿದ್ಯುತ್ ವ್ಯತ್ಯಯ

**ದಾವಣಗೆರೆ:** ದಾವಣಗೆರೆ ನಗರದಲ್ಲಿ ಬೆಸ್ಕಾಂನಿಂದ ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಡಿ.17 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಸಾಯಿ ಎಫ್.21 ಫೀಡರ್ ವ್ಯಾಪ್ತಿಯ ಎಸ್.ಎಸ್ ಲೇಔಟ್ ಎ.ಬ್ಲಾಕ್, ಎಸ್.ಎನ್ ಲೇಔಟ್, ಜಿ.ಹೆಚ್ ಪಾರ್ಕ್, ಲಕ್ಷ್ಮೀ ಫ್ಲೋರ್ ಮಿಲ್, ಅಥಣಿ ಕಾಲೇಜ್, ಅಂಗವಿಕಲರ ಶಾಲೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

## ಯುವ ಪರಿವರ್ತಕರ ಹುದ್ದೆಗೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಯುವ ಸ್ಪಂದನ ಕೇಂದ್ರದಲ್ಲಿ ಗೌರವಧನದ ಆಧಾರದ ಮೇರೆಗೆ ಯುವಪರಿವರ್ತಕರ ಹುದ್ದೆಗೆ ಮತ್ತು ಯುವ ಪರಿವರ್ತಕರ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಡಿಸೆಂಬರ್ 31 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಯ ದೂ. ಸಂ. 08262-295724 ಮತ್ತು 9740491347 ನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅವಧಿ ವಿಸ್ತರಣೆ

**ಚಿಕ್ಕಮಗಳೂರು:** ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ ಇಲಾಖೆಯಿಂದ 2024-25 ನೇ ಸಾಲಿನ 100 ಸಂಖ್ಯಾಬಲಕ್ಕೆ ಅನುಗುಣವಾಗಿ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ / ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಪರಿಶಿಷ್ಟ ಪಂಗಡ ಹಾಗೂ ಇತರೆ ಜಾತಿ ವಿದ್ಯಾರ್ಥಿಗಳಿಂದ ಅರ್ಜಿ ಸಲ್ಲಿಸಲು ಅವಧಿ ವಿಸ್ತರಿಸಿಲಾಗಿದೆ. ಅರ್ಜಿ ಸಲ್ಲಿಸಲು ಡಿಸೆಂಬರ್ 31 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಗ್ರೇಡ್(1) ಹಾಗೂ ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ ಯೋಜನಾ ಸಮನ್ವಯಾಧಿಕಾರಿ ಕಚೇರಿಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ ಯೋಜನಾ ಸಮನ್ವಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ ಮತ್ತು ಕೈಗಾರಿಕಾ ಸ್ಪಂದನ ಸಭೆ

**ಚಿಕ್ಕಮಗಳೂರು:** ಜಿಲ್ಲಾ ಕೈಗಾರಿಕಾ ಕೇಂದ್ರದ ವತಿಯಿಂದ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಡಿಸೆಂಬರ್ 20 ರಂದು ಮಧ್ಯಾಹ್ನ 3:00 ಗಂಟೆಗೆ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ ಮತ್ತು ಕೈಗಾರಿಕಾ ಸ್ಪಂದನ ಸಭೆಯನ್ನು ಆಯೋಜಿಸಲಾಗಿದೆ. ಜಿಲ್ಲೆಯ ಕೈಗಾರಿಕೋದ್ಯಮಿಗಳು ಮನವಿ ಅಹವಾಲುಗಳು ಇದ್ದಲ್ಲಿ ಡಿಸೆಂಬರ್ 19ರ ಒಳಗೆ ಜಿಲ್ಲಾ ಕೈಗಾರಿಕಾ ಕೇಂದ್ರ ಕಚೇರಿಯಲ್ಲಿ ಲಿಖಿತ ರೂಪದಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ ಜಂಟಿ ನಿರ್ದೇಶಕರ ಕಚೇರಿಯನ್ನು (ದೂ.ಸಂ: 0826-295821) ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ/ಅರೆ ಅಲೆಮಾರಿ, ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಜಾತಿಗಳ ಜಿಲ್ಲಾ ಮಟ್ಟದ ಅಭಿವೃದ್ಧಿ ಅನುಷ್ಠಾನ ಸಮಿತಿಗೆ ಸಮುದಾಯಗಳ 5 ಜನ ಸದಸ್ಯರನ್ನು ಆಯ್ಕೆ ಮಾಡಲು (4 ಜನ ಪುರುಷರ ಮತ್ತು ಒಬ್ಬ ಮಹಿಳೆ) ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಡಿಸೆಂಬರ್ 27 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಹಾಗೂ ಸಂಬಂಧಪಟ್ಟ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಕಚೇರಿಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೊಡ್ಡನಾಗಪ್ಪ ಸಣ್ಣ ನಾಗಪ್ಪ ಕಾಕಿ ಸ್ಮರಣೆ:

## ಜೆಸಿ ವಾಣಿ ಲೋಕಾರ್ಪಣೆ, ಉಚಿತ ಸಾಮೂಹಿಕ ವಿವಾಹ



**ರಾಣೇಬೆನ್ನೂರು:** ಕಾಕಿ ಕುಟುಂಬದ ಪೂರ್ವಜರು ಹಾಕಿ ಕೊಟ್ಟಿರುವ, ಸಾಮಾಜಿಕ, ಧಾರ್ಮಿಕ, ಮತ್ತು ವ್ಯವಹಾರಿಕ ಸೇವೆಯಲ್ಲಿ ತಮ್ಮ ಕುಟುಂಬ ಮುಂದುವರೆದಿದೆ.

ದಾನ, ಧರ್ಮ ಮತ್ತು ಪರೋಪಕಾರ ಅವರು ಮೈಗೂಡಿಸಿಕೊಂಡವರು ಅಂಥವರ ಸೇವೆ ಮತ್ತು ಸ್ಮರಣೆ ಮಾಡುವುದೇ ನಮ್ಮೆಲ್ಲರ ಸೌಭಾಗ್ಯವಾಗಿದೆ ಎಂದು ಕಾಕಿ ಜನ ಸೇವಾ ಸಂಸ್ಥೆಯ ಸಂಸ್ಥಾಪಕ ಶ್ರೀನಿವಾಸ್ ಕಾಕಿ ಹೇಳಿದರು.

ತಮ್ಮ ಗ್ರಹ ಸಭಾದಲ್ಲಿ ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಕಾಕಿ ಕುಟುಂಬದ ಹಿರಿಯರಾದ ದಿ, ದೊಡ್ಡ ನಾಗಪ್ಪ ತಿ. ಕಾಕಿ ಮತ್ತು ದಿ,ಸಣ್ಣನಾಗಪ್ಪ ತಿ. ಕಾಕಿ. ಅವರು, ಧರ್ಮದ ಪರಂಪರೆಯಲ್ಲಿ ಸಾಗಿ ಬಂದವರು, ಬಡವರಿಗೆ, ಜನಸಾಮಾನ್ಯರಿಗೆ, ಅತಿ ಕಡಿಮೆ ಬೆಲೆಯಲ್ಲಿ ನಿವೇಶನಗಳನ್ನು ವಿತರಿಸಿ ಜನಮಾನಸದಲ್ಲಿ ನೆಲೆ ನಿಂತವರಾಗಿದ್ದಾರೆ ಎಂದರು. ತಾವು ತಮ್ಮ ಕುಟುಂಬವು ತಂದೆಯವರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗುತ್ತಿದ್ದೇವೆ. ಸರ್ವರಿಗೂ ಅನುಕೂಲವಾಗುವ ಉದ್ದೇಶದಿಂದ ಹುಣಸಿಕಟ್ಟಿ ರಸ್ತೆಯಲ್ಲಿ "ಜೇಸಿವಾಣಿ ಅರಮನೆ " ಕಲ್ಯಾಣ ಮಂಟಪ ನಿರ್ಮಿಸಲಾಗಿದೆ. ಅತೀ ಕಡಿಮೆ ದರದಲ್ಲಿ, ಬಾಡಿಗೆ ನೀಡಲಾಗುತ್ತಿದೆ. ಅಂದೆ ಅದರ ಲೋಕಾರ್ಪಣೆಯಾಗಲಿದೆ. ಎಂದರು.

ಪ್ರತಿವರ್ಷದಂತೆ ಉಚಿತ ಸರ್ವಧರ್ಮ ಸಾಮೂಹಿಕ ವಿವಾಹ ಆಯೋಜಿಸಲಾಗಿದೆ. ಈಗಾಗಲೇ 15 ಜೊತೆ ವಧು-ವರರು ಹೆಸರು ನೋಂದಾಯಿಸಿದ್ದಾರೆ. ಅವರಿಗೆ ಬಟ್ಟೆ, ಮತ್ತಿತರೆ ವಸ್ತುಗಳು ಇಂದೇ ವಿತರಿಸಲಾಗುತ್ತಿದೆ. ವಿವಾಹ ಪೂರ್ವ ರವಿವಾರ ಸಂಜೆ, ಸಾರೋಟಗಳಲ್ಲಿ ಅದ್ದೂರಿ ಮೆರವಣಿಗೆ ನಡೆಸಿ, ಸೋಮವಾರ -23 ರಂದು ನೂತನ ಅರಮನೆಯಲ್ಲಿ ಸಾಮೂಹಿಕ ಅವರವರ ಧರ್ಮಾನುಸಾರ ವಿವಾಹ ಮಹೋತ್ಸವ ಜರುಗಲಿದೆ ಎಂದರು. ಪತ್ರಿಕಾ ಗೋಷ್ಠಿಯಲ್ಲಿ ಶ್ರೀ ಮತಿ ರೂಪಾ ಕಾಕಿ, ಶಿವಾನಂದ ಸಾಲಗೇರಿ, ಹನುಮಂತಪ್ಪ ಅಮಾಸಿ, ಹನುಮಂತಪ್ಪ ಕಾಕಿ, ಮಂಜುನಾಥ ಹೊಸಪೇಟೆ, ಶಿವಾನಂದ ಬಾಗಾದಿ, ಕೆ.ಸಿ.ನಾಗರಜ್ಜಿ, ಕೊಟ್ರೇಶಪ್ಪ ಎಮ್ಮಿ, ಶಿವಕುಮಾರ್ ಜಾಧವ ಇತರರು ಉಪಸ್ಥಿತರಿದ್ದರು.



ಶ್ರೀಮತಿ ಅಪರ್ಣಾ ಎಮ್, ಕೊಳ್ಳಾ ಮಾನ್ಯ ಸದಸ್ಯರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಆಯೋಜಿಸಿರುವ ಮಕ್ಕಳ ಸಂವಾದ ಕಾರ್ಯಕ್ರಮದಲ್ಲಿ "ಜೆ.ಜೆ ಕಾಯ್ದೆ-2015, ಬಾಲ್ಯ ವಿವಾಹ ನಿಷೇಧ ಕಾಯ್ದೆ- 2006, ಮಕ್ಕಳ ಮೇಲಿನ ಲೈಂಗಿಕ ಅಪರಾಧ ತಡೆ ಕಾಯ್ದೆ-2012 ಹಾಗೂ ಮಕ್ಕಳಿಗೆ ಸಂಬಂಧಿಸಿದ ಸಮಸ್ಯೆಗಳ ಕುರಿತಾಗಿ ಒಂದು ದಿನದ ಅರಿವು / ಜಾಗೃತಿ ತರಬೇತಿ ಕಾರ್ಯಕ್ರಮವನ್ನು ದಿನಾಂಕ:13-12-2024ರಂದು "ಚೈತನ್ಯ ರೂರಲ್ ಡೆವಲಪ್‌ಮೆಂಟ್ ಸೊಸೈಟಿ" ಆಲ್ಕೊಳ, ಶಿವಮೊಗ್ಗ ಇಲ್ಲಿ ಹಮ್ಮಿಕೊಳ್ಳಲಾಗಿದ್ದು, ಈ ಕಾರ್ಯಕ್ರಮಕ್ಕೆ ಶಿವಮೊಗ್ಗ ನಗರ ಹಾಗೂ ಗ್ರಾಮೀಣಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ, ಖಾಸಗಿ ಶಾಲೆ, ಮಕ್ಕಳ ಪಾಲನಾ ಸಂಸ್ಥೆಯ ಮಕ್ಕಳು ಹಾಗೂ ವಸತಿ ನಿಲಯದ 120 ಮಕ್ಕಳು ಭಾಗವಹಿಸಿದ್ದು, ಜಿಲ್ಲೆಯಲ್ಲಿರುವ ಶಾಲೆ ಹಾಗೂ ವಸತಿ ಶಾಲೆಗಳಲ್ಲಿನ ಆಯ್ದ ಮಕ್ಕಳಿಂದ ಪ್ರಸ್ತುತ ದಿನಮಾನಗಳಲ್ಲಿ ಮಕ್ಕಳ ಜ್ವಲಂತ ಸಮಸ್ಯೆಗಳ ಕುರಿತು ಮಾನ್ಯ ಸದಸ್ಯರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು ಇವರು ಮಕ್ಕಳೊಂದಿಗೆ ಸಂವಾದ ನಡೆಸಿರುತ್ತಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ಶ್ರೀಮತಿ ಅಪರ್ಣಾ ಎಮ್, ಕೊಳ್ಳಾ, ಸದಸ್ಯರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು ಇವರು ನೇರವೇರಿಸಿದರು ಹಾಗೂ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೃಷ್ಣಪ್ಪ ಬಿ.ಹೆಚ್ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಶಿವಮೊಗ್ಗ ಇವರು ವಹಿಸಿರುತ್ತಾರೆ ಮತ್ತು ಜಿಲ್ಲೆಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಕ್ಕಳೊಂದಿಗೆ ನೇರ ಸಂವಾದದಲ್ಲಿ ಭಾಗವಹಿಸಿ ಪರಿಹಾರ ಕಂಡುಕೊಳ್ಳಲು ನೆರವಾದರು.

## ಅಖಿಲ ಭಾರತ ಸಾಹಿತ್ಯ ಸಮ್ಮೇಳನದಲ್ಲಿ ಜಿಲ್ಲೆಯ ವಿವಿಧ ಸಾಧಕರಿಗೆ ಅಭಿನಂದನೆ

**ಚಿಕ್ಕಮಗಳೂರು:** ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಮಂಡ್ಯದಲ್ಲಿ ಇದೇ ಡಿಸೆಂಬರ್ 20, 21, 22ರಂದು ನಡೆಯಲಿದ್ದು, ಈ ಸಮ್ಮೇಳನದಲ್ಲಿ ನಮ್ಮ ಜಿಲ್ಲೆಯ ಮಾಜಿ ಸಚಿವರಾದ ಸಗೀರ್‌ಅಹಮ್ಮದ್ ಅವರನ್ನು ವಿಶೇಷವಾಗಿ ಅಭಿನಂದಿಸಲು ಸಾಹಿತ್ಯ ಪರಿಷತ್ತಿನ ಕಾರ್ಯಕಾರಿ ಸಮಿತಿ ತೀರ್ಮಾನಿಸಿದೆ. ಇವರು ಈ ಹಿಂದೆ ಸಚಿವರಾಗಿದ್ದಾಗ ಕೇಂದ್ರ ಕ.ಸಾ.ಪ.ದಲ್ಲಿ ಹರಿಕೃಷ್ಣ ಪುನರೂರು ಮತ್ತು ಜಿಲ್ಲೆಯಲ್ಲಿ ಅಜ್ಜಂಪುರ ಜಿ.ಸೂರಿ ಆಯ್ಕೆಗೊಂಡ ಸಂದರ್ಭದಲ್ಲಿ ಚಿಕ್ಕಮಗಳೂರಿನ ಕ.ಸಾ.ಪ. ಪದಗ್ರಹಣ ಸಮಾರಂಭದಲ್ಲಿ ಅಂದಿನ ಸಚಿವರಾದ ಸಗೀರ್ ಅಹಮ್ಮದ್ ಅವರನ್ನು ಉಚಿತ ಬಸ್ ಪಾಸ್‌ಗಾಗಿ ಮನವಿ ಮಾಡಿಕೊಂಡಾಗ ಅದನ್ನು ಪರಿಗಣಿಸಿ ಕನ್ನಡ ನುಡಿ ಸೇವೆಗಾಗಿ ರಾಜ್ಯದಲ್ಲಿರುವ 30 ಜಿಲ್ಲೆಯ ಅಧ್ಯಕ್ಷರುಗಳಿಗೆ ಉಚಿತ ಬಸ್‌ಪಾಸ್‌ನ್ನು ನೀಡಿದ ಕೀರ್ತಿ ಸಗೀರ್‌ಅಹಮ್ಮದ್ ಅವರಿಗೆ ಸಲ್ಲುತ್ತದೆ.





ಆ ಕಾರಣಕ್ಕೆ ಅವರನ್ನು ಈ ಸಂದರ್ಭದಲ್ಲಿ ವಿಶೇವಾಗಿ ಅಭಿನಂದಿಸಲಾಗುತ್ತಿದೆ. ಸಮಾಜ ಸೇವೆಯಲ್ಲಿ ಅಜ್ಜಂಪುರದ ಎ.ಸಿ. ಚಂದ್ರಪ್ಪ ಅವರನ್ನು ಹಾಗೂ ಭಾರತೀಯ ಸೇನೆಯಲ್ಲಿ ಪರಮ ವಿಶಿಷ್ಟ ಸೇವಾ ಮೆಡಲ್, ಉತ್ತಮ ವಿಶಿಷ್ಟ ಸೇವಾ ಮೆಡಲ್, ಅತಿ ವಿಶಿಷ್ಟ ಸೇವಾ ಮೆಡಲ್ ಮತ್ತು ಯುದ್ಧ ಸೇವಾ ಮೆಡಲ್ ಪುರಸ್ಕೃತರಾದ ಲೆಫ್ಟಿನೆಂಟ್ ಜನರಲ್ಲಿ ಬಗ್ಗವಳ್ಳಿ ಸೋಮಶೇಖರ ರಾಜು ಅವರನ್ನು ನಮ್ಮ ಜಿಲ್ಲೆಯಿಂದ ಸನ್ಮಾನಿತರಾಗಲು ಆಯ್ಕೆಯಾಗಿದ್ದಾರೆ.

ಪಠ್ಯಪುಸ್ತಕದ ಸಂಪಾದಕ ಮಂಡಳಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸಂಪನ್ಮೂಲ ವ್ಯಕ್ತಿಯಾದ ಕೊಪ್ಪದ ಶಿಕ್ಷಕ ಆರ್.ಡಿ. ರವೀಂದ್ರ ಅವರು ಉಪನ್ಯಾಸ ಮಾಲಿಕೆಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಡಾ.ಶೃತಿ ಬಿ.ಆರ್., ಮಹಿಳಾ ವಿಶೇಷ ಕವಿಗೋಷ್ಠಿಗೆ ಮತ್ತು ಕವಿಗೋಷ್ಠಿಗೆ ಸಾಹಿತಿ ಕಳಸಾ ಗೀತಾ ಮಕ್ಕಿಮನೆ ಹಾಗೂ ದೃಷ್ಟಿಚೇತನರ ವಿಶೇಷ ಕವಿಗೋಷ್ಠಿಗೆ ಹರೀಶ್ ಸಿ. ಇವರುಗಳು ನಮ್ಮ ಜಿಲ್ಲೆಯಿಂದ ಆಯ್ಕೆಯಾಗಿದ್ದಾರೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸೂರಿ ಶ್ರೀನಿವಾಸ್ ತಿಳಿಸಿದ್ದಾರೆ.

### ಇನ್ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಕೇಂದ್ರದಿಂದ ಬಳ್ಳಾರಿಯ ಬಿಐಟಿಎಂನಲ್ಲಿ'ರಾಷ್ಟ್ರೀಯ ಶಕ್ತಿ ಸಂರಕ್ಷಣಾ ದಿನಾಚರಣೆ'

## "ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆ, ನಮ್ಮೆಲ್ಲರ ಹೊಣೆ": ಡಾ.ಎಸ್.ಎಂ.ಶಶಿಧರ್



**ಬಳ್ಳಾರಿ:** "ನವೀಕರಿಸಲಾಗದ ನೈಸರ್ಗಿಕ ಶಕ್ತಿ ಮೂಲಗಳ ಅಪಬಳಕೆಯನ್ನು ತಪ್ಪಿಸಿ, ಭವಿಷ್ಯಕ್ಕಾಗಿ ಸಂಪನ್ಮೂಲಗಳನ್ನು ಉಳಿಸಬೇಕು; ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆ, ಎಲ್ಲರ ಹೊಣೆ" ಎಂದು ಮುನಿರಾಬಾದ್ ಇನ್ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಅಧ್ಯಕ್ಷ ಡಾ.ಎಸ್.ಎಂ. ಶಶಿಧರ್ ಹೇಳಿದರು.

ಅವರು ಮುನಿರಾಬಾದಿನ ಇನ್ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಕೇಂದ್ರ ಹಾಗೂ ಬಳ್ಳಾರಿ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ & ಮ್ಯಾನೇಜ್ಮೆಂಟ್ ಕಾಲೇಜು ಸಂಯುಕ್ತವಾಗಿ ಶನಿವಾರದಂದು ಕಾಲೇಜಿನಲ್ಲಿ ಆಯೋಜಿಸಿದ್ದ 'ರಾಷ್ಟ್ರೀಯ ಶಕ್ತಿ ಸಂರಕ್ಷಣಾ ದಿನಾಚರಣೆ' ಸಮಾರಂಭದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡುತ್ತಿದ್ದರು.

'ನಾವು ಈಗ ಬಳಸುವ ಪ್ರಾಥಮಿಕ ಶಕ್ತಿಯ ಮೂಲವು ಪಳೆಯುಳಿಕೆ ಇಂಧನಗಳು; ಕಲ್ಲಿದ್ದಲು, ನೈಸರ್ಗಿಕ ಅನಿಲ ಇತ್ಯಾದಿಗಳಿಂದ ಬರುತ್ತದೆ, ಅದು ರೂಪುಗೊಳ್ಳಲು ಲಕ್ಷಾಂತರ ವರ್ಷಗಳನ್ನು ತೆಗೆದುಕೊಳ್ಳುತ್ತದೆ. ಅವುಗಳನ್ನು ನವೀಕರಿಸಲಾಗುವುದಿಲ್ಲ. ಆದ್ದರಿಂದ, ನಾವು ಸೌರಶಕ್ತಿ, ಪವನ ಶಕ್ತಿ, ಜಲಶಕ್ತಿ, ಭೂಶಾಖದ ಶಕ್ತಿ, ಜೀವರಾಶಿ ಶಕ್ತಿ ಮುಂತಾದ ನವೀಕರಿಸಬಹುದಾದ ಸಂಪನ್ಮೂಲಗಳಿಂದ ಶಕ್ತಿಯನ್ನು ಉತ್ಪಾದಿಸುವುದು ಅನಿವಾರ್ಯವಾಗಿದೆ' ಎಂದು ಡಾ.ಎಸ್.ಎಂ. ಶಶಿಧರ್ ಹೇಳಿದರು.

ನಮ್ಮ ದೈನಂದಿನ ಜೀವನದಲ್ಲಿ ಸಣ್ಣ ಬದಲಾವಣೆಗಳನ್ನು ಅಳವಡಿಸಿಕೊಳ್ಳುವುದರ ಮೂಲಕ, ವಿಶ್ವದಲ್ಲಿ ನಾವು ದೊಡ್ಡ ಪರಿವರ್ತನೆಯನ್ನು. ಅನುಷ್ಠಾನಕ್ಕೆ ತರಬಹುದು. ಲೈಟ್‌ಗಳು, ಫ್ಯಾನ್‌ಗಳು, ಏರ್ ಕಂಡಿಷನರ್ಗಳು ಮತ್ತು ಇತರ ಎಲೆಕ್ಟ್ರಾನಿಕ್ ಉಪಕರಣಗಳ ಅನಗತ್ಯ ಬಳಕೆಯನ್ನು ತಪ್ಪಿಸುವ ಮೂಲಕ ಪ್ರತಿಯೊಬ್ಬ ವ್ಯಕ್ತಿಯು ತಮ್ಮ ಕೆಲಸವನ್ನು ಮಾಡಬಹುದು. ರಾಷ್ಟ್ರೀಯ ಶಕ್ತಿ ಸಂರಕ್ಷಣಾ ದಿನದ ಆಚರಣೆಯ ಹಿಂದಿನ ಮುಖ್ಯ ಉದ್ದೇಶವೆಂದರೆ ಜನರು ಶಕ್ತಿಯ ಸಮರ್ಥ ಬಳಕೆ ಮತ್ತು ಅದರ ಸಂರಕ್ಷಣೆಯ ಬಗ್ಗೆ ಅರಿವು ಮೂಡಿಸಲು ಮತ್ತು ತಮ್ಮ ಜೀವನಶೈಲಿಯ ಬಗ್ಗೆ ಹೆಚ್ಚು ಜಾಗೃತರಾಗುವಂತೆ ಮಾಡುವುದು ಎಂದು ಡಾ.ಎಸ್.ಎಂ. ಶಶಿಧರ್ ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಉಪ-ಪ್ರಾಂಶುಪಾಲ ಡಾ.ಬಿ.ಎಸ್. ಖೇಣೇದ್ ಮಾತನಾಡಿ ಭಾರತವು ಶಕ್ತಿ ಸಂರಕ್ಷಣಾ ಕಾಯ್ದೆಯನ್ನು ಮೊದಲ ಬಾರಿಗೆ 2001ರಲ್ಲಿ ಶಕ್ತಿ ದಕ್ಷತೆ ಬ್ಯೂರೋವನ್ನು ಜಾರಿಗೆ ತಂದಿತು. ಶಕ್ತಿಯ ಬಳಕೆಯನ್ನು ಪರಿಣಾಮಕಾರಿಯಾಗಿ ಬಳಸುವಂತೆ ಜನರನ್ನು ಪ್ರೋತ್ಸಾಹಿಸುವುದು ಈ ದಿನದ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು. ಮುನಿರಾಬಾದಿನ ಇನ್ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಗೌರವ ಕಾರ್ಯದರ್ಶಿ ಡಾ.ಪಿ.ಶರತ್ ಕುಮಾರ್, ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಡಾ. ವಿ.ವೆಂಕಟ ರಮಣ, ವಿದ್ಯುತ್ ವಿಭಾಗದ ಮುಖ್ಯಸ್ಥ ಡಾ ಶರಣ ರೆಡ್ಡಿ, ಸಿವಿಲ್ ವಿಭಾಗದ ಮುಖ್ಯಸ್ಥ ಡಾ ಮಣಿಕಂಠ ಹಾಗೂ ಸಂಯೋಜಕರಾದ ಡಾ.ಶೇಖರ್ ಕೆ., ಡಾ.ಬಣಕಾರ ನಾಗರಾಜ್, ಈರಯ್ಯ ಶಿಕ್ಕೇರಿಮಠ ಮತ್ತು 400ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಸಮಾರಂಭದಲ್ಲಿ ಶಕ್ತಿ ಮೂಲಗಳನ್ನು ದಕ್ಷತೆಯಿಂದ ಬಳಸುವುದಾಗಿ ಪ್ರತಿಜ್ಞೆ ಮಾಡಲಾಯಿತು. ಹಾಗೂ ವಿದ್ಯಾರ್ಥಿಗಳು ಸ್ಥಾಪಿಸಿರುವ 'ನವೀಕರಿಸಬಹುದಾದ ಶಕ್ತಿಮೂಲಗಳ ಕ್ಲಬ್' ಉದ್ಘಾಟಿಸಲಾಯಿತು.

## ಹುಲಿ-ಸಿಂಹಧಾಮ ಡಿಸೆಂಬರ್‌ನಲ್ಲಿ ಮಂಗಳವಾರದಂದು ವೀಕ್ಷಣೆಗೆ ಲಭ್ಯ

**ಶಿವಮೊಗ್ಗ:** ತ್ಯಾವರೆಕೊಪ್ಪದ ಹುಲಿ-ಸಿಂಹಧಾಮಕ್ಕೆ ಆಗಮಿಸುವ ಪ್ರವಾಸಿಗರ ಹಾಗೂ ಡಿಸೆಂಬರ್ ಮಾಹೆಯಲ್ಲಿ ಶಾಲಾ/ಕಾಲೇಜು ವಿದ್ಯಾರ್ಥಿಗಳ ಪ್ರವಾಸದ ಅನುಕೂಲಕ್ಕಾಗಿ ಹುಲಿ-ಸಿಂಹಧಾಮದಲ್ಲಿನ ಝೂ ಮತ್ತು ಸಫಾರಿ ವೀಕ್ಷಣೆಯನ್ನು ಡಿಸೆಂಬರ್ ಮಾಹೆಯ 17, 24 ಮತ್ತು 31ರ ಮಂಗಳವಾರದಂದು ಸಹ ತೆರೆದಿರುತ್ತದೆ. ಇದರ ಸದುಪಯೋಗವನ್ನು ಪ್ರವಾಸಿಗರು ಪಡೆದುಕೊಳ್ಳಬಹುದೆಂದು ತ್ಯಾವರೆಕೊಪ್ಪದ ಹುಲಿ-ಸಿಂಹಧಾಮದ ಕಾರ್ಯ ನಿರ್ವಾಹಕ ನಿರ್ದೇಶಕರು ತಿಳಿಸಿದ್ದಾರೆ.

## ಡಿ.22 ರಂದು ಪೋಷಕರಿಗೆ ವಿಶೇಷ ಕಾರ್ಯಾಗಾರ

**ದಾವಣಗೆರೆ:** ಯುವ ಜನರನ್ನು ಸಶಕ್ತಗೊಳಿಸುವ ನಿಟ್ಟಿನಲ್ಲಿ ಡಿ.22 ರಂದು ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ ಇಲ್ಲಿ ಪೋಷಕರಿಗೆ ಎರಡು ಗಂಟೆಗಳ ವಿಶೇಷ ಕಾರ್ಯಗಾರವನ್ನು ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ:08192-222059, 9008343253 ನ್ನು ಸಂಪರ್ಕಿಸಲು ಇಲಾಖೆಯ ಸಹಾಯಕ ನಿರ್ದೇಶಕರಾದ ರೇಣುಕಾದೇವಿ ತಿಳಿಸಿದ್ದಾರೆ.

## ಉದ್ಯೋಗ ಮೇಳ

**ದಾವಣಗೆರೆ:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಇವರ ವತಿಯಿಂದ ಡಿಸೆಂಬರ್ 20 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಕೊಠಡಿ ಸಂಖ್ಯೆ 51, ಡಿ.ಸಿ.ಆಫೀಸ್, ದಾವಣಗೆರೆ ಇಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಈ ಉದ್ಯೋಗ ಮೇಳದಲ್ಲಿ ಖಾಸಗಿ ಸಂಸ್ಥೆಗಳು ಭಾಗವಹಿಸುತ್ತಿದ್ದು, ತಮ್ಮ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ಎಸ್ ಎಸ್ ಎಲ್ ಸಿ, ಪಿಯುಸಿ, ಐಟಿಐ, ಡಿಪ್ಲೋಮ, ಪದವಿ ಮತ್ತು ಸ್ನಾತಕೋತ್ತರ ಪದವಿಯಲ್ಲಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳಲಿದ್ದಾರೆ. ಆಸಕ್ತ ಅಭ್ಯರ್ಥಿಗಳು ಕನಿಷ್ಠ 5 ಬಯೋಡಾಟಾ ಮತ್ತು ಆಧಾರ್ ನಂಬರ್‌ನೊಂದಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:8105122556, 08192-259446ನ್ನು ಸಂಪರ್ಕಿಸಲು ಉದ್ಯೋಗಾಧಿಕಾರಿ ರವೀಂದ್ರ.ಡಿ ತಿಳಿಸಿದ್ದಾರೆ.

# ಲೋಕ ಅದಾಲತ್: 5317 ಪ್ರಕರಣಗಳು ಇತ್ಯರ್ಥ

**ಪಾಂಡವಪುರ:** ರಾಷ್ಟ್ರೀಯ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಡಿ.14ರಂದು ಬೃಹತ್ ಜನತಾ ನ್ಯಾಯಾಲಯದಲ್ಲಿ ದಾಖಲಾಗಿದ್ದ 5631 ಪ್ರಕರಣಗಳಲ್ಲಿ 5317 ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗಿದೆ ಎಂದು ಪಟ್ಟಣದ ಜೆಎಂಎಫ್ಸಿ ನ್ಯಾಯಾಲಯದ ಹಿರಿಯ ಸಿವಿಲ್ ನ್ಯಾಯಾಧೀಶ ಆರ್.ಮಹೇಶ್ ತಿಳಿಸಿದರು.

ಸಂಯೋಜಿತ ಕ್ರಿಮಿನಲ್ ಅಪರಾಧದಡಿಯಲ್ಲಿ ದಾಖಲಾಗಿದ್ದ 11 ಪ್ರಕರಣಗಳಲ್ಲಿ 5 ಇತ್ಯಾರ್ಥಗೊಂಡಿದೆ. ಎನ್‌ಐ ಕಾಯ್ದೆ 138 ರಡಿಯಲ್ಲಿ



ದಾಖಲಾಗಿದ್ದ 89 ಪ್ರಕರಣಗಳ ಪೈಕಿ 39 ಪ್ರಕರಣ, ಹಣ ವಸೂಲಾತಿ ಪ್ರಕರಣದ 20 ರಲ್ಲಿ 6, ಎಂಎಸಿಟಿ 98ಕೇಸುಗಳಲ್ಲಿ 44, ವಿಭಾಗ ದಾವೆಯ 23 ಪ್ರಕರಣಗಳಲ್ಲಿ 11, ಎಲ್‌ಎಸಿ ಪ್ರಕರಣದ 6ರಲ್ಲಿ 4, ಎಂವಿಸಿಯ 42 ಪ್ರಕರಣಗಳಲ್ಲಿ 14, ಪೇಟಿ ಕೇಸ್ಗಳಲ್ಲಿ 72ರಲ್ಲಿ 71 ಹಾಗೂ ಇತರೆ ಕ್ರಿಮಿನಲ್ ಪ್ರಕರಣಗಳ 23 ರಲ್ಲಿ 11ಪ್ರಕರಣಗಳನ್ನು ಇತ್ಯಾರ್ಥ ಪಡಿಸಲಾಗಿದ್ದು, ಒಟ್ಟಾರೆ ಎಲ್ಲಾ ಪ್ರಕರಣಗಳಿಂದ 3.5027937 ಕೋಟಿ ಹಣವನ್ನು ಪಾವತಿಸಿಕೊಳ್ಳಲಾಗಿದೆ ಎಂದು ಸೋಮವಾರ ಸುದ್ದಿಗೋಷ್ಠಿಯಲ್ಲಿ ವಿವರಿಸಿದರು.

ಅಪರ ಹಿರಿಯ ಸಿವಿಲ್ ನ್ಯಾಯಾಧೀಶೆ ಬಿ.ಪಾರ್ವತಮ್ಮ ಮಾತನಾಡಿ, ಪೂರ್ವ ದಾವೆ ಪ್ರಕರಣಗಳಲ್ಲಿ ಬ್ಯಾಂಕ್ ಸಂಬಂಧಿತ ದಾಖಲಾಗಿದ್ದ 110 ಪ್ರಕರಣಗಳಲ್ಲಿ 8, ಭೂ ವ್ಯಾಜ್ಯದ 150 ಪ್ರಕರಣಗಳಲ್ಲಿ 150, ಕಂದಾಯ ಪ್ರಕರಣಗಳಲ್ಲಿ ದಾಖಲಾಗಿದ್ದ 4045 ಕೇಸುಗಳಲ್ಲಿ 4045 ಪ್ರಕರಣಗಳನ್ನು ಇತ್ಯರ್ಥವಾಗಿದೆ. ಟ್ರಾಫಿಕ್ ಪ್ರಕರಣಗಳಲ್ಲಿ 870 ರಲ್ಲಿ 870 ಇತರೆ ಕ್ರಿಮಿನಲ್ ಪ್ರಕರಣಗಳಲ್ಲಿ ದಾಖಲಾಗಿದ್ದ 11 ರಲ್ಲಿ 11 ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದ್ದು, ಒಟ್ಟಾರೆ ದಾಖಲಾಗಿದ್ದ 5186 ಪ್ರಕರಣಗಳಲ್ಲಿ 5084 ಪ್ರಕರಣಗಳು ರಾಜಿ ಸಂಧಾನದ ಮೂಲಕ ಇತ್ಯರ್ಥಗೊಂಡಿದೆ. ಈ ಪ್ರಕರಣಗಳಲ್ಲಿ 990288 ಹಣ ಪಾವತಿಸಿಕೊಳ್ಳಲಾಗಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ನ್ಯಾಯಾಲಯದ ಸಿಬ್ಬಂದಿ ಮಂಚಯ್ಯ ಇದ್ದರು.

# ತಬಲಾ ಮಾಂತ್ರಿಕ ಉಸ್ತಾದ್ ಝಾಕೀರ ಹುಸೇನ್ ವಿಧಾನಸಭೆಯಲ್ಲಿ ಶ್ರದ್ಧಾಂಜಲಿ

**ಬೆಳಗಾವಿ:** ಭಾನುವಾರ ನಿಧನರಾದ ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ನರಸಿಂಹಸ್ವಾಮಿ.ಜೆ ಹಾಗೂ ಅಂತರಾಷ್ಟ್ರೀಯ ಖ್ಯಾತಿಯ ತಬಲಾ ವಾದಕ ಉಸ್ತಾದ್ ಜಾಕೀರ್ ಹುಸೇನ್ ಅವರಿಗೆ ವಿಧಾನಸಭೆಯಲ್ಲಿ ಸಂತಾಪ ಸೂಚಿಸಲಾಯಿತು.

ಸಭಾಧ್ಯಕ್ಷ ಯು.ಟಿ.ಖಾದರ್ ಅವರು ಮಾಜಿ ಶಾಸಕ ನರಸಿಂಹಸ್ವಾಮಿ.ಜೆ ಹಾಗೂ ತಬಲಾ ವಾದಕ ಜಾಕೀರ್ ಹುಸೇನ್ ನಿಧನದ ವಿಷಯವನ್ನು ಪ್ರಸ್ತಾಪಿಸಿ ಸಂತಾಪ ಸೂಚನೆ ನಿರ್ಣಯವನ್ನು ಮಂಡಿಸಿದರು.

ನರಸಿಂಹಸ್ವಾಮಿ.ಜೆ ಅವರು 25-05-1947 ರಂದು ಜನಿಸಿದ್ದರು. ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರದಿಂದ 2004 ಹಾಗೂ 2008ರಲ್ಲಿ ಶಾಸಕರಾಗಿ ಆಯ್ಕೆಯಾಗಿದ್ದರು. ಬೆಂಗಳೂರು ಜಿಲ್ಲಾ ಪಂಚಾಯತ್ ಸದಸ್ಯ, ಕೊಳಚೆ ನಿರ್ಮೂಲನಾ ಮಂಡಳಿ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು. ಇವರು 15-12-2024 ರಂದು ನಿಧನ ಹೊಂದಿದ್ದಾರೆ.

ಅಂತರರಾಷ್ಟ್ರೀಯ ಖ್ಯಾತಿಯ ತಬಲಾ ವಾದಕ ಉಸ್ತಾದ್ ಜಾಕೀರ್ ಹುಸೇನ್ 09-03-1951 ರಂದು ಮುಂಬೈನಲ್ಲಿ ಜನಿಸಿದ್ದರು. ಹಿಂದೂಸ್ಥಾನಿ, ಶಾಸ್ತ್ರೀಯ ಸಂಗೀತ ಮತ್ತು ಜಾಯ್ ಫ್ಯೂಷನ್ ಅಭ್ಯಾಸ ಮಾಡಿದ್ದರು. ತಬಲಾ ವಾದನದ ಜೊತೆಗೆ ಸಂಗೀತ ನಿರ್ದೇಶನ, ನಟನಾ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದರು. ಇಂಗ್ಲೀಷ್ ಗಿಟಾರ್ ವಾದಕ ಜಾನ್ ಮೆಕ್ ಲಾಗ್ಲನ್, ಪಿಟೀಲು ವಾದಕ ಎಲ್.ಶಂಕರ್ ಮತ್ತು ತಾಳವಾದುಗಾರ ಟಿ.ಹೆಚ್.ವಿನಾಯಕರಾಮ್ ಅವರದೊಂದಿಗೆ 1973ರಲ್ಲಿ ನಡೆಸಿಕೊಟ್ಟ ವಿಶಿಷ್ಟ ಯೋಜನೆ ಸಂಗೀತ ಕ್ಷೇತ್ರದಲ್ಲಿ ಅಪ್ರತಿಮವೆನಿಸಿತ್ತು. ಪದ್ಮಶ್ರೀ, ಪದ್ಮಭೂಷಣ ಮತ್ತು ಪದ್ಮವಿಭೂಷಣ ಪ್ರಶಸ್ತಿಗೆ ಭಾಜನರಾಗಿದ್ದರು. 5 ಗ್ರ್ಯಾಮಿ ಪ್ರಶಸ್ತಿಗಳನ್ನು ಪಡೆದ್ದರು. ಜಾಕೀರ್ ಹುಸೇನ್ 15-12-2024 ರಂದು ಸ್ಯಾನ್ ಫ್ರಾನ್ಸಿಸ್ಕೋದಲ್ಲಿ ನಿಧರಾಗಿದ್ದಾರೆ ಎಂದು ಸದನಕ್ಕೆ ಸಭಾಧ್ಯಕ್ಷ ಯು.ಟಿ.ಖಾದರ್ ಅವರು ತಿಳಿಸಿದರು.

# ರಂಗಕಲೆ ಉಳಿವಿಗಾಗಿ "ಮನೆ ಬಾಗಿಲಿಗೆ ರಂಗಕಲೆ" ಕಾರ್ಯಕ್ರಮ: ತತ್ತನೂರು ಗ್ರಾಮಸ್ಥರಿಂದ ಶ್ಲಾಘನೆ



**ಹೊಸಕೋಟೆ:** ನಶಿಸುತ್ತಿರುವ ರಂಗಭೂಮಿ ಕಲೆ ಉಳಿವಿಗಾಗಿ ತಾಲ್ಲೂಕು ಕಲಾವಿದರ ಸಂಘದಿಂದ ರೂಪಿಸಿರುವ ಮನೆ ಬಾಗಿಲಿಗೆ ರಂಗಕಲೆ ಕಾರ್ಯಕ್ರಮವನ್ನು ತತ್ತನೂರು ಗ್ರಾಮಸ್ಥರು ಶ್ಲಾಘಿಸಿದ್ದಾರೆ ಎಂದು ಕಲಾವಿದರ ಸಂಘದ ನಿರ್ದೇಶಕ ನಟರಾಜ್ ಎಂ ಎನ್ ಆರ್ ತಿಳಿಸಿದರು.

ತಾಲೂಕಿನ ತತ್ತನೂರು ಗ್ರಾಮದಲ್ಲಿ ಕಲಾವಿದರ ಕ್ಷೇಮಾಭಿವೃದ್ಧಿ ಸಂಘದಿಂದ ಹಮ್ಮಿಕೊಳ್ಳಲಾಗಿದ್ದ ಮನೆ ಬಾಗಿಲಿಗೆ ರಂಗಕಲೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಈ ಸಂಧರ್ಭದಲ್ಲಿ ತಬಲವಾದಕರಾದ ಮುನಿಎಲ್ಲಪ್ಪ, ಹಿರಿಯ ಕಲಾವಿದರಾದ ನಾಗೇಶ್ ರೆಡ್ಡಿ, ವೆಂಕಟೇಶ, ನಂಜೇಗೌಡ, ಮಂಜುನಾಥ ರೆಡ್ಡಿ, ಗೋಪಿ, ಹಲಸಹಳ್ಳಿ ಮುನಿರಾಜು ದೇವರಾಜು, ಶ್ರೀಧರ್, ಆಟೋ ವೆಂಕಟೇಶ, ಮಂಜುಶ್ರೀ ಶ್ರೀದೇವಿ, ಸೌಭಾಗ್ಯಮ್ಮ, ಮೂರ್ತಿ, ಕೃಷ್ಣಪ್ಪ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಕಲಾವಿದರು ಇದ್ದರು.

# ಸಮ್ಮೇಳನಕ್ಕೆ ವ್ಯಾಪಕ ಪೊಲೀಸ್ ಬಂದೋಬಸ್ತ್: ಸಚಿವ ಎನ್.ಚಲುವರಾಯಸ್ವಾಮಿ



**ಮಂಡ್ಯ:** 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಮಂಡ್ಯದಲ್ಲಿ 30 ವರ್ಷಗಳ ಬಳಿಕ ನೆರವೇರುತ್ತಿದೆ.ಲಕ್ಷಾಂತರ ಸಂಖ್ಯೆಯಲ್ಲಿ ಸಾರ್ವಜನಿಕರು ಸೇರಲಿದ್ದು ಗಣ್ಯರು, ಸಾಹಿತ್ಯಾಸಕ್ತರು ಮತ್ತು ಸಾರ್ವಜನಿಕರ ಸುರಕ್ಷತೆ ಕಾಪಾಡುವ ಹೊಣೆ ಪೊಲೀಸರ ಮೇಲಿದ್ದು, ಯಾವುದೇ ಅನಾಹುತಕ್ಕೆ ಎಡೆಮಾಡಿಕೊಡದಂತೆ ಕರ್ತವ್ಯ ನಿರ್ವಹಿಸಬೇಕು ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷರಾದ ಚಲುವರಾಯಸ್ವಾಮಿ ಅವರು ಹೇಳಿದರು.

ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಆಯೋಜಿಸಿದ್ದ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪೊಲೀಸ್ ಬಂದೋಬಸ್ತ್ ಸಭೆಯಲ್ಲಿ ಮಾತನಾಡಿದ ಸಚಿವರು, ಸಮ್ಮೇಳನಕ್ಕೆ ಆಗಮಿಸುವವರಿಗೆ ಸಂಚಾರ ಮಾರ್ಗದ ಫಲಕಗಳು ಹಾಗೂ ಆಗಮನ, ನಿರ್ಗಮನದ ಸ್ಥಳಗಳ ಕುರಿತ ಸೂಚನಾ ಫಲಕಗಳನ್ನು ಹೆದ್ದಾರಿಗಳಲ್ಲಿ ಹಾಕಬೇಕು.ಜನದಟ್ಟಣೆ ಹೆಚ್ಚಾಗಿರುವುದರಿಂದ ಕಾನೂನು ಸುವ್ಯವಸ್ಥೆ ಹದಗೆಡದಂತೆ ನೋಡಿಕೊಳ್ಳಬೇಕು. ವ್ಯಾಪಕವಾಗಿ ಪೊಲೀಸ್ ಬಂದೋಬಸ್ತ್ ಆಗಬೇಕು ಎಂದರು.

ಸಮ್ಮೇಳನದ ಸಂಬಂಧ ಪೊಲೀಸ್ ಬಂದೋಬಸ್ತ್ ಗೆ ನಿಯೋಜನೆ ಗೊಳ್ಳಲಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಊಟ,ತಿಂಡಿ,ವಸತಿ ಸೌಕರ್ಯ ಕಲ್ಪಿಸಬೇಕು.ಗಣ್ಯರ ಭದ್ರತೆಯಲ್ಲಿ ಲೋಪವಾಗದಂತೆ ನಿಗಾ ವಹಿಸಬೇಕು.ಅಡುಗೆ ಮಾಡುವ ಸ್ಥಳ,ಪಾರ್ಕಿಂಗ್ ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ ಬೆಂಕಿ ಅವಘಡ ಸಂಭವಸಿದರೆ ಅದನ್ನು ನಂದಿಸಲು ಅಗ್ನಿಶಾಮಕ ವಾಹನಗಳನ್ನು ನಿಯೋಜಿಸಬೇಕು ಎಂದರು.

ಇದೇ ವೇಳೆ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಅವರು, ಸಮ್ಮೇಳನ ಸಂಬಂಧ ಮಂಡ್ಯದಲ್ಲಿ ಕೈಗೊಂಡಿರುವ ಪೊಲೀಸ್ ಬಂದೋಬಸ್ತ್ ಕುರಿತು ಸಚಿವರಿಗೆ ವಿವರವಾಗಿ ಮಾಹಿತಿ ನೀಡಿದರು.

ಸಮ್ಮೇಳನಾಧ್ಯಕ್ಷರ ಮೆರವಣಿಗೆ ಸಾಗುವ ಮಾರ್ಗದಲ್ಲಿ ಸೂಕ್ತ ಬಂದೋಬಸ್ತ್ ಮಾಡಲಾಗುತ್ತದೆ. ಸಮ್ಮೇಳನಕ್ಕೆ ಬೆಂಗಳೂರು, ಮೈಸೂರು ಕಡೆಯಿಂದ ಆಗಮಿಸುವವರಿಗೆ, ನಿರ್ಗಮಿಸು ವವರಿಗೆ ಮಾರ್ಗದ ಸೂಚನಾ ಫಲಕಗಳನ್ನು ಅಳವಡಿಸಲಾಗುತ್ತದೆ. ಸಂಚಾರ ದಟ್ಟಣೆ ಆಗದಂತೆ ಕ್ರಮವಹಿಸಲಾಗುವುದು.

67 ಎಕರೆಗೂ ಅಧಿಕ ಪ್ರದೇಶದಲ್ಲಿ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದ್ದು ಎಲ್ಲಾ ಕಡೆ ಪೊಲೀಸರನ್ನು ನಿಯೋಜಿಸಲಾಗುವುದು ಎಂದರು.

6 ಎಎಸ್ ಪಿ, 21 ಡಿವೈಎಸ್ ಪಿ, 63 ಸಿಪಿಐ,170 ಪಿಎಸ್ ಐ, 262 ಎಎಸ್ ಐ, 1500 ಪೇದೆಗಳು, 1000 ಹೋಂ ಗಾರ್ಡ್, 165 ಮಹಿಳಾ ಕಾನ್ ಸ್ಟೇಬಲ್ ಒಳಗೊಂಡಂತೆ 14 ಜಿಲ್ಲೆಗಳಿಂದ 3200ಕ್ಕೂ ಅಧಿಕ ಪೊಲೀಸ್ ಸಿಬ್ಬಂದಿ ಆಗಮಿಸಲಿದ್ದಾರೆ. ಬೆಳಗ್ಗೆ, ಮಧ್ಯಾಹ್ನ, ರಾತ್ರಿ ಪಾಳಿಯಲ್ಲಿ ಪೊಲೀಸರು ಕರ್ತವ್ಯ ನಿರ್ವಹಿಸಲಿದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ಶಾಸಕರಾದ ರವಿಕುಮಾರ್ ಗಣಿಗ,ಎ.ಬಿ.ರಮೇಶ ಬಂಡಿಸಿದ್ದೇಗೌಡ, ದಿನೇಶ್ ಗೂಳಿಗೌಡ, ಜಿಲ್ಲಾಧಿಕಾರಿ ಡಾ.ಕುಮಾರ, ಡಿಐಜಿಪಿ ಡಾ. ಬೋರಲಿಂಗಯ್ಯ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್ ಸೇರಿದಂತೆ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

# ಮಹಾಗನಿ ಗಿಡಗಳನ್ನು ರಾತ್ರೋ-ರಾತ್ರಿ ನಾಶ ಮಾಡಿದ ಕಿಡಿಗೇಡಿಗಳು: ರೈತ ಮಹಿಳೆಯ ಅಳಲು

**ಚಿಕ್ಕಬಳ್ಳಾಪುರ:** ಜಿಲ್ಲೆಯ ಗೌರಿಬಿದನೂರು ತಾಲ್ಲೂಕಿನ ಉಪ್ಪಾಹಳ್ಳಿ ಸರ್ವೆ ನಂ.194/2 ರಲ್ಲಿ 1 ಎಕರೆ ಜಮೀನಿನಲ್ಲಿ 5 ವರ್ಷಗಳ ಮಹಾಗನಿ ಸಸಿಗಳನ್ನು ರಾತ್ರೋ-ರಾತ್ರಿ ಕಿಡಿಗೇಡಿಗಳು ನಾಶ ಪಡಿಸಿದ್ದು, ಸುಮಾರು 19 ರಿಂದ 20 ಲಕ್ಷ ರೂಗಳ ಮಹಾಗನಿ ಗಿಡಗಳಿಗೆ ಹಾನಿಯಾಗಿದೆ.

ಇನ್ನೂ 4-5 ವರ್ಷದಲ್ಲಿ ಉತ್ತಮ ಮರಗಳಾಗಿ ಇಳುವರಿ ಪಡೆಯಬಹುದಾಗಿತ್ತು ಎಂದು ರೈತ ಮಹಿಳೆ ಮಂಜುಳಾ ಆನಂದ್ ಅಳಲು ತೊಡಗಿಕೊಂಡರು.

ಸ್ವಯಾರ್ಜಿತವಾಗಿ ದುಡಿಮೆ ಮಾಡಿ ಅಲ್ಪಸ್ವಲ್ಪ ಕೂಡಿಟ್ಟುಕೊಂಡ ಹಣದ ಜತೆಗೆ ಮನೆಯಲ್ಲಿ ಇದ್ದ ಆಭರಣಗಳನ್ನು ಗಿರಿವಿ ಇಟ್ಟು, 9ವರ್ಷಗಳ ಹಿಂದೆ ಜಮೀನು ಖರೀದಿಸಿ 6 ವರ್ಷದ ಮಹಾಗಣಿ ಗಿಡಗಳನ್ನು ನೆಟ್ಟು ಪೊಷಿಸುತ್ತ ಬಂದಿದ್ದೇವೆ. ಈ ಹಿಂದಿನ ಜಮೀನಿನ ಮಾಲಿಕ ಈಗ ತಕರಾರು ಮಾಡುತ್ತಿದ್ದಾರೆ. ಪ್ರಕರಣ ಸಂಬಂಧ ನಮ್ಮ ವಿರುದ್ಧ ತೆರೆದ ನ್ಯಾಯಾಲಯದಲ್ಲಿ ಪ್ರಕರಣ ಚಾಲ್ತಿಯಲ್ಲಿರುವಾಗಲೇ ಪ್ರಶ್ನಿತ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿ 700 ಗಿಡಗಳನ್ನು ತಾನೇ ಮಹಾಗನಿ ಗಿಡಗಳನ್ನು ಕೊಡಲಿ, ಮಚ್ಚುಗಳಿಂದ ಸಂಜೆ 8 ಗಂಟೆ ಸರಿಸುಮಾರಿಗೆ 5-6 ಸಂಗಡಿಗರೊಂದಿಗೆ ಕರೆತಂದು ಕತ್ತರಿಸಿ ಹಾಕಿರುವೆ ಎಂದು ಮಂಚೇನಹಳ್ಳಿಯ ಪೋಲಿಸ್ ಠಾಣೆಯಲ್ಲಿ ನಮ್ಮ ವಿರುದ್ಧ ದೂರು ನೀಡಿದ್ದಾರೆ.



ತಾನೇ ನಾಶಪಡಿದ್ದನ್ನು ಬರೆದು ಕೊಂಡ ಮಹಿಳೆ ಮೇಲೆ ಇಲ್ಲಿವರೆಗೆ ಪೊಲೀಸ್ ನವರು ಪ್ರಕರಣ ದಾಖಲಿಸಬೇಕು. ಅರಣ್ಯ ಇಲಾಖೆ ಅವರು ಸಬ್ಸಿಡಿ ದರದಲ್ಲಿ ನೀಡಿದ ಗಿಡಗಳು, ಪೈಪ್ ಲೈನ್, ಡ್ರಿಪ್ ಗಳನ್ನು ಕಡೆದು ನಾಶಮಾಡಿದ್ದು, ನಮಗೆ ಘನ ನ್ಯಾಯಾಲಯ ನಂಬಿಕೆ ಇದೆ. ತಪ್ಪಿತಸ್ಥರಿಂದ ನಷ್ಟ ಪರಿಹಾರದ ಜತೆಗೆ ಆರೋಪಿಗಳ ಮೇಲೆ ಕಾನೂನು ಕ್ರಮವನ್ನು ಸ್ಥಳೀಯ ಪೋಲೀಸ್ ನವರು ಕೊಡಿಸುವ ವಿಶ್ವಾಸವಿದೆ ಎಂದರು.

ಈ ವೇಳೆ ಗಿಡಗಳ ನಾಶ ಪ್ರತ್ಯಕ್ಷದರ್ಶಿ ನಾರಾಯಣಪ್ಪ, ಪಕ್ಕದ ಜಮೀನಿನ ರೈತ ಮೂರ್ತಿ ಇದ್ದರು.

# ಬಿ.ವೈ. ವಿಜಯೇಂದ್ರ ಅವರೇ ರಾಜಕೀಯ ಭಾಷಣ ಬಿಡಿ, ಸ್ಪಷ್ಟೀಕರಣ ನೀಡಿ?: ಸಚಿವ ಕೃಷ್ಣ ಬೈರೇಗೌಡ ಸವಾಲ್

**ಬೆಳಗಾವಿ, ಡಿ,17:** ವಕ್ಫ್ ವಿಚಾರ ಮಾತನಾಡದಂತೆ ಬಿ.ವೈ. ವಿಜಯೇಂದ್ರ ಅವರು ನನ್ನ ಮೇಲೆ ಒತ್ತಡ ಹೇರಿದ್ದರು. ಅಲ್ಲದೆ, 150 ಕೋಟಿ ರೂ ಲಂಚದ ಆಮಿಷವೊಡ್ಡಿದ್ದರು ಎಂದು ಸ್ವತಃ ಬಿಜೆಪಿ ಮುಖಂಡ ಅನ್ವರ್ ಮಾಣಿಪ್ಪಾಡಿ ಆರೋಪಿಸಿದ್ದಾರೆ. ವಿಜಯೇಂದ್ರ ಅವರು ಈ ಸಂಬಂಧ ಸ್ಪಷ್ಟೀಕರಣ ನೀಡಲಿ. ಅದನ್ನು ಬಿಟ್ಟು ರಾಜಕೀಯ ಭಾಷಣ ಮಾಡುತ್ತಾ ಸದನದ ಸಮಯ ವ್ಯರ್ಥ ಮಾಡುವ ಅಗತ್ಯವಿಲ್ಲ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ತಪರಾಕಿ ಹಾಕಿದರು.

ಕಲಾಪ ಆರಂಭವಾಗುತ್ತಿದ್ದಂತೆ, ವಕ್ಫ್ ಹಗರಣಕ್ಕೆ ಸಂಬಂಧಿಸಿ ತಮ್ಮ ಮೇಲಿನ ಆರೋಪಕ್ಕೆ ಸ್ಪಷ್ಟೀಕರಣ ನೀಡಲು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಸಮಯ ಕೋರಿದ್ದರು. ಆದರೆ, ತಮಗೆ ನೀಡಿದ ಸಮಯದಲ್ಲಿ ಅವರು ತಮ್ಮ ಮೇಲಿನ ಆರೋಪಕ್ಕೆ ಸ್ಪಷ್ಟನೆ ನೀಡುವುದರ ಬದಲು ಆಡಳಿತ ಪಕ್ಷದ ವಿರುದ್ಧ ಟೀಕಾಪ್ರಹಾರ ಆರಂಭಿಸಿದ್ದರು.

ಈ ವೇಳೆ ಮಧ್ಯಪ್ರವೇಶಿಸಿದ ಸಚಿವ ಕೃಷ್ಣ ಬೈರೇಗೌಡ ಅವರು, "ವಿಜಯೇಂದ್ರ ಅವರೇ?ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚಿಸಲು ಮೀಸಲಿಟ್ಟಿದ್ದ ಸಮಯಾವಕಾಶವನ್ನು ತಮಗೆ ನೀಲಾಗಿದೆ. ಹೀಗಾಗಿ ವಕ್ಫ್ ವಿಚಾರದಲ್ಲಿ ತಮ್ಮ ಮೇಲಿನ ಆರೋಪದ ಬಗ್ಗೆ ಸ್ಪಷ್ಟೀಕರಣವನ್ನಷ್ಟೇ ನೀಡಿ. ಅದನ್ನು ಬಿಟ್ಟು ರಾಜಕೀಯ ಭಾಷಣ ಮಾಡುತ್ತಾ ಸದನದ ಸಮಯ ಹಾಳು ಮಾಡಬೇಡಿ. ಒಂದು ವೇಳೆ ರಾಜಕೀಯ ಭಾಷಣ ಮಾಡಿಯೇ ಸಿದ್ದ ಎಂಬುದಾದರೆ ನಮಗೂ ಸದನದಲ್ಲಿ ರಾಜಕೀಯ ಭಾಷಣ ಮಾಡಲು ಅವಕಾಶ ನೀಡಿ" ಎಂದು ಸಭಾಧ್ಯಕ್ಷರಲ್ಲಿ ತಮ್ಮ ತಕರಾರನ್ನು ದಾಖಲಿಸಿದರು.

"ರಾಜಕೀಯ ಭಾಷಣ ಮಾಡುವುದಾದರೆ ನಾವೂ ಸಿದ್ದ. ಈ ಸಿಬಿಐ ಹಾಗೂ ಜಾರಿ ನಿರ್ದೇಶನಾಲಯ ಕಾಂಗ್ರೆಸ್ ನಾಯಕರ ಮನೆಗಳ ಮೇಲೆ ಮಾತ್ರ ದಾಳಿ ಮಾಡುತ್ತವೆ, ವಿಚಾರಣೆ



ನಡೆಸುತ್ತವೆ. ಆದರೆ, ಈ ಹಿಂದೆ ಬಿಜೆಪಿ ಸರ್ಕಾರ ಇದ್ದಾಗಲೇ, ಸ್ವತಃ ಬಿಜೆಪಿ ನಾಯಕ ಅನ್ವರ್ ಮಾಡಿಪ್ಪಾಡಿ ಅವರು ವಿಜಯೇಂದ್ರ ಅವರ ವಿರುದ್ಧ ರೂ.150 ಕೋಟಿ ಲಂಚದ ಆರೋಪ ಮಾಡಿದ್ದರು. ಆದರೆ, ಸಿಬಿಐ-ಇಡಿ ಈ ಬಗ್ಗೆ ಯಾಕೆ ತನಿಖೆ ಮಾಡಿಲ್ಲ. ಮೋದಿ ಗೆಳೆಯ ಅದಾನಿ ರೂ.2500 ಕೋಟಿ ಲಂಚ ನೀಡಿದ್ದರು ಅಂತ ಅಮೆರಿಕ ನ್ಯಾಯಾಲಯದಲ್ಲಿ ಸಾಬೀತಾಗಿದೆ. ಈ ಬಗ್ಗೆ ಸಿಬಿಐ-ಇಡಿ ತನಿಖೆ-ವಿಚಾರಣೆ ಏಕಿಲ್ಲ? ಬನ್ನಿ ಈ ಬಗ್ಗೆಯೂ ಚರ್ಚೆ ಮಾಡೋಣ" ಎಂದು ವಿಜಯೇಂದ್ರ ಅವರಿಗೆ ಸವಾಲೆಸೆದರು.

ಮುಂದುವರೆದು, "ಸದನ ಇರುವುದು ಜನರ ಸಮಸ್ಯೆಗಳ ಬಗ್ಗೆ ಮಾತನಾಡುವುದಕ್ಕೇ ವಿನಃ ರಾಜಕೀಯ ಭಾಷಣ ಮಾಡುತ್ತಾ ಕಲಾಪದ ಸಮಯವನ್ನು ಹಾಳು ಮಾಡುವುದಕ್ಕಲ್ಲ. ಶೀಘ್ರದಲ್ಲೇ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ, ಕಳಸ ಬಂಡೂರಿ, ಕೃಷ್ಣ ತುಂಗಭದ್ರಾ ಸೇರಿದಂತೆ ಇಲ್ಲಿನ ಪ್ರಮುಖ ನೀರಾವರಿ ಯೋಜನೆಗಳ ಬಗ್ಗೆ ಚರ್ಚಿಸಬೇಕಿದೆ. ಹೀಗಾಗಿ ದಯವಿಟ್ಟು ಮೊದಲು ನಿಮ್ಮ ಸ್ಪಷ್ಟೀಕರಣ ನೀಡಿ" ಎಂದು ತಾಕೀತು ಮಾಡಿದರು.

# ರಾಜ್ಯ ಪಠ್ಯಕ್ರಮದ 6 ರಿಂದ 10ನೇ ತರಗತಿಯ ಗಣಿತ, ವಿಜ್ಞಾನ ವಿಷಯದಲ್ಲಿ ಸಿಬಿಎಸ್ ಇ ಪಠ್ಯಕ್ರಮ ಅಳವಡಿಕೆ

**ಬೆಳಗಾವಿ:** ಪ್ರಸ್ತುತ ರಾಜ್ಯ ಪಠ್ಯಕ್ರಮದ 6 ರಿಂದ 10ನೇ ತರಗತಿಗಳಿಗೆ ಗಣಿತ ಮತ್ತು ವಿಜ್ಞಾನ ವಿಷಯಗಳಲ್ಲಿ ಸಿಬಿಎಸ್‌ಇ ಪಠ್ಯಕ್ರಮವನ್ನು ಯಥಾವತ್ತಾಗಿ ಅಳವಡಿಸಿಕೊಳ್ಳಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಮಧು ಬಂಗಾರಪ್ಪ ವಿಧಾನಪರಿಸತ್ತಿಗಿಂದು ತಿಳಿಸಿದರು.

ಪ್ರಶ್ನೋತ್ತರ ಕಲಾಪದಲ್ಲಿ ಎಂ.ಎಲ್.ಅನಿಲಕುಮಾರ ಅವರ ಪ್ರಸ್ತಾಪಕ್ಕೆ ಉತ್ತರಿಸಿದ ಅವರು, ಆರ್ ಟಿ ಇ ಕಾಯ್ದೆಯ ಅನುಷ್ಠಾನದಿಂದ 1 ರಿಂದ 8ನೇ ತರಗತಿಯವರೆಗೆ ಪ್ರವೇಶ ಶುಲ್ಕವನ್ನು ಸರ್ಕಾರವೇ ನೀಡುತ್ತಿದ್ದು; 8ನೇ ತರಗತಿಯಿಂದ ದ್ವಿತೀಯ ಪಿ.ಯು.ಸಿ ವರೆಗೂ ಯೋಜನೆಯನ್ನು ವಿಸ್ತರಿಸುವುದರಿಂದ ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿರುವ ಬಡ ಮಕ್ಕಳಿಗೆ ಅನುಕೂಲವಾಗಲಿದ್ದು, ಸರ್ಕಾರವು ಈ ಯೋಜನೆಯನ್ನು ವಿಸ್ತರಿಸುವ ಬಗ್ಗೆ ಚಿಂತಿಸಿದೆಯೇ; ಇಲ್ಲದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಯೋಜನೆಯನ್ನು ವಿಸ್ತರಿಸಲಾಗುವುದು ಎನ್ನುವ ಅನಿಲ್ ಕುಮಾರ ಅವರ ಪ್ರಶ್ನೆಗೆ ಉತ್ತರಿಸಿರುವ ಸಚಿವರು, ಈ ಯೋಜನೆಯನ್ನು ವಿಸ್ತರಿಸುವ ಪ್ರಸ್ತಾವನೆಯು ಇರುವುದಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು.

# ಮಹಿಳೆಯರನ್ನು ಸನ್ಮಾನಿಸುವುದು ಸಾಧನೆಗೆ ಪ್ರೋತ್ಸಾಹ ನೀಡಿದಂತೆ: ಡಾ.ಪ್ರಮೋದಾ ದೇವಿ ಒಡೆಯರ್

**ಬೆಂಗಳೂರು:** ಮಹಿಳಾ ಸಾಧಕೀಯರಿಗೆ ಗೌರವ ಸಲ್ಲಿಸುವ ಮೂಲಕ ಮತ್ತಷ್ಟು ಸಾಧನೆಯತ್ತ ಮುನ್ನುಗ್ಗಲು ಪ್ರೋತ್ಸಾಹ ನೀಡಿದಂತಾಗುತ್ತದೆ ಎಂದು ರಾಜಮಾತೆ ಡಾ.ಪ್ರಮೋದಾ ದೇವಿ ಒಡೆಯರ್ ಹೇಳಿದರು.

ನಟಿ ಸ್ಪೂರ್ತಿ ವಿಶ್ವಾಸ್ ರವರು ಸಿ ಕೃಷ್ಣಯ್ಯ ಚೆಟ್ಟಿ ಗ್ರೂಪ್ ನ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಕರ್ನಾಟಕ ವುಮೆನ್ ಅಚೀವರ್ ಅವಾರ್ಡ್ 2024 ಮತ್ತು ಇಂಡಿಯನ್ ವುಮನ್ ಅಚೀವರ್ ಅವಾರ್ಡ್ 2024 ಸಮಾರಂಭಕ್ಕೆ ರಾಜಮಾತೆ ಡಾ.ಪ್ರಮೋದಾ ದೇವಿ ಒಡೆಯರ್, ಅಶ್ವಿನಿ ಪುನೀತ್ ರಾಜಕುಮಾರ್, ಸಿ.ಕೃಷ್ಣಯ್ಯ ಚೆಟ್ಟಿ ಸಮೂಹದ ನಿರ್ದೇಶಕರಾದ ಡಾ. ಸಿ ವಿನೋದ್ ಹಯಗ್ರೀವ್, ಕಾರ್ಯನಿರ್ವಾಹಕ ನಿರ್ದೇಶಕರಾದ ಸಿ ತ್ರಿವೇಣಿ ವಿನೋದ್ ಚಾಲನೆ ನೀಡಿದರು.



ಈ ವೇಳೆ ರಾಜಮಾತೆ ಡಾ.ಪ್ರಮೋದಾ ದೇವಿ ಒಡೆಯರ್ ಮಾತನಾಡಿ, 21ನೇ ಶತಮಾನದ ಮಹಿಳೆಯರು ಸಾಕಷ್ಟು ಸಾಧಿಸಿದ್ದಾರೆ. ಎಲ್ಲಾ ಮಹಿಳೆಯರಿಗೂ ತಮ್ಮ ಹಕ್ಕುಗಳ ಬಗೆಗಿನ ಅರಿವು ಅತೀ ಅಗತ್ಯ. ಅಂತಹ ಅರಿವು ಮಹಿಳೆಯರಲ್ಲಿ ಆತ್ಮವಿಶ್ವಾಸವನ್ನು ಹುಟ್ಟು ಹಾಕುತ್ತದೆ. ಅಂತಹ ಆತ್ಮವಿಶ್ವಾಸವನ್ನು ಇನ್ನು ಹೆಚ್ಚು ಗೊಳಿಸಲು ಇಂತಹ ಸನ್ಮಾನ ಸಮಾರಂಭ ಸಹಕಾರಿಯಾಗಲಿದೆ ಎಂದರು.

ಡಾ. ಸಿ ವಿನೋದ್ ಹಯಗ್ರೀವ್ ರವರು ಮಾತನಾಡಿ, ವಯಸ್ಸು, ವರ್ಗ, ಜಾತಿ, ಅಥವಾ ಧರ್ಮ ಎಂಬುವ ಪಕ್ಷಪಾತವಿಲ್ಲದೆ ಸಮಾಜಕ್ಕಾಗಿ ತಮ್ಮದೇ ಕೊಡುಗೆ ನೀಡಿದ ಹಾಗೂ ಸಾಧನೆ ಮಾಡಿದ ಪ್ರತಿಯೊಬ್ಬ ಮಹಿಳೆಯರನ್ನು ಗುರುತಿಸಿ ಗೌರವಿಸುವುದು, ಮಹಿಳೆಯರನ್ನು ಸಬಲೀಕರಣ ಗೊಳಿಸುವುದು ಮತ್ತು ಅವರ ಸಾಧನೆಗಳನ್ನು ಗೌರವಿಸುವುದು. ಈ ಪ್ರಶಸ್ತಿ ಸಮಾರಂಭದ ಏಕೈಕ ಗುರಿಯಾಗಿದೆ. ಈ ವರ್ಷ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 60 ಮಹಿಳಾ ಸಾಧಕರನ್ನು ಗುರುತಿಸಿ ಸನ್ಮಾನಿಸಿ ಗೌರವಿಸಲಾಗಿದೆ ಎಂದರು.

# ಭ್ರೂಣ ಹತ್ಯೆ ಸಂಬಂಧಿಸಿದಂತೆ 8 ಪ್ರಕರಣ ದಾಖಲು, 46 ಜನರ ಬಂಧನ ಸಚಿವ ದಿನೇಶ್ ಗುಂಡೂರಾವ್

**ಬೆಳಗಾವಿ:** ರಾಜ್ಯದಲ್ಲಿ 2023-24 ರಿಂದ ಇಲ್ಲಿಯವರೆಗೆ ಭ್ರೂಣಹತ್ಯೆ ಸಂಬಂಧಿಸಿದಂತೆ 8 ಪ್ರಕರಣ ದಾಖಲಿಸಿ 46 ಜನರನ್ನು ಬಂಧಿಸಲಾಗಿದೆ ಎಂದು ಆರೋಗ್ಯ ಮತ್ತು



ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ವಿಧಾನಪರಿಷತ್ತಿಗಿಂದು ತಿಳಿಸಿದರು.

ಪ್ರಶ್ನೋತ್ತರ ಕಲಾಪದಲ್ಲಿ ಜಗದೇವ ಗುತ್ತೇದಾರ ಅವರ ಪ್ರಸ್ತಾಪಕ್ಕೆ ಉತ್ತರಿಸಿದ ಸಚಿವರು, ರಾಜ್ಯದಲ್ಲಿ ಸ್ಕ್ಯಾನಿಂಗ್ ಸೆಂಟರ್ ಮತ್ತು ಆಸ್ಪತ್ರೆಗಳ ಮೇಲೆ ತಪಾಸಣೆಗಳನ್ನು ಜಾಸ್ತಿ ಮಾಡಿರುವುದರಿಂದ ಹೆಚ್ಚಿನ ಸಂಖ್ಯೆಯ ಭ್ರೂಣ ಹತ್ಯೆ ಪ್ರಕರಣಗಳು ಕಂಡುಹಿಡಿಯಲಾಗಿದೆ ಹಾಗೂ ಸರ್ಕಾರಕ್ಕೆ ವರದಿಯಾಗುತ್ತಿದೆ ಎಂದರು.

ರಾಜ್ಯದಲ್ಲಿ ಭ್ರೂಣ ಹತ್ಯೆ ತಡೆಯಲು ಸರ್ಕಾರವು ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯಡಿ ಬರುವ ಎಲ್ಲಾ ಶಾಸನಬದ್ಧ ಸಮಿತಿಗಳನ್ನು ರಾಜ್ಯ ಮತ್ತು ಜಿಲ್ಲೆಗಳಲ್ಲಿ ರಚನೆ ಮಾಡಲಾಗಿದೆ. 2018 ರಿಂದ ರಾಜ್ಯದಲ್ಲಿ 'ಬಾಲಿಕಾ' ಆನ್ಲೈನ್ ಸಾಫ್ಟ್ವೇರ್ ಮುಖಾಂತರ ಎಲ್ಲಾ ಸ್ಕ್ಯಾನಿಂಗ್ ಸೆಂಟರ್ಗಳನ್ನು ಕಡ್ಡಾಯವಾಗಿ ನೋಂದಣಿ ಮತ್ತು ನವೀಕರಣ ನಡೆಸಲಾಗುತ್ತಿದೆ ಎಂದು ಹೇಳಿದರು.

ರಾಜ್ಯ ಮಟ್ಟದಲ್ಲಿ ಶೇ.100 ರಷ್ಟು ಗರ್ಭಿಣಿಯರ ನೊಂದಣಿ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಗ್ರಾಮ ಮಟ್ಟದಲ್ಲಿ ಜನನ ಸಮಯದ ಲಿಂಗಾನುಪಾತದ ದತ್ತಾಂಶಗಳನ್ನು ಮಾಹಿತಿ ತಂತ್ರಜ್ಞಾನದ ಮುಖಾಂತರ ಮೇಲ್ವಿಚಾರಣೆ ಮಾಡಲು ಕಲ್ಪಿಸಲಾಗುತ್ತಿದೆ ಎಂದರು.

ರಾಜ್ಯದಲ್ಲಿ ಇದುವರೆಗೂ ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯನ್ನು ಉಲ್ಲಂಘಿಸಿರುವ ಸ್ಕ್ಯಾನಿಂಗ್ ಸೆಂಟರ್ / ಮಾಲೀಕರು/ ವೈದ್ಯರ ವಿರುದ್ಧ ಒಟ್ಟು 136 ಪ್ರಕರಣಗಳನ್ನು ನ್ಯಾಯಾಲಯದಲ್ಲಿ ದಾವೆ ಹೂಡಲಾಗಿದ್ದು, 74 ಪ್ರಕರಣಗಳು ದಂಡವಿಧಿಸಿ ಖುಲಾಸೆಗೊಂಡಿದ್ದು, 65 ಪ್ರಕರಣಗಳು ನ್ಯಾಯಾಲಯದಲ್ಲಿ ವಿವಿಧ ಹಂತದಲ್ಲಿ ಬಾಕಿಯಿರುತ್ತದೆ ಎಂದು ತಿಳಿಸಿದರು.

ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ಮಾಡುವಂತಹ ಸ್ಕ್ಯಾನಿಂಗ್ ಸೆಂಟರ್ / ಆಸ್ಪತ್ರೆ/ ವೈದ್ಯರು / ದಲ್ಲಾಳಿಗಳು / ಗರ್ಭಿಣಿಯರ ಸಂಬಂಧಿಕರ ವಿರುದ್ಧ ಮಾಹಿತಿ ನೀಡಿ, ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲು ಸಹಕರಿಸುವ ಮಾಹಿತಿದಾರರಿಗೆ ಕರ್ನಾಟಕ ಸರ್ಕಾರದಿಂದ ನೀಡುತ್ತಿದ್ದ ಬಹುಮಾನವನ್ನು ರೂ.50 ಸಾವಿರದಿಂದ ರೂ.1ಲಕ್ಷದವರೆಗೆ ಹೆಚ್ಚಿಸಲಾಗಿದೆ ಎಂದರು.

# ಪತ್ರಕರ್ತರ ಬೃಹತ್ ಪ್ರತಿಭಟನೆ: ರೌಡಿ ಶೀಟರ್ ಜಗದೀಶ್ ಚೌದರಿ ಬಂಧನಕ್ಕೆ ಒತ್ತಾಯ

**ಬೆಂಗಳೂರು:** ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ತಾಲ್ಲೂಕು ಪತ್ರಕರ್ತರನ್ನು ಬಿಜೆಪಿ ತಾಲ್ಲೂಕು ಅಧ್ಯಕ್ಷ ಜಗದೀಶ್ ಚೌದ್ರಿ ಅವಾಚ್ಯ ಶಬ್ದಗಳಿಂದ ನಿಂದಿಸಿ ಧಮ್ಕಿ ಹಾಕಿರುವ ವಿಚಾರವಾಗಿ ನೆಲಮಂಗಲ ತಾಲ್ಲೂಕು ಸ್ವಾಭಿಮಾನಿ ಪತ್ರಕರ್ತರು, ಪ್ರೆಸ್ ಕ್ಲಬ್ ಕೌನ್ಸಿಲ್ ನೇತೃತ್ವದಲ್ಲಿ ನೆಲಮಂಗಲ ತಾಲ್ಲೂಕು ಕಚೇರಿ ಎದುರು ಜಗದೀಶ್ ಚೌದ್ರಿ ವಿರುದ್ಧ ಬೃಹತ್ ಪ್ರತಿಭಟನೆ ನಡೆಸಿ ರೌಡಿ ಶೀಟರ್ ಜಗದೀಶ್ ಚೌದ್ರಿರವರನ್ನು ಗಡಿಪಾರು ಮಾಡುವಂತೆ ಆಗ್ರಹಿಸಿದರು.

ನೆಲಮಂಗಲ ಪತ್ರಕರ್ತರ ಪ್ರತಿಭಟನೆಗೆ ವಕೀಲ್ ಸಾಬ್ ಎಂದೇ ಕ್ಯಾತಿಗಳಿಸಿರುವ ಬಿಗ್ ಬಾಸ್ ಸ್ಪರ್ಧಿ ಲಾಯರ್ ಜಗದೀಶ್ ರವರು ಬೆಂಬಲ ನೀಡಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಈ ವೇಳೆ ಮಾತನಾಡಿದ ಅವರು, ರೌಡಿ ಶೀಟರ್ ಜಗದೀಶ್ ಚೌದ್ರಿ ಹೆದರಿಕೆ ಬೆದರಿಕೆಗೆ ಪತ್ರಕರ್ತರು ಹೆದರಬಾರದು ರೌಡಿ ಶೀಟರ್ ನನ್ನು ಪೊಲೀಸರು ಮೊದಲು ಮಟ್ಟಹಾಕಿ ಪತ್ರಕರ್ತರನ್ನು



ರಕ್ಷಣೆ ಮಾಡಬೇಕು. ನಾನು ಕೂಡ ನಿಮ್ಮ ಜೊತೆ ಇದ್ದೇನೆ. ಪೊಲೀಸರು ಕೂಡಲೇ ಆತನ ವಿರುದ್ಧ ಕ್ರಮ ತೆಗೆದುಕೊಳ್ಳಬೇಕು ಇಲ್ಲದಿದ್ದರೆ ಸರ್ಕಾರಕ್ಕೆ ನಾನು ಒತ್ತಾಯ ಮಾಡುತ್ತೇನೆ ಎಂದು ತಿಳಿಸಿದರು.

ನೆಲಮಂಗಲ ತಾಲ್ಲೂಕು ಪತ್ರಕರ್ತರಿಗೆ ಜಗದೀಶ್ ಚೌದ್ರಿ ಕೆಲ ವರ್ಷಗಳ ಹಿಂದೆ ಜಾಹಿರಾತು ನೀಡಿದ್ದು, ಆ ಹಣವನ್ನು ಫೋನ್ ಪೇ ಮೂಲಕ ನೀಡಿ ಇನ್ನುಳಿದ ಹಣವನ್ನು ನೀಡದೆ ಪತ್ರಕರ್ತರು ಹಣ ಕೇಳಿದ್ರೆ ಬೆದರಿಕೆ ಹಾಕಿ ಪತ್ರಕರ್ತರು ಬ್ಲಾಕ್ ಮೇಲರ್ ಎಂಬಂತೆ ಬಿಂಬಿಸಿದ್ದಾರೆ. 3 ದಿನದ ಹಿಂದೆ ಜಗದೀಶ್ ಚೌದ್ರಿ ವಿರುದ್ಧ ಟಿ.ಬೇಗೂರು ಗ್ರಾಮ ಪಂಚಾಯತ್ ಸದಸ್ಯರೊಬ್ಬರು ಭ್ರಷ್ಟ ಅಧಿಕಾರಿಗಳಿಗೆ ಜಗದೀಶ್ ಚೌದ್ರಿ ಬೆಂಬಲ ನೀಡಬಾರದು ಎಂದು ತಿಳಿಸಿದ್ದು, ಈ ಬಗ್ಗೆ ಸುದ್ದಿ ಮಾಡಿದ ಪತ್ರಕರ್ತರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಸುದ್ದಿ ಮಾಡಿದ ಪತ್ರಕರ್ತರನ್ನು ಬಿಡುವುದಿಲ್ಲ ಎಂದು ಧಮ್ಕಿ ಹಾಕಿದ್ದ. ಈ ಬಗ್ಗೆ ಆಕ್ರೋಶಗೊಂಡ ಪತ್ರಕರ್ತರು ರೌಡಿ ಶೀಟರ್ ಜಗದೀಶ್ ಚೌದ್ರಿ ಗಡಿ ಪಾರಿಗೆ ಆಗ್ರಹಿಸಿ ಪ್ರತಿಭಟನೆ ನಡೆಸಿ ಡಿವೈಎಸ್ಪಿ ಜಗದೀಶ್ ಹಾಗೂ ತಹಸೀಲ್ದಾರ್ ಅಮೃತ್ ಅತ್ರೇಶ್ ರವರಿಗೆ ಪತ್ರಕರ್ತರು ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ವಕೀಲ ಸಾಬ್ ಜಗದೀಶ್, ಪ್ರೆಸ್ ಕ್ಲಬ್ ಕೌನ್ಸಿಲ್ ರಾಜ್ಯಾಧ್ಯಕ್ಷ ರಾಘವೇಂದ್ರ ಆಚಾರ್, ಪ್ರದಾನ ಕಾರ್ಯದರ್ಶಿ ಆಶಾ ಸೀನಪ್ಪ, ರಾಜ್ಯ ಕಾರ್ಯದರ್ಶಿ ಕೊಟ್ರೇಶ್, ಜಿಲ್ಲಾಧ್ಯಕ್ಷ ಮಂಜುನಾಥ್, ತುಮಕೂರು ಜಿಲ್ಲಾ ಗೌರವ ಅಧ್ಯಕ್ಷ ಸುದೀಂದ್ರ, ಬೆಂಗಳೂರು ನಗರ ಅಧ್ಯಕ್ಷ ಬಾನು ಪ್ರಕಾಶ್,ನೆಲಮಂಗಲ ತಾಲ್ಲೂಕು ಅಧ್ಯಕ್ಷ ಗಂಗಾಧರ್, ಪ್ರದಾನ ಕಾರ್ಯದರ್ಶಿ ವಿಜಯ್ ಹೊಸಪಾಳ್ಯ,ಕಾರ್ಯನಿರತ ಪತ್ರಕರ್ತ ಸಂಘದ ಅಧ್ಯಕ್ಷ ಬೂದಿಹಾಳ್ ಕಿಟ್ಟಿ,ಉಪಾಧ್ಯಕ್ಷ ರುದ್ರೇಶ್, ಕಾರ್ಯನಿರತ ಪತ್ರಕರ್ತರ ಸಂಘದ ಹರೀಶ್,ಮಿಲ್ಟ್ರಿ ಮಾಮ, ರಾಜಶೇಖರ್, ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆ ಸಂಘಟನಾ ಕಾರ್ಯದರ್ಶಿ ವೇಣು, ಪತ್ರಕರ್ತರಾದ ಗುರು ಪ್ರಸಾದ್, ದಾಬಸ್ಪೇಟೆ ರಾಜೇಶ್, ಪ್ರದೀಪ್, ಶ್ರೀಧರ್, ಮಾರುತಿ, ರಾಮ್ ಪ್ರಸಾದ್, ರಾಮಚಂದ್ರ ಬಾಬು, ಹೊಸದಿಗಂತ ಬಾಬು, ಕಿಶೋರ್, ಅಲೀಮ್, ನಾಗೇಶ್,ಅಬ್ದುಲ್ ಆಫೀಜ್, ಲಕ್ಷ್ಮಣ್,ಸಿದ್ದರಾಜು, ಪವನ್ ಕುಮಾರ್, ವಂದನಾ, ವರ್ಷ , ಕವಿತಾ, ಉಮೇಶ್ ಪೂಜಾರ್, ಅರುಣ್ ಕುಮಾರ್, ಮೋಹನ್,ಬೆಂಗಳೂರು ಪ್ರಶಾಂತ್, ಸಂಚಾರಿ ಸತ್ಯ ಸಂಪಾದಕ ಶಂಕರ್, ಟೈಮ್ 9 ಜಯರಾಮ್, ಮತ್ತಿತರ ಸ್ವಾಭಿಮಾನಿ ಪತ್ರಕರ್ತರು ಉಪಸ್ಥಿತರಿದ್ದರು.




# ಚಿತ್ರೀಕರಣ ಮುಗಿಸಿದ 'ಸಿತಾರೆ ಜಮೀನ್ ಪರ್': 2025ರಲ್ಲಿ ಬಿಡುಗಡೆ



ಅಮೀರ್ ಖಾನ್ ಅವರ ಮುಂಬರುವ ಚಿತ್ರ 'ಸಿತಾರೆ ಜಮೀನ್ ಪರ್' ಮುಂದಿನ ವರ್ಷದ ಬಹು ನಿರೀಕ್ಷಿತ ಚಿತ್ರಗಳಲ್ಲಿ ಒಂದಾಗಿದೆ. ಆರ್‌ಎಸ್ ಪ್ರಸನ್ನ ನಿರ್ದೇಶಿಸಿದ 2007 ರ ಬ್ಲಾಕ್‌ಬಸ್ಟರ್ 'ತಾರೆ ಜಮೀನ್ ಪರ್'ನ ಸೀಕ್ವೆಲ್ ಇದಾಗಿದೆ. ಪಿಂಕ್ ವಿಲ್ಲಾ ವರದಿಯ ಪ್ರಕಾರ, ಅಮೀರ್ ಖಾನ್ ಈ ಬಹು ನಿರೀಕ್ಷಿತ ಚಿತ್ರದ ಚಿತ್ರೀಕರಣವನ್ನು ಮುಗಿಸಿದ್ದಾರೆ. ಈಗ ಪೋಸ್ಟ್-ಪ್ರೊಡಕ್ಷನ್‌ಗೆ ಹೋಗಲಿದ್ದು ಚಲನಚಿತ್ರವು 2025 ರಲ್ಲಿ ಬಿಡುಗಡೆಯಾಗಲಿದೆ ಎಂದು ತಿಳಿದುಬಂದಿದೆ.

ಅಮೀರ್ ಖಾನ್, ಜೆನಿಲಿಯಾ ದೇಶ್‌ಮುಖ್, ದರ್ಶೀಲ್ ಸಫಾರಿ ಮತ್ತಿತರು ತಾರಾಗಣದಲ್ಲಿದ್ದಾರೆ ಎಂದು ಎನ್‌ಡಿಟಿವಿ ವರದಿಮಾಡಿದೆ.

ಡಿಸೆಂಬರ್ 15 ರಂದು ಮುಂಬೈನ ಫಿಲ್ಮ್ ಸಿಟಿಯಲ್ಲಿ ಚಿತ್ರದ ಅಂತಿಮ ಹಂತದ ಚಿತ್ರೀಕರಣ ನಡೆಯಿತು. ಮಧ್ಯಾಹ್ನ 2 ಗಂಟೆಗೆ ಪ್ರಾರಂಭವಾಗಿ ತಡರಾತ್ರಿಯವರೆಗೆ ನಡೆದ ಶ್ಯೂಟಿಂಗ್‌ನಲ್ಲಿ ಅಮೀರ್ ಕೂಡ ಹಾಜರಿದ್ದರು ಎಂದು ವರದಿಯಾಗಿದೆ.

ಚಲನಚಿತ್ರವು ಫೆಬ್ರವರಿಯಲ್ಲಿ ತೆರೆಗೆ ಬರಲಿದೆ ಎಂದು ಮೂಲಗಳಿಂದ ತಿಳಿದು ಬಂದಿದೆ.

# ಬಾಕ್ಸ್ ಆಫೀಸ್‌ನಲ್ಲಿ 'ಪುಷ್ಪ' ಸದ್ದು: 11 ದಿನಗಳಲ್ಲಿ ರೂ. 1409 ಕೋಟಿ ಗಳಿಕೆ



**ಹೈದರಾಬಾದ್:** ತೆಲುಗು ನಟ ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ ಅಭಿನಯದ ಪುಷ್ಪ-2 ಚಿತ್ರ ಬಿಡುಗಡೆಯಾಗಿ 11 ದಿನಗಳಲ್ಲಿ ರೂ.1409 ಕೋಟಿ ಗಳಿಕೆ ಕಂಡಿದೆ ಎಂದು ಚಿತ್ರತಂಡ ತಿಳಿಸಿದೆ. ಈ ಸಂಬಂಧ ಇನ್‌ಸ್ಟಾಗ್ರಾಮ್‌ನಲ್ಲಿ ಚಿತ್ರ ನಿರ್ಮಾಣ ಸಂಸ್ಥೆ 'ಮೈತ್ರಿ ಮೂವೀಸ್' ಪೋಸ್ಟ್ ಹಂಚಿಕೊಂಡು ಮಾಹಿತಿ ನೀಡಿದೆ. ಸದ್ಯ ಬಾಕ್ಸ್ ಆಫೀಸ್‌ನಲ್ಲಿ ಸದ್ದು ಮಾಡುತ್ತಿರುವ 'ಪುಷ್ಪ-2 ದಿ ರೂಲ್' ಚಿತ್ರ ಬಿಡುಗಡೆಯಾಗಿ ರೂ.1409 ಕೋಟಿ ಗಳಿಸಿದೆ ಎಂದು ನಿರ್ಮಾಣ ಸಂಸ್ಥೆ ತಿಳಿಸಿದೆ. ಪುಷ್ಪ-2 ಅತ್ಯುತ್ತಮ ಪ್ರದರ್ಶನ ಕಾಣುತ್ತಿದ್ದು, ಬುಕ್‌ಮೈಶೋನಲ್ಲಿ ಟಿಕೆಟ್ ಬುಕಿಂಗ್ 10 ಲಕ್ಷ ದಾಟಿದೆ. ನಿಮ್ಮ ಬೆಂಬಲಕ್ಕಾಗಿ ಧನ್ಯವಾದಗಳು' ಎಂದಿದೆ.


ಸುಕುಮಾರ್ ನಿರ್ದೇಶನದ ಪುಷ್ಪ-2 ಚಿತ್ರದಲ್ಲಿ ಅಲ್ಲು ಅರ್ಜುನ್ ಜೊತೆ ರಶ್ಮಿಕಾ ಮಂದಣ್ಣ, ಫಹಾದ್ ಫಾಸಿಲ್, ಜಗಪತಿ ಬಾಬು, ಡಾಲಿ ಧನಂಜಯ ಸೇರಿದಂತೆ ಅನೇಕ ಖ್ಯಾತನಾಮರು ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಡಿ.4ರಂದು ವಿಶ್ವದಾದ್ಯಂತ ಸಿನಿಮಾ ತೆರೆಕಂಡು ಪ್ರದರ್ಶನ ಕಾಣುತ್ತಿದೆ. ಈ ಚಿತ್ರ ತೆಲುಗು, ತಮಿಳು, ಕನ್ನಡ, ಹಿಂದಿ, ಬೆಂಗಾಳಿ, ಮಲಯಾಳ ಭಾಷೆಗಳಲ್ಲಿ ತೆರೆ ಕಂಡಿದೆ. ಪುಷ್ಪ-1 ಚಿತ್ರವು 2021ರ ಡಿಸೆಂಬರ್‌ನಲ್ಲಿ ತೆರೆಕಂಡು ಸಾವಿರ ಕೋಟಿ ಕ್ಲಬ್ ಸೇರಿತ್ತು.

# ದೇವಸ್ಥಾನದ ಗರ್ಭಗೃಹಕ್ಕೆ ಪ್ರವೇಶ ನಿರಾಕರಣೆ: ವರದಿ ಅಲ್ಲಗಳೆದ ಇಳಯರಾಜ

**ಚೆನ್ನೈ:** ತಮಿಳುನಾಡಿನ ಶ್ರೀವಿಲ್ಲಿಪುತೂರ್‌ನಲ್ಲಿ ಇರುವ ಪ್ರಸಿದ್ಧ ಆಂಡಾಳ್ ದೇವಸ್ಥಾನದ ಗರ್ಭಗುಡಿಗೆ ತಮಗೆ ಪ್ರವೇಶ ನೀಡಲಿಲ್ಲ ಎಂಬ ಮಾಧ್ಯಮ ವರದಿಗಳನ್ನು ಖ್ಯಾತ ಸಂಗೀತ ನಿರ್ದೇಶಕ ಇಳಯರಾಜ ನಿರಾಕರಿಸಿದ್ದಾರೆ.

ನಡೆಯದೇ ಇರುವ ಘಟನೆಯ ಬಗ್ಗೆ ಸುಳ್ಳು ಸುದ್ದಿ ಹರಡಲಾಗುತ್ತಿದೆ ಎಂದು ಇಳಯರಾಜ ಹೇಳಿದ್ದಾರೆ. ಆದರೆ ಹೆಚ್ಚಿನ ವಿವರಗಳನ್ನು ಅವರು ನೀಡಿಲ್ಲ. 'ಯಾವುದೇ ಸಮಯದಲ್ಲಿ ಅಥವಾ ಸ್ಥಳದಲ್ಲಿ ಆತ್ಮಗೌರವದ ಜೊತೆ ರಾಜಿ ಮಾಡಿಕೊಳ್ಳುವ ವ್ಯಕ್ತಿ ನಾನಲ್ಲ' ಎಂದು ಅವರು ಹೇಳಿದ್ದಾರೆ.

ವಿರುಧನಗರದಲ್ಲಿ ಇರುವ ದೇವಸ್ಥಾನದಲ್ಲಿ ನಡೆದ ಸಂಗೀತ ಕಾರ್ಯಕ್ರಮದಲ್ಲಿ ಇಳಯರಾಜ ಅವರು ಡಿಸೆಂಬರ್ 15ರಂದು ಭಾಗಿಯಾಗಿದ್ದರು ಎಂದು ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ ಇಲಾಖೆಯ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.



ಈ ಭೇಟಿಯ ಸಂದರ್ಭದಲ್ಲಿ ಇಳಯರಾಜ ಅವರು ಶ್ರೀ ತ್ರಿಬಂದಿ ಶ್ರೀಮನ್ನಾರಾಯಣ ರಾಮಾನುಜ ಚಿನ್ನ ಜೀಯರ್ (ಶ್ರೀವೈಷ್ಣವ ಸಂಪ್ರದಾಯದ ಗುರುಗಳು) ಅವರ ಜೊತೆ ಮಾತುಕತೆಯಲ್ಲಿದ್ದರು, ದೇವಸ್ಥಾನದ ಗರ್ಭಗೃಹದ ಮುಂದೆ ಇರುವ ಅರ್ಥ ಮಂಟಪವನ್ನು ಪ್ರವೇಶಿಸುವವರಿದ್ದರು. ಆಗ, ಉತ್ಸವ ಮೂರ್ತಿಗಳನ್ನು ಇರಿಸುವ ಅರ್ಥ ಮಂಟಪವನ್ನು ಪ್ರವೇಶಿಸಲು ದೇವಸ್ಥಾನದ ಅರ್ಚಕರು ಮತ್ತು ಜೀಯರ್‌ಗಳಿಗೆ ಮಾತ್ರ ಅನುಮತಿ ಇದೆ ಎಂದು ಅವರಿಗೆ ಹೇಳಲಾಯಿತು ಎಂದು ಅಧಿಕಾರಿ ವಿವರಿಸಿದ್ದಾರೆ.

'ಮಂಟಪದ ಪ್ರವೇಶದ್ವಾರದಲ್ಲಿ ತಕ್ಷಣ ನಿಂತ ಇಳಯರಾಜ ಅವರು ಅಲ್ಲಿಂದಲೇ ಪ್ರಾರ್ಥನೆ ಸಲ್ಲಿಸಿದರು. ಅವರು ಬಂದಿದ್ದಾಗ ದೇವಸ್ಥಾನದಿಂದ ನೀಡುವ ಎಲ್ಲ ಗೌರವ ನೀಡಲಾಗಿದೆ' ಎಂದು ಆ ಅಧಿಕಾರಿ ಹೇಳಿದ್ದಾರೆ.


ಇಳಯರಾಜ ಅವರ ಭೇಟಿಯ ಸುತ್ತಲಿನ ವಿವಾದದ ಬಗ್ಗೆ ಪ್ರಶ್ನಿಸಿದಾಗ ಅಧಿಕಾರಿಯು, ಅರ್ಥ ಮಂಟಪದ ಮೆಟ್ಟಿಲು ಏರಲು ಇಳಯರಾಜ ಮುಂದಾದಾಗ, ಮಂಟಪದ ಎದುರಿನಿಂದ ದರ್ಶನ ಪಡೆಯಬಹುದು ಎಂಬುದನ್ನು ಅವರಿಗೆ ತಿಳಿಸಲಾಯಿತು ಎಂದು ವಿವರಿಸಿದ್ದಾರೆ.

'ಅದಕ್ಕೆ ಅವರು ಒಪ್ಪಿ, ದರ್ಶನ ಪಡೆದರು. ದೇವಸ್ಥಾನದಲ್ಲಿನ ಪದ್ಧತಿಯ ಪ್ರಕಾರ, ಅರ್ಚಕರಿಗೆ ಮತ್ತು ಮಠಾಧೀಶರಿಗೆ ಮಾತ್ರ ದೇವಸ್ಥಾನದ ಗರ್ಭಗೃಹದ ಒಳಗೆ ಹೋಗಲು ಅವಕಾಶ ಇದೆ' ಎಂದು ಇಲಾಖೆಯ ಜಂಟಿ ಆಯುಕ್ತರು ವಿರುಧನಗರದ ಜಿಲ್ಲಾಧಿಕಾರಿಗೆ ರವಾನಿಸಿರುವ ಸಂದೇಶದಲ್ಲಿ ಹೇಳಿದ್ದಾರೆ.

'ತಮಿಳುನಾಡಿನ ದೇವಸ್ಥಾನಗಳಲ್ಲಿ ಸಾಮಾನ್ಯವಾಗಿ, ಅಲ್ಲಿ ನಿತ್ಯಪೂಜೆ ಹಾಗೂ ಅಭಿಷೇಕ ನಡೆಸುವ ಅರ್ಚಕರಿಗೆ ಮಾತ್ರ ಗರ್ಭಗೃಹ ಪ್ರವೇಶಕ್ಕೆ ಅವಕಾಶ ಇದೆ. ಬ್ರಾಹ್ಮಣರು ಸೇರಿದಂತೆ ಭಕ್ತರಿಗೆ ಅಲ್ಲಿಗೆ ಪ್ರವೇಶಿಸಲು ಅವಕಾಶ ಇಲ್ಲ' ಎಂದು ಚೆನ್ನೈನ ಸ್ವಯಂಸೇವಾ ಸಂಘಟನೆ ಜನಕಲ್ಯಾಣದ ಕಾರ್ಯದರ್ಶಿ ವಿ. ಸುಬ್ರಮಣಿಯನ್ ಹೇಳಿದರು.

ಇಳಯರಾಜ ಅವರು ಅರ್ಥ ಮಂಟಪದಿಂದ ಹೊರಬರುತ್ತಿರುವುದು ಹಾಗೂ ಅರ್ಚಕರು ಗರ್ಭಗೃಹವನ್ನು ಪ್ರವೇಶಿಸುತ್ತಿರುವ ವಿಡಿಯೊ ಒಂದು ಸಾಮಾಜಿಕ ಜಾಲತಾಣಗಳ ಮೂಲಕ ಹರಿದಾಡಿದ್ದು, ಇಳಯರಾಜ ಅವರು ದಲಿತರು ಎಂಬ ಕಾರಣಕ್ಕೆ ಅವರಿಗೆ ಪ್ರವೇಶ ನಿರಾಕರಿಸಲಾಗಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿತ್ತು.

# 'ಕಣ್ಣಾ ಮುಚ್ಚೆ...'ಯಲ್ಲಿ ರಾಘವೇಂದ್ರ ರಾಜ್‌ಕುಮಾರ್



ಚಿತ್ರದ ಹಾಡುಗಳೇ ಶೀರ್ಷಿಕೆಯಾಗಿಸಿಕೊಂಡ ಸಾಕಷ್ಟು ಚಿತ್ರಗಳು ಬಂದಿವೆ. ಇದೇ ಸಾಲಿಗೆ 'ಕಣ್ಣಾ ಮುಚ್ಚೆ ಕಾಡೇ ಗೂಡೇ' ಹೊಸ ಸೇರ್ಪಡೆ. ರಾಘವೇಂದ್ರ ರಾಜ್‌ಕುಮಾರ್ ಪ್ರಮುಖ ಪಾತ್ರದಲ್ಲಿರುವ ಚಿತ್ರ ಶೀಘ್ರದಲ್ಲಿ ತೆರೆಗೆ ಬರಲಿದೆ.

ಡಾರ್ಲಿಂಗ್ ಪ್ರೊಡಕ್ಷನ್ಸ್ ಅಡಿಯಲ್ಲಿ ಅನಿತಾ ವೀರೇಶ್‌ಕುಮಾರ್ ನಿರ್ಮಾಣ ಮಾಡಿದ್ದು, ಹಲವು ನಿರ್ದೇಶಕರ ಬಳಿ ಸಹಾಯಕರಾಗಿ ಅನುಭವ ಪಡೆದುಕೊಂಡಿರುವ ನಟರಾಜ್ ಕೃಷ್ಣೇಗೌಡ ಚಿತ್ರಕ್ಕೆ ಕಥೆ ಬರೆದು ಆ್ಯಕ್ಷನ್ ಕಟ್ ಹೇಳಿದ್ದಾರೆ.

'ಸಿನಿಮಾವು ಒಂದು ಕೊಲೆಯ ಸುತ್ತ ನಡೆಯುತ್ತದೆ. ಅದನ್ನು ಕಂಡು ಹಿಡಿಯಲು ಖಾಸಗಿ, ಸರ್ಕಾರಿ ಪಡೆ ಮುಂದೆ ಬರುತ್ತದೆ. ಇದರ ಮಧ್ಯೆ ಹುಡುಗಿಯೊಬ್ಬಳು ಸಮಸ್ಯೆಯಲ್ಲಿ ಸಿಲುಕಿಕೊಳ್ಳುತ್ತಾಳೆ. ಅಂತಿಮವಾಗಿ ಅಪರಾಧಿ ಸಿಗುತ್ತಾನಾ ಆಕೆಯು ಕಷ್ಟದಿಂದ ಹೊರ ಬರುತ್ತಾಳಾ ಎಂಬುದನ್ನು ಸಸ್ಪೆನ್ಸ್, ಥ್ರಿಲ್ಲರ್ ರೀತಿಯಲ್ಲಿ ತೋರಿಸಿದ್ದೇವೆ. ಸೆನ್ಸಾರ್ ಮುಗಿದಿದ್ದು ಜನವರಿಯಲ್ಲಿ ಚಿತ್ರ ಬಿಡುಗಡೆ ಆಲೋಚನೆಯಿದೆ' ಎಂದರು ನಿರ್ದೇಶಕರು.

ರಾಘವೇಂದ್ರ ರಾಜ್‌ಕುಮಾರ್ ನಿವೃತ್ತ ವೈದ್ಯರಾಗಿ ಕಾಣಿಸಿಕೊಂಡಿದ್ದಾರೆ. ಅಥರ್ವ ಪ್ರಕಾಶ್ ನಾಯಕ. ತುಳು ಚಿತ್ರದಲ್ಲಿ ನಟಿಸಿದ್ದ ಪ್ರಾರ್ಥನಾ ನಾಯಕಿ. ಸಂತೋಷ್-ವಿಜಿತ್‌ಕೃಷ್ಣ ಸಂಗೀತ, ದೀಪಕ್‌ಕುಮಾರ್. ಜೆ.ಕೆ ಛಾಯಾಚಿತ್ರಗ್ರಹಣವಿದೆ. ಮಂಗಳೂರು, ಬೆಂಗಳೂರು ಮುಂತಾದೆಡೆ ಚಿತ್ರೀಕರಣಗೊಂಡಿದೆ.

# ಶೂಟಿಂಗ್‌ನಲ್ಲಿ ಅವಘಡ, ಗಂಭೀರವಾಗಿ ಗಾಯಗೊಂಡ ನಟ ಪ್ರಭಾಸ್!




ಪಾನ್ ಇಂಡಿಯಾ ನಟ ಪ್ರಭಾಸ್ ಅವರು ಶೂಟಿಂಗ್ ವೇಳೆ ಅವಘಡಕ್ಕೀಡಾಗಿದ್ದಾರೆ. ತನ್ನ ಮುಂಬರುವ ಹಾರರ್-ಕಾಮಿಡಿ ದಿ ರಾಜಾ ಸಾಬ್‌ಗಾಗಿ ಆಕ್ಷನ್ ಸೀಕ್ವೆನ್ಸ್‌ಗಾಗಿ ಚಿತ್ರೀಕರಣ ಮಾಡುವಾಗ ಗಂಭೀರ ಗಾಯ ಮಾಡಿಕೊಂಡಿದ್ದು,ಪರಿಣಾಮ ಅವರಿಗೆ ಚಿಕಿತ್ಸೆ ಮತ್ತು ವಿಶ್ರಾಂತಿ ಅಗತ್ಯವಿದೆ. ಹೀಗಾಗಿ ಜಪಾನ್‌ನಲ್ಲಿ ಮುಂದಿನ ತಿಂಗಳ 3ನೇ ತಾರೀಕು ಬಿಡುಗಡೆಯಾಗಲಿರುವ ಕಲ್ಕಿ ಚಿತ್ರದ ಪ್ರಚಾರಕ್ಕೆ ಹಾಜರಾಗುವುದಿಲ್ಲ ಎಂದು ಅಲ್ಲಿನ ಫ್ಯಾನ್‌ಗಳಲ್ಲಿ ಕ್ಷಮೆ ಕೇಳಿ ಸ್ಪಷ್ಟಪಡಿಸಿದ್ದಾರೆ.

ಮುಂಬರುವ ಹಾರರ್-ಕಾಮಿಡಿ ಮಾರುತಿ ನಿರ್ದೇಶನದ ದಿ ರಾಜಾ ಸಾಬ್‌ಗಾಗಿ ಆಕ್ಷನ್ ಸೀಕ್ವೆನ್ಸ್ ಗಾಗಿ ಶೂಟಿಂಗ್‌ನಲ್ಲಿರುವಾಗ ಅವಘಡ ಸಂಭವಿಸಿ ಪಾದ ಉಳುಕಿದೆ. ಗಾಯ ಗಂಭೀರವಾಗಿರುವ ಕಾರಣ ಪ್ರಯಾಣಿಸಲು ಮತ್ತು ಕಲ್ಕಿ ಚಿತ್ರದ ಪ್ರಚಾರಗಳಲ್ಲಿ ಭಾಗವಹಿಸಲು ಸಾಧ್ಯವಾಗುತ್ತಿಲ್ಲ. ನಿರ್ದೇಶಕ ನಾಗ್ ಅಶ್ವಿನ್ ಸೇರಿದಂತೆ ಇತರರು ಪ್ರಚಾರ ಚಟುವಟಿಕೆಗಳಿಗೆ ಇರಲಿದ್ದಾರೆ.

ಪ್ರಭಾಸ್ ಸಹಿತ ದೀಪಿಕಾ ಪಡುಕೋಣೆ, ಕಮಲ್ ಹಾಸನ್ ಮತ್ತು ಅಮಿತಾಬ್ ಬಚ್ಚನ್ ಪ್ರಮುಖ ಪಾತ್ರಗಳಲ್ಲಿ ನಟಿಸಿರುವ ಕಲ್ಕಿ 2898 ೦ಆ ಅನ್ನು ವೈಜಯಂತಿ ಮೂವೀಸ್ ನಿರ್ಮಿಸಿದೆ. ಕಬಾಟಾ ಕೀಜೊ ಒಡೆತನದ ವಿತರಣಾ ಕಂಪನಿಯಾದ ಟ್ವಿನ್ ಸಹಯೋಗದೊಂದಿಗೆ ಜಪಾನ್‌ನಲ್ಲಿ ಚಿತ್ರವನ್ನು ಬಿಡುಗಡೆ ಮಾಡಲು ಪ್ರೊಡಕ್ಷನ್ ಹೌಸ್ ಯೋಜನೆ ಹಾಕಿಕೊಂಡಿದೆ. ಟ್ವಿನ್ ಈ ವರ್ಷದ ಆರಂಭದಲ್ಲಿ ಎಸ್‌ಎಸ್ ರಾಜಮೌಳಿ ಅವರ ಆರ್‌ಆರ್‌ಆರ್ ಅನ್ನು ಸಹ ಬಿಡುಗಡೆ ಮಾಡಿತ್ತು.

ಈ ಸಿನಿಮಾಗಳ ಜೊತೆಗೆ ಪ್ರಭಾಸ್ ಕಲ್ಕಿ 2, ಸ್ಪಿರಿಟ್, ಸಲಾರ್ 2 ಸಿನಿಮಾಗಳನ್ನು ಮಾಡುತ್ತಿದ್ದಾರೆ. ಇದರೊಂದಿಗೆ ಹನು ರಾಘವಪುಡಿ ನಿರ್ದೇಶನದಲ್ಲಿ ಕೂಡ ಸಿನೆಮಾವೊಂದನ್ನು ಮಾಡುತ್ತಿದ್ದಾರೆ.

# ತರುಣ್ ಸುಧೀರ್ ಹೊಸ ಸಿನಿಮಾ




ಶರಣ್ ನಟನೆಯ 'ಗುರು ಶಿಷ್ಯರು' ಚಿತ್ರ ನಿರ್ಮಿಸಿದ್ದ ನಿರ್ಮಾಪಕ, ನಿರ್ದೇಶಕ ತರುಣ್ ಕಿಶೋರ್ ಸುಧೀರ್ ತಮ್ಮ ನಿರ್ಮಾಣ ಸಂಸ್ಥೆಯಿಂದ ಹೊಸ ಸಿನಿಮಾ ಘೋಷಿಸಿದ್ದಾರೆ. ಇತ್ತೀಚೆಗಷ್ಟೇ ಚಿತ್ರದ ಪೋಸ್ಟರ್ ಬಿಡುಗಡೆಗೊಂಡಿದ್ದು, ಶೀರ್ಷಿಕೆಯನ್ನು ಬಹಿರಂಗಪಡಿಸಿಲ್ಲ.

'ಏಳುಮಲೆಯ ಮಡಿಲಲ್ಲಿ ಎದೆ ನಡುಗಿಸಿದ ಪ್ರೇಮಕಥೆ' ಎಂಬ ಅಡಿಬರಹ ಚಿತ್ರಕ್ಕಿದೆ. 'ಕರ್ನಾಟಕ-ತಮಿಳುನಾಡು ಗಡಿಯಲ್ಲಿ ನಡೆಯುವ ಕಥೆ. ಡಿ.25ರಂದು ಚಿತ್ರೀಕರಣ ಪ್ರಾರಂಭವಾಗಲಿದೆ. ನೈಜ ಪ್ರೇಮಕಥೆಯನ್ನು ಆಧರಿಸಿದ ಚಿತ್ರವಿದು. ಎಲ್ಲರಿಗೂ ಗೊತ್ತಿರುವ ಕಥೆ. ಆದರೆ ಅದನ್ನು ಬೇರೆ ರೀತಿ ಹೇಳಿದ್ದೇವೆ. ಗಟ್ಟಿಯಾದ ಪ್ರೇಮಕಥೆಯಿದೆ. ಬಹುತೇಕ ಹೊಸಬರಿಂದ ಕೂಡಿದ ತಂಡ' ಎನ್ನುತ್ತಾರೆ ತರುಣ್ ಸುಧೀರ್.

ದ್ವೇಷದ ಬೆಂಕಿಯಿಂದ ಹೊತ್ತಿ ಉರಿದ ಕಾರನ್ನು ಪೋಸ್ಟರ್‌ನಲ್ಲಿ ತೋರಿಸಲಾಗಿದೆ. ಪ್ರೇಮದ ಜೊತೆಗಿನ ಹೋರಾಟದ ಸುಳಿವನ್ನು ಪೋಸ್ಟರ್ ನೀಡುತ್ತಿದೆ. ಈ ಚಿತ್ರವನ್ನು ತರುಣ್ ಸುಧೀರ್ ಜೊತೆಗೆ ಅಟ್ಲಾಂಟ ನಾಗೇಂದ್ರ ನಿರ್ಮಿಸುತ್ತಿದ್ದಾರೆ. ಪುನೀತ್ ರಂಗಸ್ವಾಮಿ ಅವರ ರಚನೆ ಹಾಗೂ ನಿರ್ದೇಶನದ ಚಿತ್ರವಿದು. ಸುಧಾಕರ್ ಎಸ್. ರಾಜ್ ಅವರ ಛಾಯಾಚಿತ್ರಗ್ರಹಣ, ಕೆ.ಎಂ.ಪ್ರಕಾಶ್ ಸಂಕಲನ ಚಿತ್ರಕ್ಕಿದೆ.

# ನಾನ್ಯಾಕೆ ಆ 2 ಸಿನಿಮಾಗಳ ಬಗ್ಗೆ ಮಾತನಾಡಲಿ; ವಿಜಯ್ ಸೇತುಪತಿ ಫುಲ್ ಗರಂ



ನಟ ವಿಜಯ್ ಸೇತುಪತಿ ಆ ಎರಡು ಸಿನಿಮಾಗಳ ಬಗ್ಗೆ ಮಾತನಾಡಲು ನಿರಾಕರಿಸಿದ್ದಾರೆ. ವಿಡುತಲೈ 2 ಪ್ರಮೋಷನ್‌ನಲ್ಲಿ ಬ್ಯುಸಿಯಾಗಿರೋ ವಿಜಯ್ ಸೇತುಪತಿ, ನಾನು ಯಾಕೆ ಬೇರೆ ಸಿನಿಮಾಗಳ ಬಗ್ಗೆ ಮಾತನಾಡಬೇಕು ಎಂದಿದ್ದಾರೆ. ವೆಟ್ರಿಮಾರನ್ ನಿರ್ದೇಶನದ, ಸೂರಿ, ವಿಜಯ್ ಸೇತುಪತಿ, ಮಂಜು ವಾರಿಯರ್ ನಟನೆಯ ವಿಡುತಲೈ 2 ಬಿಡುಗಡೆಗೆ ಸಿದ್ಧವಾಗಿದೆ.ಈ ಸಿನಿಮಾಗೆ ಇಳಯರಾಜ ಸಂಗೀತ ನೀಡಿದ್ದಾರೆ. ಮೊದಲ ಭಾಗದ ಯಶಸ್ಸಿನಿಂದ ಎರಡನೇ ಭಾಗದ ಮೇಲೆ ನಿರೀಕ್ಷೆ ಹೆಚ್ಚಾಗಿದೆ. ಕ್ರೈಮ್ ಥ್ರಿಲ್ಲರ್ ಕಥಾಹಂದರದ ಈ ಚಿತ್ರ ಡಿಸೆಂಬರ್ 20 ರಂದು ಬಿಡುಗಡೆಯಾಗಲಿದೆ. ಹೀಗಾಗಿ ಚಿತ್ರತಂಡ ಪ್ರಚಾರದಲ್ಲಿ ಬ್ಯುಸಿಯಾಗಿದೆ.

ಒಂದು ಕಾರ್ಯಕ್ರಮದಲ್ಲಿ ವಿಜಯ್ ಸೇತುಪತಿ ಭಾಗವಹಿಸಿದ್ದರು. GOAT ಮತ್ತು ಕಂಗುವಾ ಸಿನಿಮಾಗಳು ಹಿಟ್ ಆಗಿಲ್ಲ, ಈ ಎರಡು ಸಿನಿಮಾಗಳ ಬಗ್ಗೆ ನಿಮ್ಮ ಅಭಿಪ್ರಾಯ ಏನು ಅಂತ ಕೇಳಲಾಯಿತು.

ನಾನು ಪ್ರಮೋಷನ್‌ಗೆ ಬಂದಿದ್ದೀನಿ, ಇದರ ಬಗ್ಗೆ ಕೇಳೋ ಅಗತ್ಯ ಇಲ್ಲ. ನನಗೂ, ನನ್ನ ಸಿನಿಮಾಗೂ ಇದೇ ಆಗಿದೆ. ನನ್ನನ್ನೂ ಟ್ರೋಲ್ ಮಾಡಿದ್ದಾರೆ. ಸಿನಿಮಾದಲ್ಲಿ ಗೆಲುವು, ಸೋಲು ಸಹಜ ಅಂತ ಹೇಳಿದ್ದಾರೆ.

ಪ್ರಕಾಶಕ- ಸಂಪಾದಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು-560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ಕಸಬ(ಹೋಬಳಿ), ನೆಲಮಂಗಲ, ಬೆಂಗಳೂರು-562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934. VOLUME-16 / ISSUE-26. Email-mussanje2010@gmail.com, Phone: 9448074878